ಸಂಪುಟ: ೦೬/ ಸಂಚಿಕೆ: ೨೩೦/ಶನಿವಾರ ದಿನಾಂಕ: ೦೯-೧೧-೨೦೨೪/ ಪುಟ: ೬/ ಬೆಲೆ ೨-೦೦

ಸತ್ಯಕ್ಕೆ ಕಿರಣ ಸುಳ್ಳಿಗೆ ಕಿಡಿ

ಕಛೇರಿ ದೂರವಾಣಿ ಸಂಖ್ಯೆ 0831-3564491

# ಬೆಳಗಿನ ಸೂರ್ಯೋದಯ

ಕನ್ನಡ ಪ್ರಾದೇಶಿಕ ದಿನಪತ್ರಿಕೆ

ಬೆಳಗಾವಿ ■ ಧಾರವಾಡ ■ ಬಾಗಲಕೋಟ ■ ವಿಜಯಪುರ ■ ಗದಗ ■ ಕೊಪ್ಪಳ ■ ಹಾವೇರಿ ■ ಕಾರವಾರ

ಸಂಪಾದಕರು : ಗುರುರಾಜ ಈರಪ್ಪಾ. ಕದಮ, Editor : GURURAJ IRAPPA. KADAM Cell : 9620099959

Volume : 06/ ISSUE : 230 / SATURDAY Date : 09-11-2024/ RNI No. KARKAN/2019/77640/ Postal Reg No. PMG/KA/NK/BM/135/21-24 / POST AT Vantamury Colony Post Office / email : belaginasuryodaya@gmail.com / Page : 6 / Rs. 2.00

### ॥ ಸಪ್ತಋಷಿವಾಣಿ ॥

ಬದುಕಿನಲ್ಲಿ ಮನುಷ್ಯನಿಗೆ ದಡ್ಡತನ ಇದ್ದರು ಪರವಾಗಿಲ್ಲ, ಆದರೆ ಸಣ್ಣತನ ಇರಬಾರದು.. ಯಾಕೆಂದರೆ ಮನುಷ್ಯ ಗೌರವ ಕಳೆದುನಕೊಳ್ಳುವುದು ದಡ್ಡತನದಿಂದಲ್ಲ, ಸಣ್ಣತನದಿಂದ.

ಧಾರ್ಮಿಕ ಮಾರ್ಗದರ್ಶಕ
ಸಂತೋಷ ಆಚಾರ್ಯ, ಉಡುಪಿ

## ಪುರುಷರು ಮಹಿಳೆಯರ ಬಟ್ಟೆ ಅಳತೆ ತೆಗೆದುಕೊಳ್ಳುವಂತಿಲ್ಲ

### ಜಿಮ್‌ನಲ್ಲಿ ತರಬೇತಿ ನೀಡುವಂತಿಲ್ಲ: ಉತ್ತರ ಪ್ರದೇಶ ಮಹಿಳಾ ಆಯೋಗ

ಉತ್ತರ ಪ್ರದೇಶ: ರಾಜ್ಯ ಮಹಿಳಾ ಆಯೋಗವು ಮಹಿಳೆಯರನ್ನು 'ಕೆಟ್ಟ ಸ್ಪರ್ಶ'ದಿಂದ ರಕ್ಷಿಸಲು ಮತ್ತು ಪುರುಷರ ಕೆಟ್ಟ ಉದ್ದೇಶಗಳನ್ನು ತಡೆಯಲು ಪ್ರಸ್ತಾವನೆಯನ್ನು ನೀಡಿದೆ. ಇದರ ಪ್ರಕಾರ, ಪುರುಷ ಟೈಲರ್ ಮಹಿಳೆಯರ ಬಟ್ಟೆಗಳನ್ನು ಹೊಲಿಯಬಾರದು ಅಥವಾ ಅವರ ಕೂದಲನ್ನು ಕತ್ತರಿಸಬಾರದು. ಈ ಪ್ರಸ್ತಾವನೆಯನ್ನು ರಾಜ್ಯ ಮಹಿಳಾ ಆಯೋಗದ ಅಧ್ಯಕ್ಷೆ ಬಬಿತಾ ಚೌಹಾಣ್ ಮಂಡಿಸಿದ್ದು, ಸಭೆಯಲ್ಲಿದ್ದ ಇತರ ಸದಸ್ಯರು ಇದಕ್ಕೆ ಬೆಂಬಲ ಸೂಚಿಸಿದ್ದಾರೆ.

ಅಕ್ಟೋಬರ್ 28ರಂದು ನಡೆದ ಮಹಿಳಾ ಆಯೋಗದ ಸಭೆಯ ನಂತರ, ಪುರುಷರಿಗೆ ಮಹಿಳೆಯರ ಅಳತೆ ತೆಗೆದುಕೊಳ್ಳಲು ಅವಕಾಶ ನೀಡಬಾರದು ಮತ್ತು ಅಂಗಡಿಗಳಲ್ಲಿ ಸಿಸಿಟಿವಿ ಕ್ಯಾಮೆರಾಗಳನ್ನು ಅಳವಡಿಸುವುದು ಸೇರಿದಂತೆ ಹಲವು ಸಲಹೆಗಳನ್ನು ನೀಡಿತ್ತು. ಸದ್ಯ ಇದು ಕೇವಲ ಪ್ರಸ್ತಾವನೆಯಾಗಿದ್ದು, ನಂತರ ಮಹಿಳಾ ಆಯೋಗ ಈ ಬಗ್ಗೆ ಕಾನೂನು ರೂಪಿಸುವಂತೆ ರಾಜ್ಯ ಸರ್ಕಾರಕ್ಕೆ ಮನವಿ ಮಾಡಲಿದೆ. ಮಹಿಳಾ ಆಯೋಗದ ನಿಯಮಗಳನ್ನು ಪಾಲಿಸುವುದು ಜಿಲ್ಲಾಡಳಿತದ ಜವಾಬ್ದಾರಿಯಾಗಿದೆ.

ಈ ನಿಟ್ಟಿನಲ್ಲಿ ಯುಪಿ ಮಹಿಳಾ ಆಯೋಗದ ಸದಸ್ಯೆ ಹಿಮಾನಿ ಅಗರ್ವಾಲ್ ಮಾತನಾಡಿದ್ದು, ಇತ್ತೀಚೆಗೆ ನಡೆದ ಮಹಿಳಾ ಆಯೋಗದ ಸಭೆಯಲ್ಲಿ, ಮಹಿಳೆಯರು ಧರಿಸುವ ಬಟ್ಟೆಗಳನ್ನು ಮಹಿಳಾ ಟೈಲರ್‌ಗಳು ಮಾತ್ರ ಅಳತೆ ತೆಗೆದುಕೊಳ್ಳಬೇಕು ಎಂಬ ಪ್ರಸ್ತಾಪವನ್ನು ಮಾಡಲಾಗಿದೆ. ಅಲ್ಲದೇ ಅಂಗಡಿಯಲ್ಲಿ ಸಿಸಿಟಿವಿ ಅಳವಡಿಸಬೇಕು. ಮಹಿಳಾ ಕ್ಷೌರಿಕರು ಮಾತ್ರ ಸಲೂನ್‌ನಲ್ಲಿ ಮಹಿಳಾ ಗ್ರಾಹಕರನ್ನು ನೋಡಿಕೊಳ್ಳಬೇಕು ಎಂದು ನಾವು ಹೇಳಿದ್ದೇವೆ. ಏಕೆಂದರೆ, ಈ ರೀತಿಯ ವೃತ್ತಿಯಲ್ಲಿ ತೊಡಗಿರುವ ಪುರುಷರಿಂದಾಗಿ ಮಹಿಳೆಯರು ಕಿರುಕುಳಕ್ಕೊಳಗಾಗುತ್ತಾರೆ ಎಂದು ನಾವು ನಂಬುತ್ತೇವೆ. ಪುರುಷರು ತಪ್ಪಾಗಿ ವರ್ತಿಸಲು ಪ್ರಯತ್ನಿಸುತ್ತಾರೆ. ಕೆಲವು ಪುರುಷರ ಉದ್ದೇಶಗಳು ಸಹ ಒಳ್ಳೆಯದಲ್ಲ. ಆದರೆ, ಎಲ್ಲ ಪುರುಷರಿಗೂ ಕೆಟ್ಟ ಉದ್ದೇಶವಿರುತ್ತದೆ ಎಂದಲ್ಲ ಎಂದು ಹೇಳಿದರು.

ರಾಜ್ಯ ಮಹಿಳಾ ಆಯೋಗದ ಅಧ್ಯಕ್ಷೆ ಬಬಿತಾ ಚೌಹಾಣ್, ಮಹಿಳೆಯರು ಹೋಗುವ ಜಿಮ್‌ಗಳಲ್ಲಿ ಮಹಿಳಾ ತರಬೇತುದಾರರು ಇರಬೇಕು. ಎಲ್ಲಾ ಜಿಮ್ ತರಬೇತುದಾರರ ಪೊಲೀಸ್ ಪರಿಶೀಲನೆ ನಡೆಸಬೇಕು. ಒಬ್ಬ ಮಹಿಳೆ ಪುರುಷ ತರಬೇತುದಾರರಿಂದ ತರಬೇತಿ ಪಡೆಯಲು ಬಯಸಿದರೆ, ಅವಳು ಅದನ್ನು ಲಿಖಿತವಾಗಿ ನೀಡಬೇಕು. ಏಕೆಂದರೆ, ಜಿಮ್‌ಗೆ ಹೋಗುವ ಮಹಿಳೆಯರು ಮತ್ತು ಬಾಲಕಿಯರ ಶೋಷಣೆಯ ದೂರುಗಳು ಮಹಿಳಾ ಆಯೋಗಕ್ಕೆ ನಿರಂತರವಾಗಿ ಬರುತ್ತಿದ್ದು, ನಂತರ ಈ ನಿರ್ಧಾರ ತೆಗೆದುಕೊಳ್ಳಲಾಗಿದೆ. ಅಷ್ಟೇ ಅಲ್ಲ, ಹೆಣ್ಣು ಮಕ್ಕಳು ಪ್ರಯಾಣಿಸುವ ಶಾಲಾ ಬಸ್‌ಗಳಲ್ಲಿ ಮಹಿಳಾ ಉದ್ಯೋಗಿಗಳಿರಬೇಕು. ಸದ್ಯ ಮಹಿಳಾ ಆಯೋಗ ಎಲ್ಲ ಜಿಲ್ಲೆಗಳಿಗೂ ಈ ಸಂಬಂಧ ಆದೇಶ ನೀಡಿದೆ. ಒಪ್ಪದವರ ವಿರುದ್ಧ ಕಾನೂನು ಕ್ರಮ ಜರುಗಿಸಲಾಗುವುದು ಎಂದರು.

## ಬಹುಗ್ರಾಮ ಕುಡಿಯುವ ನೀರು ಸರಬರಾಜು ಕಾಮಗಾರಿಗಳ ತ್ವರಿತಗತಿಯಲ್ಲಿ ಪೂರ್ಣ ಗೊಳಿಸಿ : ಜಿಪಂ ಸಿಇಓ ರಾಹುಲ್ ಶಿಂಧೆ




**ಬೆಳಗಾವಿ** : ಬಹುಗ್ರಾಮ ಕುಡಿಯುವ ನೀರು ಸರಬರಾಜು ಕಾಮಗಾರಿಗಳನ್ನು ತ್ವರಿತಗತಿಯಲ್ಲಿ ಪೂರ್ಣಗೊಳಿಸಿ ಈ ಮೊದಲಿನ ಪ್ರಗತಿ ಪರಿಶೀಲನಾ ಸಭೆಯಲ್ಲಿ ತಿಳಿಸಿದಂತೆ, ಬಹುಗ್ರಾಮ ಕುಡಿಯುವ ನೀರು ಸರಬರಾಜು ಕಾಮಗಾರಿಗಳ ಪ್ರಗತಿ ಉತ್ತಮ ರೀತಿಯಲ್ಲಿ ನಡೆಯುತ್ತಿದ್ದು, ಬೆಳಗಾವಿ ವಿಭಾಗದಲ್ಲಿ 4 ಕಾಮಗಾರಿಗಳು ಹಾಗೂ ಚಿಕ್ಕೋಡಿ ವಿಭಾಗಗಳಲ್ಲಿ 8 ಕಾಮಗಾರಿಗಳಿದ್ದು, ಈ ಕಾಮಗಾರಿಯ ಪ್ರಕ್ರಿಯೆಗಗಳಲ್ಲಿ ಏನಾದರು ಸಮಸ್ಯೆ ಬಂದಲ್ಲಿ, ಅವುಗಳನ್ನು ವಿವಿಧ ಇಲಾಖೆಗಳ ಸಹಯೋಗದೊಂದಿಗೆ ಬಗೆಹರಿಸಿಕೊಂಡು ಗ್ರಾಮಗಳಲ್ಲಿ ಕುಡಿಯುವ ನೀರಿನ ಕಾಮಗಾರಿಗೆ ಯಾವುದೇ ರೀತಿ ತೊಂದರೆಯಾಗದಂತೆ ಕ್ರಮವಹಿಸಬೇಕು ಎಂದು ಅಧಿಕಾರಿಗಳಿಗೆ ಜಿಪಂ ಸಿಇಒ ರಾಹುಲ್ ಶಿಂಧೆ ಸೂಚನೆ ನೀಡಿದರು. ನಗರದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಶುಕ್ರವಾರ ಬೆಳಗಾವಿ ಹಾಗೂ ಚಿಕ್ಕೋಡಿ ವಿಭಾಗದ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಜಿಪಂ ಸಿಇಒ ರಾಹುಲ್ ಶಿಂಧೆ ಇವರು ಬೆಳಗಾವಿ ವಿಭಾಗದಲ್ಲಿ ಅವರಾದಿ, ದೇಗಾಂವ, ಯರಝರ್ವಿ ಮತ್ತು ಹಾಲಬಾಂವಿ ಹಾಗೂ ಚಿಕ್ಕೋಡಿ ವಿಭಾಗದಲ್ಲಿ ಸತ್ತಿ, ಕೆಂಪಟ್ಟಿ, ಬಿರನಾಳ, ಮೆಳವಂಕಿ, ಅಪ್ಪಾಚಿವಾಡಿ, ದಡ್ಡಿ, ಪಾಚ್ಚಾಪೂರ ಮತ್ತು ಚಿಕ್ಕೂಡ ಬಹುಗ್ರಾಮ ಕುಡಿಯುವ ನೀರು ಯೋಜನೆಯ ಕಾಮಗಾರಿಗಳ ಪ್ರಗತಿ ಪರಿಶೀಲನೆ ಮಾಡಿ, ಇನ್ನೂ ಹೆಚ್ಚಿನ ಆರ್ಥಿಕ ಮತ್ತು ಭೌತಿಕವಾಗಿ ಪ್ರಗತಿ ಸಾಧಿಸಲು ಕಾರ್ಯಪಾಲಕ ಅಭಿಯಂತರರು ಬೆಳಗಾವಿ/ಚಿಕ್ಕೋಡಿ ವಿಭಾಗದವರಿಗೆ ನಿರ್ದೇಶನ ನೀಡಿದರು. ಸದರಿ ಕಾಮಗಾರಿಗಳಲ್ಲಿ ಇತರೆ ಇಲಾಖೆಗಳ (ಅರಣ್ಯ, ರಾಷ್ಟ್ರೀಯ ಹೆದ್ದಾರಿ, ಲೋಕೋಪಯೋಗಿ, ನೀರಾವರಿ) ಅನುಮೋದನೆಗಳ ಕುರಿತು ಚರ್ಚಿಸಿ ಸಭೆಯಿಂದಲೇ ಸಂಬಂದಪಟ್ಟ ಅಧಿಕಾರಿಗಳಿಗೆ ದೂರವಾಣಿ ಮುಖಾಂತರ ಸಂಪರ್ಕಿಸಿ ತ್ವರಿತವಾಗಿ ಅನುಮೋದನೆ ನೀಡುವಂತೆ ಕೋರಿದರು. ಚಿಕ್ಕೋಡಿ ವಿಭಾಗದ ಅಪ್ಪಾಚಿವಾಡಿ, ಕೆಂಪಟ್ಟಿ ಬಹುಗ್ರಾಮ ಕುಡಿಯುವ ನೀರು ಸರಬರಾಜು ಯೋಜನೆಯ ಕಾಮಗಾರಿಗಳನ್ನು ನಿಗದಿತ ಸಮಯದಲ್ಲಿ ವಿನ್ಯಾಸ ಅನುಮೋದನೆ ತೆಗೆದುಕೊಂಡು ತ್ವರಿತಗತಿಯಲ್ಲಿ ಕಾಮಗಾರಿಗಳನ್ನು ಪೂರ್ಣಗೊಳಿಸದೆ ಇದ್ದ ಸಂದರ್ಭದಲ್ಲಿ ಅಂತಹ ಟೆಂಡರ ಗಳನ್ನು ರಿಸ್ಕ್ & ಕಾಸ್ಟ್ ಆಧಾರದ ಮೇಲೆ ರದ್ದುಗೊಳಿಸಲಾಗುವುದೆಂದು ಗುತ್ತಿಗೆದಾರರಿಗೆ ಮಾನ್ಯರು ಎಚ್ಚರಿಕೆ ನೀಡಿದರು.

ಈ ಸಂದರ್ಭದಲ್ಲಿ ಯೋಜನಾ ನಿರ್ದೇಶಕ ರವಿ ಬಂಗಾರೆಪ್ಪನ್ನವರ ಜಿಪಂ ಬೆಳಗಾವಿ, ಕಾರ್ಯಪಾಲಕ ಅಭಿಯಂತರರು ಶಶಿಕಾಂತ ನಾಯಕ ಬೆಳಗಾವಿ ವಿಭಾಗ, ಕಾರ್ಯಪಾಲಕ ಅಭಿಯಂತರರು ಪಾಂಡುರಂಗ ರಾವ್ ಚಿಕ್ಕೋಡಿ ವಿಭಾಗ, ಕಾರ್ಯಪಾಕ ಅಭಿಯಂತರರು ಎಸ್.ಬಿ.ಕೋಳಿ(ಪಂಚಾಯತರಾಜ್) ಬೆಳಗಾವಿ ವಿಭಾಗ, ಕಾರ್ಯಪಾಲಕ ಅಭಿಯಂತರರು ಪ್ರವೀಣ ಮಠಪತಿ (ಪಂಚಾಯತರಾಜ್) ಚಿಕ್ಕೋಡಿ ವಿಭಾಗ, ಕಾರ್ಯಪಾಲಕ ಅಭಿಯಂತರರು ಹೆಸ್ಕಾಂ, ಕಾರ್ಯಪಾಲಕ ಅಭಿಯಂತರರು ಕೆ.ಆರ್.ಡಿ.ಸಿ.ಎಲ್, ಕಾರ್ಯಪಾಲಕ ಅಭಿಯಂತರರು ಪಿ.ಎಮ್.ಜಿ.ಎಸ್.ವಾಯ್, ಉಪ ಅರಣ್ಯ ಸಂರಕ್ಷಣಾ ಅಧಿಕಾರಿಗಳು ಪ್ರಾದೇಶಿಕ ವಿಭಾಗ ಬೆಳಗಾವಿ/ಗೋಕಾಕ, ಕಾರ್ಯಪಾಲಕ ಅಭಿಯಂತರರು ಲೋಕೋಪಯೋಗಿ ಇಲಾಖೆ ಬೆಳಗಾವಿ/ಚಿಕ್ಕೋಡಿ, ಸಹಾಯಕ ಅಭಿಯಂತರರು ಬೆಳಗಾವಿ ವಿಭಾಗ, ನೈರುತ್ಯ ರೈಲು ವಲಯ ಬೆಳಗಾವಿ,ಎಲ್ಲ ತಾಲೂಕಿನ ಕಾರ್ಯನಿರ್ವಾಹಕ ಅಧಿಕಾರಿಗಳು ಮತ್ತು ಸಹಾಯಕ ಕಾರ್ಯಪಾಲಕ ಅಭಿಯಂತರರು ಬೆಳಗಾವಿ/ಚಿಕ್ಕೋಡಿ ಹಾಗೂ ಬಹುಗ್ರಾಮ ಕುಡಿಯುವ ನೀರು ಯೋಜನೆಯ ಕಾಮಗಾರಿಗಳ ಗುತ್ತಿಗೆದಾರರು, ವಿನ್ಯಾಸ ಸಮಾಲೋಚಕರು ಹಾಗೂ ಪಿ.ಎಮ್.ಸಿ ಯವರು ಉಪಸ್ಥಿತರಿದ್ದರು.

## ನಿತ್ಯ ಪ್ರಯಾಣಿಕರ ಕರೆದೊಯ್ಯಲು ಕಂಡಕ್ಟರ್ ಸಾಹಸ

**ಮಲ್ಲಿಕಾರ್ಜುನ ತುಂಗಳ**

ರಬಕವಿ-ಬನಹಟ್ಟಿ,ನ8- ಶಕ್ತಿ ಯೋಜನೆ ಪರಿಣಾಮ ನಾರಿಯರೇ ಬಸ್ ನಿಲ್ದಾಣದಲ್ಲಿ ತುಂಬಿದ್ದಾರೆ. ಪ್ರಯಾಣಿಕರು ಕಿಟಕಿಯಲ್ಲಿ ನುಸುಳಿ, ಚಾಲಕನ ಬಾಗಿಲಿನಿಂದ ಏರಿ ಸೀಟಿಗಾಗಿ ನಾನಾ ಬಗೆಯ ಹರಸಾಹಸ ಮಾಡಿರುವದನ್ನು ಕಂಡಿದ್ದೀರಿ, ಕೇಳಿದ್ದೀರಿ. ಇಲ್ಲೊಬ್ಬ ಕಂಡಕ್ಟರ್ ಕಳೆದೊಂದು ವರ್ಷದಿಂದ ರಬಕವಿ-ಬನಹಟ್ಟಿ ಬಸ್ ನಿಲ್ದಾಣ ಬಂತೆಂದರೆ ವಿಚಿತ್ರ ರೀತಿಯ ಸಾಹಸ ಇಂದಿಗೂ ಪ್ರಸ್ತುತವಾಗಿದೆ.

ದಿನಂಪ್ರತಿ ರಬಕವಿ-ಬನಹಟ್ಟಿಗೆ ಬೆಳಿಗ್ಗೆ 8-30 ಗಂಟೆಗೆ ಆಗಮಿಸುವ ಮುಗಳಖೋಡ-ಔರಾದ ಬಸ್ ಜನರಿಂದ ಗಿಜುಗುಡುತ್ತದೆ. ಪ್ರತಿ ದಿನ ಜಮಖಂಡಿ ಕಡೆಗೆ ತೆರಳಲು ಶಾಲಾ-ಕಾಲೇಜು ಹಾಗು ನೌಕರರದಾರರ ಸಮಯಕ್ಕನುಗುಣವಾಗಿ ಆಗಮಿಸುವ ಈ ಬಸ್‌ನಲ್ಲಿ ನೂರಕ್ಕೂ ಅಧಿಕ ಜನರು ದಿನಂಪ್ರತಿ ಸಂಚಾರ ಸಾಮಾನ್ಯವಾಗಿದೆ.

ಘೂಳಪ್ಪ ಎಂಬುವ ಕಂಡಕ್ಟರ್ ಬಸ್ ನಿಲ್ದಾಣದಲ್ಲಿನ ಪ್ರಯಾಣಿಕರನ್ನು ಹತ್ತಿಸಿಕೊಂಡು ತೆರಳಲು ಒಳಗಿದ್ದ ಪ್ರಯಾಣಿಕರನ್ನು ಮುಂದೆ ಸರಿಸುವದೇ ಒಂದು ದೊಡ್ಡ ಕಾಯಕವಾಗಿದ್ದು, ಬಸ್‌ನ ಗಾಲಿಗಳ ಮೇಲೆ ನಿಂತು ಕಿಟಕಿಯಿಂದ ಜೋರಾಗಿ ಕೂಗುತ್ತ 'ಮುಂದೆ ಸರಿದು ನಿಲ್ಲಿ ಇನ್ನೂ ಪ್ರಯಾಣಿಕರಿದ್ದಾರೆ' ಎಂಬ ಸಂದೇಶ ನೀಡುತ್ತ ಪ್ರತಿದಿನ ಅಷ್ಟೊಂದು ಪ್ರಯಾಣಿಕರನ್ನು ಕರೆದೊಯ್ಯುವದು ರೂಢಿಯಾಗಿದೆ.



ಒಟ್ಟಾರೆ ಕಂಡಕ್ಟರ್ ಈ ರೀತಿ ಪ್ರಯಾಣಿಕರ ಕಾಳಜಿಯೊಂದಿಗೆ ದಿನಂಪ್ರತಿ ಆತನ ಸರ್ಕಸ್ ಸ್ಥಳೀಯರಿಗೆ ಸಾಮಾನ್ಯವಾಗಿಬಿಟ್ಟಿದೆ.

ಬಸ್ ಸಂಚರಿಸಲು ಮನವಿ: ಈ ಸಂದರ್ಭದಲ್ಲಿ ಲೋಕಲ್ ಬಸ್ ಒಂದನ್ನು ಜಮಖಂಡಿ ಕಡೆಗೆ ಸಂಚರಿಸುವಂತೆ ಅನುಕೂಲ ಮಾಡಬೇಕೆಂದು ಪ್ರಯಾಣಿಕರು ಮನವಿ ಮಾಡಿದ್ದಾರೆ. ಆ ಸಮಯದಲ್ಲಿ ಯಾವದೇ ಬಸ್‌ಗಳಿಲ್ಲದ ಕಾರಣ ಒಂದೇ ಬಸ್‌ನಲ್ಲಿ ನೂರಕ್ಕೂ ಅಧಿಕ ಜನರು ಪ್ರಯಾಣಿಸುವ ಅನಿವಾರ್ಯತೆಯಿದ್ದು, ಮತ್ತೊಂದು ಬಸ್ ಕಲ್ಪಿಸಿದ್ದಲ್ಲಿ ಶಾಲಾ-ಕಾಲೇಜು ಹಾಗು ನೌಕರದಾರರಿಗೆ ಅನುಕೂಲವಾಗುತ್ತದೆ ಎಂದು ಸ್ಥಳೀಯರು ಒತ್ತಾಯಿಸಿದ್ದಾರೆ.

## ಮಹಿಳೆಯರ ಸಬಲೀಕರಣವೇ ಕಾಂಗ್ರೆಸ್ ಪಕ್ಷದ ಗುರಿ : ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್



**ಶಿಗ್ಗಾಂವಿ** : ಮಹಿಳೆಯರ ಸಬಲೀಕರಣವೇ ಕಾಂಗ್ರೆಸ್ ಪಕ್ಷದ ಗುರಿಯಾಗಿದ್ದು, ಇದಕ್ಕಾಗಿ ಹಲವಾರು ಯೋಜನೆಗಳನ್ನು ಜಾರಿಗೆ ತರಲಾಗಿದೆ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಹೇಳಿದ್ದಾರೆ.

ಶುಕ್ರವಾರ ಶಿಗ್ಗಾಂವಿ-ಸವಣೂರು ವಿಧಾನಸಭಾ ಕ್ಷೇತ್ರದ ಉಪ ಚುನಾವಣೆ ಹಿನ್ನೆಲೆಯಲ್ಲಿ ಕಾಂಗ್ರೆಸ್ ಅಭ್ಯರ್ಥಿ ಯಾಸೀರ್ ಖಾನ್ ಪಠಾಣ್ ಪರ ಮೂಕಬಸರೀಕಟ್ಟಿ ಗ್ರಾಮದಲ್ಲಿ ಮತಯಾಚಿಸಿದ ಅವರು, ಕಾಂಗ್ರೆಸ್ ಅಭ್ಯರ್ಥಿಯನ್ನು ಬೆಂಬಲಿಸಬೇಕು ಎಂದು ಮನವಿ ಮಾಡಿದರು.

ಮನೆ ಮನೆಯಲ್ಲಿ ದೀಪ ಹಚ್ಚಲು ಹೆಣ್ಣುಮಕ್ಕಳು ಬೇಕು. ಹೆಣ್ಣು ಸಂಸಾರದ ಕಣ್ಣು. ಮನೆಯ ಹೆಣ್ಣು ಮಕ್ಕಳು ಸ್ವಾವಲಂಬಿ ಆಗಬೇಕು ಎಂಬುದೇ ಕಾಂಗ್ರೆಸ್ ಪಕ್ಷದ ಗುರಿ. ಇದಕ್ಕಾಗಿ ಸಿದ್ದರಾಮಯ್ಯ ನೇತೃತ್ವದ ಕಾಂಗ್ರೆಸ್ ಸರಕಾರ ಮಹಿಳೆಯರಿಗಾಗಿಯೇ ಪಂಚ ಗ್ಯಾರಂಟಿ ಯೋಜನೆಗಳನ್ನು ಜಾರಿಗೆ ತಂದಿದೆ ಎಂದು ಅವರು ಹೇಳಿದರು.

ಜಾತಿ, ಧರ್ಮ ಎಂದು ಕಾಂಗ್ರೆಸ್ ಪಕ್ಷ ಹೊಡೆದಾಡುವುದಿಲ್ಲ. ಶ್ರೀಮಂತರನ್ನು ಶ್ರೀಮಂತರನ್ನಾಗಿ ಮಾಡುವುದು, ಬಡವರನ್ನು ಬಡವರನ್ನಾಗಿಯೇ ಮಾಡುವುದು ಬಿಜೆಪಿಯ ಗುರಿ. ದೇಶಕ್ಕಾಗಿ ಕಾಂಗ್ರೆಸ್ ಪಕ್ಷದ ಹಲವಾರು ನಾಯಕರು ಪ್ರಾಣ ತ್ಯಾಗ ಮಾಡಿದ್ದಾರೆ ಎಂದು ಲಕ್ಷ್ಮೀ ಹೆಬ್ಬಾಳ್ಕರ್ ಹೇಳಿದರು.

ಕಳೆದ ಚುನಾವಣೆಯಲ್ಲಿ ಯಾಸೀರ್ ಖಾನ್ ಪಠಾಣ್ ಸೋತರೂ ಕ್ಷೇತ್ರದಲ್ಲಿ ಜನರ ಸೇವೆ ಮಾಡುತ್ತಿದ್ದಾರೆ. ಸಾಮಾನ್ಯ ಕಾರ್ಯಕರ್ತನಿಗೆ ಕಾಂಗ್ರೆಸ್ ಟಿಕೆಟ್ ನೀಡಿದೆ. ಈ ಬಾರಿ ಕಾಂಗ್ರೆಸ್ ಅಭ್ಯರ್ಥಿಯನ್ನು ಗೆಲ್ಲಿಸಿಕೊಡಬೇಕು ಎಂದು ಅವರು ಮನವಿ ಮಾಡಿದರು.

ರಾಜ್ಯ ಸರಕಾರ ಪ್ರತಿ ಕುಟುಂಬಕ್ಕೆ ಹೆಚ್ಚು ಅನುಕೂಲ ಮಾಡಿಕೊಟ್ಟಿದೆ. ಪ್ರತಿ ಮನೆಗೂ ಕಾಂಗ್ರೆಸ್ ಅನುಕೂಲ ಮಾಡಿದೆ. ಮಹಿಳೆಯರು ಸಂಘಟನೆ ಆಗಲು ಕಾಂಗ್ರೆಸ್ ಪಕ್ಷವೇ ಕಾರಣ. ಎಸ್.ಎಂ.ಕೃಷ್ಣ ಅವರ ಕಾಲದಲ್ಲಿ ಸ್ತ್ರೀ ಶಕ್ತಿ ಯೋಜನೆ ಜಾರಿಗೆ ತಂದರೆ, ಈಗ ಗೃಹಲಕ್ಷ್ಮೀ ಯೋಜನೆಯನ್ನು ಜಾರಿಗೆ ತರಲಾಗಿದೆ ಎಂದು ಲಕ್ಷ್ಮೀ ಹೆಬ್ಬಾಳ್ಕರ್ ಮಾಹಿತಿ ನೀಡಿದರು.

ಈ ಸಂದರ್ಭದಲ್ಲಿ ಶಾಸಕ ವಿನಯ್ ಕುಲಕರ್ಣಿ, ಮುಖಂಡರಾದ ಶಿವಾನಂದ್ ಚಿಂತೂರು, ಶಿವಪ್ಪ ಮುಧೋಳ, ಮೆಹಬೂಬ್ ನದಾಫ್, ಮಹೇಶ್ ಅಪ್ಪಣ್ಣವರ್, ಶಂಬು ಆಜೂರ್, ಶಿವಾನಂದ ಬಾಗೂರ್, ಶಂಕರ್, ರಾಜು ಸೇರಿದಂತೆ ಹಲವರು ಉಪಸ್ಥಿತರಿದ್ದರು.

### ಭಕ್ತ ಕನಕದಾಸ ಜಯಂತಿ; ಪೂರ್ವ ಸಿದ್ಧತಾ ಸಭೆ

## ಅರ್ಥಪೂರ್ಣ ಆಚರಣೆಗೆ ಅಪರ ಜಿಲ್ಲಾಧಿಕಾರಿ ಸೂಚನೆ



ಬೆಳಗಾವಿ, : ಸರ್ಕಾರದ ನಿರ್ದೇಶನದಂತೆ ಭಕ್ತ ಕನಕದಾಸರ ಜಯಂತಿ ಕಾರ್ಯಕ್ರಮವನ್ನು ನವಂಬರ್ 18 ರಂದು ನಗರದ ಕುಮಾರ ಗಂಧರ್ವ ಕಲಾ ಮಂದಿರದಲ್ಲಿ ಸಂಭ್ರಮದಿಂದ ಆಚರಿಸಲಾಗುವುದು ಎಂದು ಅಪರ ಜಿಲ್ಲಾಧಿಕಾರಿ ವಿಜಯಕುಮಾರ ಹೊನಕೇರಿ ಅವರು ತಿಳಿಸಿದರು.

ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ಶುಕ್ರವಾರ (ನ.08) ನಡೆದ ಭಕ್ತ ಕನಕದಾಸ ಜಯಂತಿ ಆಚರಣೆಯ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ನಗರದ ಕೋಟೆ ಕೆರೆಯಿಂದ ಕುಮಾರ ಗಂಧರ್ವ ಕಲಾ ಮಂದಿರದವೆಗೆ ಮೆರವಣಿಗೆ ಕಾರ್ಯಕ್ರಮ ನಡೆಯಲಿದೆ. ಮೆರವಣಿಗೆಯಲ್ಲಿ ವಿವಿಧ ಕಲಾ ತಂಡಗಳು ಪಾಲ್ಗೊಳ್ಳಲಿವೆ.

ಅದೇ ರೀತಿಯಲ್ಲಿ ವೇದಿಕೆ ಕಾರ್ಯಕ್ರಮದಲ್ಲಿ ಉಪನ್ಯಾಸ ನೀಡಲು ಸಂಪನ್ಮೂಲ ವ್ಯಕ್ತಿಯನ್ನು ನೇಮಿಸಲಾಗುವುದು ಎಂದು ತಿಳಿಸಿದರು.

ಸರ್ಕಾರಿ ಕಚೇರಿಗಳಲ್ಲಿ ಭಕ್ತ ಕನಕದಾಸರ ಭಾವಚಿತ್ರ ಪೂಜೆ ಸಲ್ಲಿಸಲು ನಿರ್ದೇಶನ ನೀಡಲಾಗುವುದು. ಜಯಂತಿ ಕಾರ್ಯಕ್ರಮದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಸಾರ್ವಜನಿಕರು ಪಾಲ್ಗೊಳ್ಳಲಿದ್ದು, ಮೆರವಣಿಗೆ ಸಂದರ್ಭದಲ್ಲಿ ಟ್ರಾಫಿಕ್ ಸಮಸ್ಯೆಯಾಗದಂತೆ ಸೂಕ್ತ ಪೊಲೀಸ್ ಬಂದಬಸ್ತ್ ಒದಗಿಸಲಾಗುವುದು.

ಮಹಾನಗರ ಪಾಲಿಕೆ ವತಿಯಿಂದ ನಗರದ ಪ್ರಮುಖ ವೃತ್ತಗಳಲ್ಲಿ ಫಲಕಗಳ ಅಳವಡಿಕೆಗೆ ಹಾಗೂ ಜಯಂತಿ ಕಾರ್ಯಕ್ರಮದಲ್ಲಿ ಕುಡಿಯುವ ನೀರು ಪೂರೈಸಬೇಕು ಎಂದು ಅಧಿಕಾರಿಗಳಿಗೆ ತಿಳಿಸಿದರು.

ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಉಪ ನಿರ್ದೇಶಕಿ ವಿದ್ಯಾವತಿ ಭಜಂತ್ರಿ, ಸಮಾಜದ ಮುಖಂಡರಾದ ಅಶೋಕ ಸದಲಗೆ, ಯಲ್ಲಪ್ಪ ಕುಂಬಾರ, ಎಲ್.ಜೆ ಪೂಜಾರಿ, ಎಸ್.ಎಂ ಕಾಡಮ್ಮನವ, ರೇಖಾ ದಳವಾಯಿ, ಎಸ್. ವಾಯ್ ಮರಕುಂಬಿ ಹಾಗೂ ವಿವಿಧ ಇಲಾಖೆಯ ಅಧಿಕಾರಿಗಳು, ಮತ್ತಿತರರು ಸಭೆಯಲ್ಲಿ ಉಪಸ್ಥಿತರಿದ್ದರು.

### ಆರೋಗ್ಯ ಇಲಾಖೆ ವತಿಯಿಂದ ಸೊಳ್ಳೆಗಳು ನಿಯಂತ್ರಣ ಬಗ್ಗೆ ಜಾಗೃತಿ- ಲಾರ್ವ ಸಮೀಕ್ಷೆಗೆ ಚಾಲನೆ

## ಮನೆಯ ಸುತ್ತಮುತ್ತ ಸ್ವಚ್ಚತೆ ಕಾಪಾಡಿದರೆ ಸಾಂಕ್ರಾಮಿಕ ರೋಗಗಳನ್ನು ನಿಯಂತ್ರಿಸಬಹುದು

ಮುದ್ದೇಬಿಹಾಳ: ಸಾರ್ವಜನಿಕರು ಆರೋಗ್ಯ ಇಲಾಖೆ ಸಿಬ್ಬಂದಿ ಮನೆ ಮನೆಗೆ ಬೇಟಿಗೆ ಬಂದಾಗ ಸಹಕರಿಸಬೇಕು ಎಂದು ಪುರಸಭೆ ಅಧ್ಯಕ್ಷ ಮಹಿಬೂಬು ಗೊಳಸಂಗಿ ಹೇಳಿದರು.

ಪಟ್ಟಣದ ಹೊರಪೇಟೆ ನಗರದಲ್ಲಿ ಶುಕ್ರವಾರದ ಲಾರ್ವ ಸಮೀಕ್ಷೆಗೆ ಚಾಲನೆ ನೀಡಿ ಅವರು ಮಾತನಾಡಿ ನೀರಿನ ತಾಣಗಳನ್ನು ಭದ್ರವಾಗಿ ಮುಚ್ಚಿಡಬೇಕು ಸ್ವಚ್ಚತೆ ಬಗ್ಗೆ ಗಮನ ಹರಿಸಬೇಕು ಮನೆಯ ಸುತ್ತಮುತ್ತ ಸ್ವಚ್ಚತೆ ಕಾಪಾಡಿದರೆ ಸಾಂಕ್ರಾಮಿಕ ರೋಗಗಳನ್ನು ನಿಯಂತ್ರಿಸಬಹುದು ಪುರಸಭೆಯಿಂದ ಎಲ್ಲ ರೀತಿಯ ಸಹಕಾರ ನೀಡಲು ಸಾಧ್ಯ ಎಂದರು.

ಲಾರ್ವ ಸಮೀಕ್ಷೆ ಕುರಿತು ತಾಲೂಕಾ ಆರೋಗ್ಯ ಅಧಿಕಾರಿ ಡಾ.ಸತೀಶ ತಿವಾರಿ ಮಾತನಾಡಿ ಸಾಂಕ್ರಾಮಿಕ ರೋಗಗಳ ಮುನ್ನೆಚ್ಚರಿಕೆಯಾಗಿ ನಗರ ಹಾಗೂ ಗ್ರಾಮೀಣ ಪ್ರದೇಶದಲ್ಲಿ ಆರೋಗ್ಯ ಇಲಾಖೆ ಸಿಬ್ಬಂದಿಗಳು ಹಾಗೂ ಆಶಾ ಕಾರ್ಯಕರ್ತೆಯರಿಂದ ನಿರಂತರ ಲಾರ್ವ್ ಸಮೀಕ್ಷೆ ಕೈಗೊಳ್ಳಲಾಗುತ್ತಿದ್ದು ಡೆಂಗ್ಯೂ ಈಡಿಸ್ ಎಂಬ ಸೊಳ್ಳೆಗಳಿಂದ ಹರಡುವ ಸೋಂಕು ಸೊಳ್ಳೆಗಳ ಸಂತಾನೋತ್ಪತ್ತಿ ತಾಣಗಳಾದ ಹೂವಿನ ಕುಂಡ, ಬೀಸಾಕಿದ ಟೈರ್, ಹಳೆಯ ಎಣ್ಣೆಯ ಡ್ರಮ್, ನೀರು ಸಂಗ್ರಹಿಸುವ ತೊಟ್ಟಿ ಇವುಗಳಲ್ಲಿ ಸೊಳ್ಳೆಗಳು ಉತ್ಪತ್ತಿಯಾಗುತ್ತವೆ. ಆದ್ದರಿಂದಲೇ ಮಳೆಗಾಲದಲ್ಲಿ ಸೋಂಕು ಹೆಚ್ಚಾಗಿ ಹರಡುತ್ತವೆ. ಆದ್ದರಿಂದ ಇವುಗಳನ್ನು ಶುಚಿಗೊಳಿಸಿ ಸೊಳ್ಳೆ ಮೊಟ್ಟೆ ಇಡಲು ಅವಕಾಶವಿರದಂತೆ ಡೆಂಗ್ಯೂ ತಡೆಗಟ್ಟಲು ಸೊಳ್ಳೆಗಳನ್ನು ನಿಯಂತ್ರಿಸಬೇಕು ಹಗಲಿನಲ್ಲಿ ಸೊಳ್ಳೆ ಕಚ್ಚದಂತೆ ಎಚ್ಚರವಹಿಸಿ



ನೀರು ಶೇಖರಣಾ ತೊಟ್ಟಿ, ಟ್ಯಾಂಕ್‌ಗಳ ಮುಚ್ಚಳವನ್ನು ಭದ್ರವಾಗಿ ಮುಚ್ಚಿಡಿ ಪಾತ್ರೆ ಹಾಗೂ ಬಿಂದಿಗೆಗಳಲ್ಲಿ ಹೆಚ್ಚು ದಿನ ನೀರು ಸಂಗ್ರಹಿಸಿಡಬೇಡಿ ಮನೆಯ ಸುತ್ತಲು ಹಾಗೂ ತಾರಸಿಯ ಮೇಲೆ ನೀರು ನಿಲ್ಲದಂತೆ ಎಚ್ಚರವಹಿಸಿ ತೆಂಗಿನ ಚಿಪ್ಪು, ಟಯರ್ ನಂತಹ ತ್ಯಾಜ್ಯವನ್ನು ಸಮರ್ಪಕವಾಗಿ ವಿಲೇವಾರಿ ಮಾಡಿ.ತೊಟ್ಟಿ, ಬಿಂದಿಗೆ, ಡ್ರಮ್‌ಗಳಲ್ಲಿ 2-3 ದಿನಕ್ಕೊಮ್ಮೆ ನೀರು ಬದಲಿಸಿ ಸ್ವಚ್ಛಗೊಳಿಸಲು ತಿಳಿಸಲಾಗುತ್ತದೆ ಎಂದರು.

ಇದೇ ವೇಳೆ ವೈದ್ಯಾಧಿಕಾರಿ ಡಾ. ಸಂಗಮೇಶ ದಶವಂತ ಹಾಗೂ ಮೇಲ್ವಿಚಾರಕರು, ಆರೋಗ್ಯ ನಿರೀಕ್ಷಣಾಧಿಕಾರಿಗಳು, ಆಶಾ ಕಾ.ಕರ್ತೆಯರು ಮನೆ ಮನೆಗೆ ಭೇಟಿ ನೀಡಿ ಲಾರ್ವ್ ತಾಣಗಳನ್ನು ಪರಿಶೀಲನೆ ಮಾಡಿ ಜನರಿಗೆ ಸೊಳ್ಳೆಗಳಿಂದ ಹರಡುವ ರೋಗಗಳಾದ ಡೆಂಗ್ಯೂ,ಚಿಕುನ್ ಗುನ್ಯಾ, ಮಲೇರಿಯಾ, ಆನೆಕಾಲು ರೋಗ, ಜಿಕಾ ಮುಂತಾದ ರೋಗಳ ನಿಯಂತ್ರಣ ಕುರಿತು ಮಾಹಿತಿ ನೀಡಿ ಜಾಗೃತಿ ಮೂಡಿಸಲಾಯಿತು ಲಾರ್ವ್ ಸಮೀಕ್ಷೆ ಕುರಿತು ಜಾಗೃತಿ ಮೂಡಿಸಿದರು.

ಈ ಸಂದರ್ಭದಲ್ಲಿ ಆರೋಗ್ಯ ಇಲಾಖೆಯ ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿ ಯಲ್ಲಪ್ಪ ಚಲವಾದಿ ಆರೋಗ್ಯ ನಿರೀಕ್ಷಣಾಧಿಕಾರಿಗಳಾದ ಎಂ ಎಸ್ ಗೌಡರ, ಎಸ್ ಐ ಕಮಲಪ್ಪನವರ ಎಸ್ ಆರ್ ಸಜ್ಜನ, ಇಸ್ಮಾಯಿಲ್ ವಾಲಿಕಾರ, ವ್ಹಿ ಬಿ ಡಿ ಮೇಲ್ವಿಚಾರಕ ಎಸ್ ಸಿ ರುದ್ರವಾಡಿ, ಸಂಗೀತಾ ಬಸರಕೋಡ, ಆಶಾ ಕಾರ್ಯಕರ್ತೆಯರು ಸೇರಿದಂತೆ ಉಪಸ್ಥಿತರಿದ್ದರು.

### ತೇರದಾಳದಲ್ಲಿ ಅಲ್ಲಮಪ್ರಭುದೇವರ ನೂತನ ಮಂದಿರ ಲೋಕಾರ್ಪಣೆ

# ರೈತರಿಗೆ ಕೆಡಕು ಮಾಡಿದವರಿಗೆ ಭವಿಷ್ಯ ಇಲ್ಲ-ಈಶ್ವರಪ್ಪ

ತೇರದಾಳ-ಈ ನಾಡಿನ ಅನ್ನದಾತ ರೈತನಿಗೆ ಕೆಡಕು ಮಾಡಿದವರಿಗೆ ಭವಿಷ್ಯವೇ ಇಲ್ಲ. ನಸಿಸಿ ಹೋಗುತ್ತಾರೆ ಎಂದು ಮಾಜಿ ಉಪಮುಖ್ಯಮಂತ್ರಿ ಕೆ.ಎಸ್. ಈಶ್ವರಪ್ಪ ಟೀಕಿಸಿದರು.

ತೇರದಾಳ ಕ್ಷೇತ್ರಾಧಿಪತಿ ಅಲ್ಲಮಪ್ರಭುದೇವರ ನೂತನ ದೇವಸ್ಥಾನ ಲೋಕಾರ್ಪಣೆ ನಿಮಿತ್ತ ಶುಕ್ರವಾರ ಹಮ್ಮಿಕೊಂಡಿದ್ದ ರೈತ ಹಾಗೂ ಸೈನಿಕ ಸಮಾವೇಶ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಾತನಾಡಿದರು.

ದೇಶದ 135 ಕೋಟಿ ಜನರಿಗೆ ಅನ್ನ ಹಾಕುವ ರೈತರು ಇಂದಿಗೂ ಸಂಕಷ್ಟ ನಷ್ಟದಲ್ಲಿದ್ದಾರೆ ಎಂದರೆ ನಿಜಕ್ಕೂ ನೋವಿನ ಸಂಗತಿ. ಆದ್ದರಿಂದ ರೈತರು ಪರ್ಯಾವಾಗಿ ಆಧುನಿಕ ಕೃಷಿ ಪದ್ಧತಿ ಬಳಸುವುದರ ಜತೆಗೆ ಮಕ್ಕಳಿಗೆ ಉನ್ನತ ಮತ್ತು ಗುಣಮಟ್ಟದ ಶಿಕ್ಷಣ ನೀಡುವುದು ಅಗತ್ಯವಿದೆ ಎಂದು ಹೇಳಿದ ಕೆ.ಎಸ್. ಈಶ್ವರಪ್ಪ, ಹೋರಾಟಗಾರರಿಗೆ ಸ್ಫೂರ್ತಿ ಆಗಿರುವ ಮಠಾಧೀಶರು ಇಂದು ವಕ್ಫದಿಂದಾಗಿ ಅವರೇ ಬೀದಿಗಿಳಿದು ಹೋರಾಟ ನಡೆಸುವಂತಾಗಿದೆ. ಇದನ್ನು ಯಾರು ಸಹಿಸುವುದಿಲ್ಲ. ತಾವು ಕೂಡ ಎಲ್ಲದಕ್ಕೂ ಸಿದ್ಧ ಎಂದು ಪರೋಕ್ಷವಾಗಿ ರಾಜ್ಯ ಸರಕಾರಕ್ಕೆ ಚಾಟಿ ಬೀಸಿದರು. ಚೀನಾ ಹಾಗೂ ಪಾಕಿಸ್ತಾನದಂತಹ ದುಷ್ಟ ರಾಷ್ಟ್ರಗಳು ಭಾರತ ದೇಶದ ಮೇಲೆ ಯುದ್ಧ ಸಾರಲು ಹಿಂದೇಟು ಹಾಕುವಂತಾಗಿದೆ. ಕಾರಣ ನರೇಂದ್ರ ಮೋದಿ ಅವರು ಪ್ರಧಾನ ಮಂತ್ರಿ ಆದ ಬಳಿಕ ಭಾರತೀಯ ಸೇನೆ ಅಷ್ಟೊಂದು ಬಲಿಷ್ಠವಾಗಿದೆ ಎಂದು ಬಣ್ಣಿಸಿದರು. ರಾಜ್ಯಸಭಾ ಸದಸ್ಯ ಈರಣ್ಣ ಕಡಾಡಿ ಮಾತನಾಡಿ, 2014ರ ಸರ್ವೆ ಮಾಹಿತಿ ಪ್ರಕಾರ ದೇಶದಲ್ಲಿ ಶೇಕಡಾ 48ರಷ್ಟು ಜನ ಕೃಷಿ ಚಟುವಟಿಕೆಗಳನ್ನು ನಡೆಸುತ್ತಿದ್ದರೆ ಶೇ.524ಷ್ಟು ಜನ ಇನ್ನೂಳಿದ ಉದ್ಯೋಗಳನ್ನು ಅವಲಂಬಿಸಿದ್ದಾರೆ. ಆದರೆ ವಿಪರ್ಯಾಸ ಎಂದರೆ ಕೃಷಿ ಚಟುವಟಿಕೆಯಲ್ಲಿ 48 ಪ್ರತಿಶತ ಹೊಂದಿದ್ದರು ವಾರ್ಷಿಕ ಜಿಡಿಪಿ ಶೇ.20ರಷ್ಟು ಮಾತ್ರ ಇದೆ. 52ಪ್ರತಿಶತ ಹೊಂದಿದವರ ಜಿಡಿಪಿ ಶೇ.80ರಷ್ಟು ಇದೆ. ಇದನ್ನು ನಾವು ರೈತರು ಅರಿತುಕೊಳ್ಳಬೇಕಿದೆ ಎಂದು ವಿಶ್ಲೇಷಿಸಿದರು. ಆದ್ದರಿಂದ ಈ ನಾಡಿನಲ್ಲಿ




ಧರ್ಮ ಮತ್ತು ಕರ್ಮವನ್ನು ಪಾಲಿಸುತ್ತಿರುವ ರೈತ, ಕೃಷಿ ಪದ್ಧತಿಯನ್ನು ಬದಲಾಯಿಸಿಕೊಳ್ಳುವುದರ ಜತೆಗೆ ತಾವು ಜಾಗೃತರಾಗಿ ಸರಕಾರಗಳನ್ನು ಜಾಗೃತಗೊಳಿಸುವ ಕೆಲಸ ಮಾಡಬೇಕೆಂದು ಹೇಳಿದರು. ರೈತರ ಹಾಗೂ ಕೃಷಿ ಕ್ಷೇತ್ರದ ಧ್ವನಿ ಆಗಿರುವ ಕನ್ನೇರಿಮಠದ ಶ್ರೀಗಳಿಗೆ ಕೃಷಿ ಸಂಸ್ಕೃತ ಅಂಬಾಸಿಡರ್ ಘೋಷಣೆಗೆ ಪ್ರಧಾನ ಮಂತ್ರಿ ನರೇಂದ್ರ ಮೋದಿ ಅವರಿಗೆ ಪತ್ರ ಬರೆಯುದಾಗಿ ಸಭೆಯಲ್ಲಿ ತಿಳಿಸಿದರು. ಕಾರ್ಯಕ್ರಮದ ಸಾನ್ನಿಧ್ಯ ವಹಿಸಿದ್ದ ಕೊಲ್ಲಾಪುರ ಕನ್ನೇರಿಮಠದ ಜಗದ್ಗುರು ಅದೃಶ್ಯ ಕಾಡಸಿದ್ಧೇಶ್ವರ ಶ್ರೀ, ಸಾಹಿತ್ಯ, ಜನಪದ, ಆಧ್ಯಾತ್ಮ, ಕೃಷಿ ಸೇರಿದಂತೆ ಹಲವು ಕ್ಷೇತ್ರಗಳಲ್ಲಿ ಮುಂಚೂಣಿಯಲ್ಲಿರುವ ಭಾಗಲಕೋಟೆ ಜಿಲ್ಲೆ ಉತ್ತರ ಕರ್ನಾಟಕದ ಪರಂಪರೆಯಾಗಿದೆ ಎಂದು ಬಣ್ಣಿಸಿದ ಶ್ರೀಗಳು, ಕೃಷಿ ಕ್ಷೇತ್ರದಲ್ಲಿ ರೈತರು ತಮ್ಮನ್ನು ತಾವು ಬದಲಾಯಿಸಿಕೊಳ್ಳದಿದ್ದರೆ ಭೂಮಿಯ ಫಲವತ್ತತೆ ಹಾಳಾಗುವುದರ ಜತೆಗೆ ರೈತರ ದು:ಸ್ಥಿತಿ ಮತ್ತಷ್ಟು ಬಿಗಿಗೊಳ್ಳುತ್ತದೆ. ಆದ್ದರಿಂದ ಸಾವಯವ ಕೃಷಿಗೆ ಆದ್ಯತೆ ನೀಡಿ ಎಂದು ರೈತರಿಗೆ ಸಲಹೆ ನೀಡಿದರು. ರಾಜ್ಯೋತ್ಸವ ಪ್ರಶಸ್ತಿ ವಿಜೇತ ಸಿದ್ದಪ್ಪ ಬಿದರಿ ಹಾಸ್ಯಭರಿತವಾಗಿಯೇ ರೈತರು ಎದುರಿಸುತ್ತಿರುವ ಸಮಸ್ಯೆಗಳ ಕುರಿತು ಹಾಗೂ ಜಾಗೃತರಾಗಬೇಕಾದ ವಿಷಯಗಳ ಕುರಿತು ಹೇಳಿದರು. ಕಪ್ಪತಗುಡ್ಡ ನಂದಿವೇರಿಮಠದ ಶಿವಕುಮಾರ ಶ್ರೀ, ಶಾಸಕ ಸಿದ್ದು ಸವದಿ, ಮಾಜಿ ಸೈನಿಕರ ಒಕ್ಕೂಟದ ಬೆಳಗಾವಿ ಜಿಲ್ಲಾಧ್ಯಕ್ಷ ಜಗದೀಶ ಪೂಜಾರಿ ಮಾತನಾಡಿದರು. ಹಳೇ ಹುಬ್ಬಳ್ಳಿ ನೀಲಕಂಠಮಠದ ಜಗದ್ಗುರು ಶಿವಶಂಕರ ಶಿವಾಚಾರ್ಯ, ಹಲ್ಯಾಳ ಗುರುದೇವ ಆಶ್ರಮದ ಹರ್ಷಾನಂದ ಶ್ರೀ, ಶಿರೋಳದ ಶಂಕರಾರೂಢ ಶ್ರೀ, ಡಾ. ಮಹಾಂತಪ್ರಭು ಶ್ರೀ, ಗಂಗಾಧರ ದೇವರು, ವಿರುಪಾಕ್ಷ ದೇವರು, ಜಿಪಂ ಮಾಜಿ ಉಪಾಧ್ಯಕ್ಷ ಮುತ್ತಪ್ಪ ಕೋಮಾರ, ಮಾಜಿ ಸೈನಿಕರ ಒಕ್ಕೂಟದ ಜಿಲ್ಲಾಧ್ಯಕ್ಷ ಚಂದ್ರಶೇಖರ ಬಡ್ನೂರ, ಪರಪ್ಪ ಹನಗಂಡಿ ಸೇರಿದಂತೆ ಕೃಷಿ, ತೋಟಗಾರಿಕೆ ಇಲಾಖೆ ಅಧಿಕಾರಿಗಳು, ಮಾಜಿ ಯೋಧರು ಇದ್ದರು. ಕೃಷಿ ಸಾಧಕರಿಗೆ ಇದೇ ಸಂದರ್ಭದಲ್ಲಿ ಸಮಿತಿ ವತಿಯಿಂದ ಸನ್ಮಾನಿಸಿ ಗೌರವಿಸಲಾಯಿತು. ಸ್ವಾಮಿ ವಿವೇಕಾನಂದ ಇಂಟರ್‌ನ್ಯಾಷನಲ್ ಸ್ಕೂಲ್ ವಿದ್ಯಾರ್ಥಿಗಳಿಂದ ನಡೆದ 12ನೇ ಶತಮಾನದ ಅನುಭವ ಮಂಟಪದ ಅಲ್ಲಮಪ್ರಭು, ಬಸವೇಶ್ವರ ಹಾಗೂ ಅಕ್ಕಮಹಾದೇವಿ ನಡುವೆ ನಡೆದಿದ್ದ ಸನ್ನಿವೇಶದ ರೂಪಕ ಪ್ರದರ್ಶನ ಸಭಿಕರನ್ನು ರೋಮಾಂಚನಗೊಳಿಸಿತು.

# ಅಡಿಬಟ್ಟಿ ರಸ್ತೆ ಅಭಿವೃದ್ಧಿಗೆ ಕ್ರಮ



**ಗೋಕಾಕ:** ಗ್ರಾಮಸ್ಥರ ಬೇಡಿಕೆಗಳಿಗೆ ಸ್ಪಂದಿಸಲಾಗುತ್ತಿದ್ದು, ಮುಂಬರುವ ದಿನಗಳಲ್ಲಿ ಅಡಿಬಟ್ಟಿ ಮುಖ್ಯರಸ್ತೆಯಿಂದ ವಿಠ್ಠಪ್ಪ ಗುಡಿಯವರೆಗೆ ರಸ್ತೆಯನ್ನು ಅಭಿವೃದ್ಧಿಪಡಿಸಲಾಗುವುದೆಂದು ಶಾಸಕ ಬಾಲಚಂದ್ರ ಜಾರಕಿಹೊಳಿ ಅವರು ಭರವಸೆಯನ್ನು ನೀಡಿದರು.

ಇತ್ತೀಚೆಗೆ ಗೋಕಾಕ ತಾಲೂಕಿನ ಅಡಿಬಟ್ಟಿ ಗ್ರಾಮದ ವಿಠ್ಠಪ್ಪನ ದೇವರ ಜಾತ್ರೆಯಲ್ಲಿ ಭಾಗವಹಿಸಿ ಮಾತನಾಡಿದ ಅವರು, ವಿಠ್ಠಪ್ಪ ದೇವಸ್ಥಾನ (ಬಸಳಿಗುಂದಿ ಮನೆಯಿಂದ ಪೂಜೇರಿ ಮನೆತನಕ)ದ ರಸ್ತೆಯನ್ನು ಸುಧಾರಿಸಲಾಗುವುದು ಎಂದು ತಿಳಿಸಿದರು.

ದಂಡಿನ ಮಾರ್ಗದ ರಸ್ತೆಯಲ್ಲಿರುವ ಅಡಿಬಟ್ಟಿ ಗ್ರಾಮಸ್ಥರು ಮೊದಲಿನಿಂದಲೂ ವಿಶ್ವಾಸವನ್ನಿಟ್ಟುಕೊಂಡು ಆಶೀರ್ವಾದ ಮಾಡುತ್ತ ಬರುತ್ತಿದ್ದಾರೆ. ಪ್ರತಿಯೊಂದು ಚುನಾವಣೆಯಲ್ಲಿ ಹೆಚ್ಚಿನ ಮತ ನೀಡುತ್ತ ತಮ್ಮ ನಿಷ್ಠೆಯನ್ನು ವ್ಯಕ್ತಪಡಿಸುತ್ತ ಬರುತ್ತಿದ್ದಾರೆ. ಆದ್ದರಿಂದ ಗ್ರಾಮಸ್ಥರಿಗೆ ಸದಾ ಋಣಿಯಾಗಿರುವುದಾಗಿ ಅವರು ತಿಳಿಸಿದರು.

ಜಾತ್ರೆಗಳು ನಮ್ಮ ಸಂಸ್ಕೃತಿಗಳನ್ನು ಬಿಂಬಿಸುತ್ತಿವೆ. ಜಾತ್ಯಾತೀತ ಮನೋಭಾವನೆಗೆ ಇಂತಹ ಜಾತ್ರೆಗಳು ಸಾಕ್ಷಿಯಾಗಿವೆ. ಎಲ್ಲ ಜಾತಿಯವರು ಕೂಡಿಕೊಂಡು ಜಾತ್ರೆಗಳನ್ನು ಮಾಡುವುದು ಈ ಮೂಲಕ ನಮ್ಮ ಆಚಾರ-ವಿಚಾರಗಳನ್ನು ಇಂದಿನ ಯುವ ಪೀಳಿಗೆಗೆ ಅರಿವು ಮೂಡಿಸುವಲ್ಲಿ ಹಿರಿಯರು ಎಲ್ಲರನ್ನೂ ಒಗ್ಗೂಡಿಸುತ್ತಿರುವ ಕಾರ್ಯವು ಪ್ರಶಂಸನೀಯ ಎಂದು ಅವರು ಹೇಳಿದರು.

ಜಾತ್ರೆಗೆ ಎಲ್ಲಾ ರೀತಿಯ ಅನುಕೂಲ ಮಾಡಿಕೊಟ್ಟು ತನು, ಮನ, ಧನ ಸೇವೆ ಸಲ್ಲಿಸಿರುವ ಶಾಸಕ ಹಾಗೂ ಬೆಮ್ಯುಲ್ ಅಧ್ಯಕ್ಷ ಬಾಲಚಂದ್ರ ಜಾರಕಿಹೊಳಿ ಅವರನ್ನು ದೇವಸ್ಥಾನದ ಕಮೀಟಿಯವರು ಸತ್ಕರಿಸಿದರು.

ಈ ಸಂದರ್ಭದಲ್ಲಿ ಜಿಲ್ಲಾ ಸಹಕಾರಿ ಯೂನಿಯನ್ ಅಧ್ಯಕ್ಷ ಬಸಗೌಡ ಪಾಟೀಲ, ಪಿಕಾರ್ಡ್ ಬ್ಯಾಂಕ್ ನಿರ್ದೇಶಕ ಸಿದ್ದಪ್ಪ ಹಂಜಿ, ಮೆಳವಂಕಿ ಗ್ರಾಮ ಪಂಚಾಯತಿ ಮಾಜಿ ಅಧ್ಯಕ್ಷೆ ಯಲ್ಲವ್ವ ಶಿಂತ್ರಿ, ಶಿವಾನಂದ ಬಸಳಿಗುಂದಿ, ಕೆಂಚಪ್ಪ ಶಿಂತ್ರಿ, ನಿಂಗಪ್ಪ ಶಿಂತ್ರಿ, ಅಡಿವೆಪ್ಪ ಕಂಕಾಳಿ, ಡಾ. ಅಡಿವೆಪ್ಪ ಭಂಗಿ, ವಿಠ್ಠಪ್ಪ ಬಸಳಿಗುಂದಿ, ನಾಗಪ್ಪ ಕಾಪಶಿ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

## ಮಕ್ಕಳ ದಿನಾಚರಣೆಗೆ ವಿವಿಧ ಸ್ಪರ್ಧೆ: ಹೆಸರು ನೋಂದಾಯಿಸಿ

**ಕೊಪ್ಪಳ:** ಬಾಲಭವನ ಸೊಸೈಟಿ, ಬೆಂಗಳೂರು ಇವರ ವತಿಯಿಂದ ಜಿಲ್ಲಾ ಮಟ್ಟದ "ಮಕ್ಕಳ ದಿನಾಚರಣೆ" ಕಾರ್ಯಕ್ರಮ-2024 ರ ಅಂಗವಾಗಿ ಜಿಲ್ಲೆಯ 9 ರಿಂದ 16 ವರ್ಷದ ಒಳಗಿನ ಮಕ್ಕಳಿಗೆ ಹಾಗೂ ವಿಶೇಷ ಚೇತನರ ಮಕ್ಕಳು ಬುಡಕಟ್ಟು ಪ್ರದೇಶದ ಮಕ್ಕಳಿಗೆ ವಿವಿಧ ಸ್ಪರ್ಧೆಗಳನ್ನು ಏರ್ಪಡಿಸಲಾಗಿದ್ದು, ಆಸಕ್ತ ಮಕ್ಕಳು ನವೆಂಬರ್ 12ರೊಳಗಾಗಿ ಹೆಸರನ್ನು ನೋಂದಾಯಿಸುವಂತೆ ಕೊಪ್ಪಳ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪ ನಿರ್ದೇಶಕರು ತಿಳಿಸಿದ್ದಾರೆ.ಸೃಜನಾತ್ಮಕ ಪ್ರದರ್ಶನ ಕಲೆಗಳಾದ ಶಾಸ್ತ್ರೀಯ ನೃತ್ಯ, ಜಾನಪದ ನೃತ್ಯ, ಕನಾಟಕ ಶಾಸ್ತ್ರೀಯ ಸಂಗೀತ, ಹಿಂದೂಸ್ತಾನಿ ಶಾಸ್ತ್ರೀಯ ಸಂಗೀತ, ಸುಗಮ ಸಂಗೀತ ಸ್ಪರ್ಧೆ, ವಾದ್ಯ ಸಂಗೀತ, ತಬಲಾ, ಮೃದಂಗ, ಕೀಬೋರ್ಡ್, ಕೊಳಲು, ಡೋಳ್ಳು ಮತ್ತು ನಗಾರಿ ಸ್ಪರ್ಧೆ, ವಿಜ್ಞಾನದಲ್ಲಿ ಸೃಜನಾತ್ಮಕ ಆವಿಷ್ಕಾರ ಸ್ಪರ್ಧೆ ಹಾಗೂ ಚಿತ್ರಕಲಾ ಸ್ಪರ್ಧೆಯನ್ನು ಹಮ್ಮಿಕೊಳ್ಳಲಾಗಿದ್ದು, ಒಂದು ಮಗು ಒಂದೇ ಸ್ಪರ್ಧೆಯಲ್ಲಿ ಭಾಗವಹಿಸಲು ಮಾತ್ರ ಅವಕಾಶವಿರುತ್ತದೆ. ಹೆಚ್ಚಿನ ಮಾಹಿತಿಗಾಗಿ ಉಪ ನಿರ್ದೇಶಕರ ಕಛೇರಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಕೊಪ್ಪಳ, ದೂರವಾಣಿ ಸಂಖ್ಯೆ:9972944467 ಸಂಪರ್ಕಿಸಿ ಸದರಿ ವಿಷಯವನ್ನು ಎಲ್ಲ ದೈನಂದಿನ ಪ್ರಚಲಿತ ದಿನಪತ್ರಿಕೆಗಳಲ್ಲಿ ಉಚಿತವಾಗಿ ಪ್ರಕಟಿಸಲು ಈ ಮೂಲಕ ಕೋರಲಾಗಿದೆ.

# ರೈಲ್ವೆ ಹೋರಾಟಕ್ಕೆ ಸಂಘಟನೆಗಳ ಬೆಂಬಲ




ಕರವೇ ಹಾಗೂ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ಸಂಘಟನೆಗಳ ಪದಾಧಿಕಾರಿಗಳು ಸುದ್ದಿಗೋಷ್ಠಿ ನಡೆಸಿದರು.

**ರಾಮದುರ್ಗ:** ಲೋಕಾಪೂರದಿಂದ ರಾಮದುರ್ಗ ಮಾರ್ಗವಾಗಿ ಧಾಡವಾಡಕ್ಕೆ ರೇಲ್ವೆ ಸಂಚಾರಕ್ಕೆ ಸರಕಾರ ಮುಂದಾಗಬೇಕು ಎಂದು ಒತ್ತಾಯಿಸಿ, ನವ್ಹಂಬರ-12 ರಂದು ರಾಮದುರ್ಗದಲ್ಲಿ ನಡೆಯುತ್ತಿರುವ ಬೃಹತ್ ಹೋರಾಟಕ್ಕೆ ಕರವೇ ಹಾಗೂ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ಸಂಘಟನೆಗಳ ಪದಾಧಿಕಾರಿಗಳು ಸಂಪೂರ್ಣ ಬೆಂಬಲ ವ್ಯಕ್ತಪಡಿಸಿದರು.

ಪಟ್ಟಣದ ಪ್ರೆಸ್‌ಕ್ಲಬ್‌ನಲ್ಲಿ ಗುರುವಾರ ಪತ್ರಿಕಾಗೋಷ್ಠಿಯ ಮೂಲಕ ಬೆಂಬಲ ವ್ಯಕ್ತಪಡಿಸಿದ ಸಂಘಟನೆಗಳ ಮುಖಂಡರು, ರಾಮದುರ್ಗದಲ್ಲಿ ನಡೆಯುತ್ತಿರುವ ರೈಲ್ವೆ ಹೋರಾಟಕ್ಕೆ ಸಂಘಟನೆಗಳ ಕಾರ್ಯಕರ್ತರು ಹಾಗೂ ಮುಖಂಡರು ಬೆಂಬಲವಾಗಿ ನಿಂತು, ರಾಮದುರ್ಗ ಮೂಲಕ ಧಾರವಾಡಕ್ಕೆ ಸಂಚಾರ ಕಲ್ಪಿಸುವ ರೈಲ್ವೆ ಮಾರ್ಗದ ಕಾಮಗಾರಿ ಪ್ರಾರಂಭವಾಗುವ ವರೆಗೆ ಹೋರಾಟಕ್ಕೆ ಕೈ ಜೋಡಿಸುವುದಾಗಿ ಕರವೇ ನಾರಾಯಣಗೌಡ ಬಣದ ಅಧ್ಯಕ್ಷ ವಿಜಯಕುಮಾರ ರಾಠೋಡ, ಗೌರವಾಧ್ಯಕ್ಷ ಜಹೂರ ಹಾಜಿ, ರೈತ ಸಂಘ ಹಾಗೂ ಹಸಿರು ಸೇನೆಯ ತಾಲೂಕಾಧ್ಯಕ್ಷ ಜಗದೀಶ ದೇವರಡ್ಡಿ ತಿಳಿಸಿದರು.

ರೈಲ್ವೆ ಪ್ರಾರಂಭವಾದಲ್ಲಿ ರೈತರು ಸೇ-ರಿದಂತೆ ಸ್ಥಳೀಯ ವ್ಯಾಪಾರಸ್ಥರಿಗೆ ಆರ್ಥಿಕ, ಶೈಕ್ಷಣಿಕಕವಾಗಿ ರಾಮದುರ್ಗ ತಾಲೂಕು ಪ್ರಗತಿ ಸಾಧಿಸಲಿದೆ. ಪ್ರವಾಸೋದ್ಯಮ ಅಭಿವೃದ್ಧಿ, ಸರಕು ಸಾಗಣೆಗೆ ರೈಲ್ವೆ ಮಾರ್ಗ ಸಹಕಾ-ರಿಯಾಗಲಿದ್ದು, ಹೋರಾಟಕ್ಕೆ ರಾಮದುರ್ಗ ತಾಲೂಕಿನ ಸರ್ವ ಜನತೆಗೆ ಪಕ್ಷಾತೀತವಾಗಿ ಬೆಂಬಲ ವ್ಯಕ್ತಪಡಿಸುತ್ತಿದ್ದಾರೆ. ಸ್ಥಳೀಯ ರಾಜಕೀಯ ಮುಖಂಡರು, ವಿದ್ಯಾರ್ಥಿಗಳು ಸೇರಿದಂತೆ ಸರ್ವರ ಬೆಂಬಲದಿಂದ ಹೋರಾಟದಲ್ಲಿ ಯಶಸ್ವಿಯಾಗಲಿದ್ದೇವೆ ಎಂದು ಇದೇ ಸಂದರ್ಭದಲ್ಲಿ ವಿಶ್ವಾಸ ವ್ಯಕ್ತಪಡಿಸಿದರು.

ಪತ್ರಿಕಾಗೋಷ್ಠಿಯಲ್ಲಿ ರೈತ ಸಂಘದ ಮುಖಂಡರಾದ ಹಣಮಂತ ಕಾಮನ್ನವರ, ರೈಲ್ವೆ ಹೋರಾಟ ಸಮಿತಿಯ ಮುಖಂಡ ಮಹ್ಮದಶೆಫಿ ಬೆಣ್ಣಿ, ಶಂಕರ ಕೊರವರ, ಕರವೇ ಮಹಿಳಾ ಘಟಕದ ಅಧ್ಯಕ್ಷೆ ರೂಪಾ ಅರಮನಿ, ಉಪಾಧ್ಯಕ್ಷೆ ಶಾರದಾ ಕೇರಿ, ಗ್ರಾಮೀಣಾಧ್ಯಕ್ಷ ಹಣಮಂತ ಕುಲಗೋಡ ಸೇರಿದಂತೆ ರೈತ ಸಂಘ ಹಾಗೂ ಕರವೇ ಪದಾಧಿಕಾರಿಗಳು ಮತ್ತು ಕಾರ್ಯಕರ್ತರು ಇದ್ದರು.

## ಚೂರು-ಪಾರು

### ಬೆಂಬಲ ಬೆಲೆಯಲ್ಲಿ ಮೆಕ್ಕೆಜೋಳ ಖರೀದಿ

**ಧಾರವಾಡ:** ಕರ್ನಾಟಕ ಸಹಕಾರ ಹಾಲು ಮಹಾಮಂಡಳದ ರಾಯಾಪುರ ಪಶು ಆಹಾರ ಘಟಕದಿಂದ ಮೆಕ್ಕೆಜೋಳವನ್ನು ಪ್ರತಿ ಕ್ವಿಂಟಲ್‌ಗೆ ರೂ.2400 ರಂತೆ (ಮೆಕ್ಕೆಜೋಳದ 50 ಕೆ.ಜಿ. ಸಾಮರ್ಥ್ಯದ 02 ಗೋಣಿಚೀಲ ಹಾಗೂ ಸಾಗಾಣಿಕೆ ಪ್ರೋತ್ಸಾಹಧನವಾಗಿ ರೂ.175 ಸೇರಿಸಿ) ನೇರವಾಗಿ ರೈತರಿಂದ ಗರಿಷ್ಠ 500 ಕ್ವಿಂಟಾಲ್ ಮೆಕ್ಕೆಜೋಳವನ್ನು ಖರೀದಿಸಲಾಗುವುದು. ಖರೀದಿ ಪ್ರಕ್ರಿಯೆಯ ನೋಂದಣಿಯನ್ನು ನವೆಂಬರ 11, 2024 ರಿಂದ ಆನ್‌ಲೈನ್ ಮೂಲಕ ಮಾಡಲಾಗುವುದು. ರೈತರು ತಮ್ಮ ಹಾಲು ಉತ್ಪಾದಕರ ಸಹಕಾರ ಸಂಘಗಳ ಮುಖ್ಯ ಕಾರ್ಯದರ್ಶಿಗಳನ್ನು ಭೇಟಿಯಾಗಿ, ಕ್ಷೀರಸಿರಿ ತಂತ್ರಾಂಶದ ಮೂಲಕ ಈಖಗಿಖಖಿ'ಖ ಖಆ ಯೊಂದಿಗೆ ನೊಂದಾಯಿಸಿ, ಸ್ವೀಕೃತ ಪತ್ರ ಪಡೆಯಬೇಕು. ಖರೀದಿ ಪ್ರಕ್ರಿಯೆಯನ್ನು ನವೆಂಬರ 14, 2024 ರಿಂದ ಪ್ರಾರಂಭಿಸಲಾಗುವುದು. ಹೆಚ್ಚಿನ ಮಾಹಿತಿಗಾಗಿ ಹಾಲು ಉತ್ಪಾದಕರ ಸಹಕಾರ ಸಂಘದ ಮುಖ್ಯ ಕಾರ್ಯನಿರ್ವಾಹಕರನ್ನು ಸಂಪರ್ಕಿಸಲು ಕರ್ನಾಟಕ ಸಹಕಾರ ಹಾಲು ಮಹಾಮಂಡಳ ಪ್ರಕಟಣೆಯಲ್ಲಿ ತಿಳಿಸಿದೆ.

### ಇ-ಶ್ರಮ್ ನೋಂದಾಯಿತ ಕಾರ್ಮಿಕರಿಗೆ ಆದ್ಯತಾ ಪಡಿತರ ಚೀಟಿ ವಿತರಣೆ

**ಕೊಪ್ಪಳ:** ಸರ್ವೋಚ್ಚ ನ್ಯಾಯಾಲಯವು ಇ-ಶ್ರಮ್ ನೋಂದಾಯಿತ ಕಾರ್ಮಿಕರಿಗೆ ಆದ್ಯತಾ ಪಡಿತರ ಚೀಟಿ (ಬಿ.ಪಿ.ಎಲ್) ನೀಡಲು ಆದೇಶಿಸಿದ್ದು, ಆದ್ಯತಾ ಪಡಿತರ ಚೀಟಿ ಹೊಂದಲು ಅರ್ಹ ಇ-ಶ್ರಮ್ ನೋಂದಾಯಿತ ಕಾರ್ಮಿಕರಿಗೆ ಆದ್ಯತಾ ಪಡಿತರ ಚೀಟಿ ನೀಡುವ ಕಾರ್ಯ ಕರ್ನಾಟಕ ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿ ಪ್ರಾರಂಭವಾಗಿರುತ್ತದೆ.ಆದ್ದರಿಂದ ಆದ್ಯತಾ ಪಡಿತರ ಚೀಟಿ ಹೊಂದಿಲ್ಲದ ಇ-ಶ್ರಮ್ ನೋಂದಾಯಿತ ಎಲ್ಲಾ ಅರ್ಹ ಕಾರ್ಮಿಕರು ನಿಮ್ಮ ಹತ್ತಿರದ ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆಯನ್ನು ಸಂಪರ್ಕಿಸುವುದು.ಹೆಚ್ಚಿನ ಮಾಹಿತಿಗಾಗಿ ಟೋಲ್ ಫ್ರೀ ದೂರವಾಣಿ ಸಂಖ್ಯೆ:1800-425-9339 ಅಥವಾ ಸಹಾಯವಾಣಿ 1967ಕ್ಕೆ ಬೆಳಿಗ್ಗೆ 10.00 ಗಂಟೆಯಿಂದ ಸಂಜೆ 5.30 ಗಂಟೆಯವರೆವಿಗೂ ಸಂಪರ್ಕಿಸುವಂತೆ ಆಹಾರ, ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಇಲಾಖೆಯ ಆಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಹೊಸ ಜವಳಿ ಘಟಕ ಸ್ಥಾಪನೆಗೆ ಎಸ್ಸಿ,ಎಸ್ಟಿ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನ

**ಧಾರವಾಡ:** 2024-25ನೇ ಸಾಲಿನ ನೇಕಾರರ ವಿಶೇಷ ಪ್ಯಾಕೇಜ್ ಯೋಜನೆಯಡಿ ವಿಶೇಷ ಘಟಕ ಯೋಜನೆ ಮತ್ತು ಗಿರಿಜನ ಉಪ ಯೋಜನೆಯಡಿ, ಜವಳಿ ಕ್ಷೇತ್ರಕ್ಕೆ ಸಂಬಂಧಿಸಿದ ಸಣ್ಣ ಮತ್ತು ಅತಿ ಸಣ್ಣ (ಖಏಇ) ಘಟಕಗಳ ಸ್ಥಾಪನೆಗೆ ಸಹಾಯಧನ ಯೋಜನೆಯಡಿ ಹೊಸ ಜವಳಿ ಘಟಕ ಸ್ಥಾಪನೆಗೆ ಅರ್ಹ ಆಸಕ್ತಿವುಳ್ಳ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಉದ್ಯಮಿಗಳಿಗೆ ಅರ್ಜಿ ಆಹ್ವಾನಿಸಲಾಗಿದೆ. ಆಸ್ತಕರು ನವೆಂಬರ 21, 2024 ರೊಳಗಾಗಿ ಅರ್ಜಿ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ: 0836-2448834 ಗೆ ಸಂಪರ್ಕಿಸಬಹುದು ಎಂದು ಕೈಮಗ್ಗ ಮತ್ತು ಜವಳಿ ಇಲಾಖೆಯ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಕೃಷಿ ವಿವಿ: ಅರೆಕಾಲಿಕ ಶಿಕ್ಷಕರ ಹುದ್ದೆಗಳಿಗೆ ಅರ್ಜಿ ಆಹ್ವಾನ

ಧಾರವಾಡ: ಕೃಷಿ ವಿಶ್ವವಿದ್ಯಾಲಯದ ವಿವಿಧ ಮಹಾವಿದ್ಯಾಲಯಗಳ ವಿವಿಧ ವಿಭಾಗಗಳಲ್ಲಿ ಸಹಾಯಕ ಪ್ರಾಧ್ಯಾಪಕರ ತಾತ್ಕಾಲಿಕ ಹಾಗೂ ಅರೆಕಾಲಿಕ ಹುದ್ದೆಗಳಿಗೆ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.ಆಸಕ್ತ ಅಭ್ಯರ್ಥಿಗಳು ಸೂಕ್ತ ದಾಖಲಾತಿಗಳೊಂದಿಗೆ ನವೆಂಬರ್ 12 ರಂದು ಕೃವಿವಿ ಕುಲಸಚಿವರ ಸಂದರ್ಶನ ಕೊಠಡಿಯಲ್ಲಿ ನಡೆಯುವ ಸಂದರ್ಶನಕ್ಕೆ ಹಾಜರಾಗಬಹುದು.ಹೆಚ್ಚಿನ ಮಾಹಿತಿಗಾಗಿ ತಿತಿತಿ.ಣಚಿಜ.ಜಜಣ ವೆಬ್‌ಸೈಟ್‌ಗೆ ಭೇಟಿ ನೀಡಬಹುದು ಎಂದು ಕೃಷಿ ವಿಶ್ವವಿದ್ಯಾಲಯದ ಶಿಕ್ಷಣ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸ್ಕೌಟ್ಸ್ ಮತ್ತು ಗೈಡ್ಸ್ ವಿದ್ಯಾರ್ಥಿಗಳ ಸಂಖ್ಯೆ ಹೆಚ್ಚಾಗಲಿ:ಡಿಸಿ

## ಭಾರತ್ ಸ್ಕೌಟ್ಸ್ ಮತ್ತು ಗೈಡ್ಸ್ ಜಿಲ್ಲಾ ವಾರ್ಷಿಕ ಮಹಾಸಭೆಯಲ್ಲಿ ನಲಿನ್ ಅತುಲ್



**ಕೊಪ್ಪಳ:** ಸ್ವಯಂ ಸೇವಾ ಮನೋಭಾವನೆ, ಶಿಸ್ತು, ಸಮಯ ಪಾಲನೆಯನ್ನು ಕಲಿಸುವ ಸ್ಕೌಟ್ಸ್ ಮತ್ತು ಗೈಡ್ಸ್ ವಿದ್ಯಾರ್ಥಿಗಳ ಸಂಖ್ಯೆ ಜಿಲ್ಲೆಯಲ್ಲಿ ಹೆಚ್ಚಾಗಬೇಕು ಎಂದು ಜಿಲ್ಲಾಧಿಕಾರಿ ನಲಿನ್ ಅತುಲ್ ಹೇಳಿದರು.

ಶುಕ್ರವಾರ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಭಾರತ್ ಸ್ಕೌಟ್ಸ್ ಮತ್ತು ಗೈಡ್ಸ್ ಕೊಪ್ಪಳ ಜಿಲ್ಲಾ ಸಂಸ್ಥೆಯ 2023-24ನೇ ಸಾಲಿನ ವಾರ್ಷಿಕ ಮಹಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿ, ವಿದ್ಯಾರ್ಥಿ ದಿಶೆಯಲ್ಲಿ ಸ್ಕೌಟ್ ಮತ್ತು ಗೈಡ್ ಚಟುವಟಿಕೆ ಸದಾ ಅವಶ್ಯಕವಾಗಿವೆ. ಜಿಲ್ಲೆಯ ಶಾಲಾ ಮತ್ತು ಕಾಲೇಜುಗಳಲ್ಲಿ ಸ್ಕೌಟ್ಸ್ & ಗೈಡ್ಸ್ ಘಟಕಗಳನ್ನು ಹೆಚ್ಚಾಗಿ ಸ್ಥಾಪಿಸಿ. ಈಗಾಗಲೇ ಇರುವ ಸ್ಕೌಟ್ಸ್ ಮತ್ತು ಗೈಡ್ಸ್ ಘಟಕಗಳಿಗೆ ನಿಯಮಿತವಾಗಿ ಕ್ಯಾಂಪ್‌ಗಳನ್ನು ಹಮ್ಮಿಕೊಂಡು ಜಿಲ್ಲೆಯ ಐತಿಹಾಸಿಕ ಪ್ರವಾಸಿ ತಾಣಗಳು ಹಾಗೂ ಇತರೆ ಸ್ಥಳಗಳ ಸಂದರ್ಶನವನ್ನು ಮಾಡಿಸಿ ಅಲ್ಲಿನ ಇತಿಹಾಸದ ಬಗ್ಗೆ ವಿದ್ಯಾರ್ಥಿಗಳಿಗೆ ತಿಳಿಸಬೇಕು ಮತ್ತು ಆಗಾಗ ಕ್ಯಾಂಪ್‌ಗಳನ್ನು ಹಮ್ಮಿಕೊಂಡು ವಿದ್ಯಾರ್ಥಿಗಳ ಜೀವನದಲ್ಲಿ ಶಿಸ್ತು ಮೂಡಿಸುವ ಕೆಲಸ ಮಾಡಬೇಕು. ಎಲ್ಲಾ ವಿದ್ಯಾರ್ಥಿಗಳು ಕ್ಯಾಂಪ್‌ಗಳಲ್ಲಿ ಭಾಗವಹಿಸುವಂತಾಗಬೇಕು ಎಂದರು.

ಸ್ಕೌಟ್ಸ್ ಮತ್ತು ಗೈಡ್ಸ್ ಘಟಕಗಳಲ್ಲಿ ಶಿಕ್ಷಕರು ಹಾಗೂ ವಿದ್ಯಾರ್ಥಿಗಳು ಸಕ್ರಿಯವಾಗಿ ಪಾಲ್ಗೊಳ್ಳಬೇಕು. ಪ್ರಮುಖ ಕಾರ್ಯಕ್ರಮಗಳ ಸಂದರ್ಭಗಳಲ್ಲಿ ಸ್ಕೌಟ್ಸ್ ಮತ್ತು ಗೈಡ್ಸ್ ಅಭ್ಯರ್ಥಿಗಳು ಸ್ವಯಂ ಪ್ರೇರಿತವಾಗಿ ಸೇವಾ ಕಾರ್ಯದಲ್ಲಿ ಪಾಲ್ಗೊಳ್ಳಬೇಕು. ಜಿಲ್ಲಾ ಸಂಸ್ಥೆಯಿಂದ ಶಾಲಾ ಹಾಗೂ ಕಾಲೇಜುಗಳಲ್ಲೂ ಆಸಕ್ತ ವಿದ್ಯಾರ್ಥಿಗಳಿಗೆ ಉತ್ತಮ ತರಬೇತಿ, ಸಮವಸ್ತ್ರವನ್ನು ಒದಗಿಸಿ, ಶಿಕ್ಷಣದೊಂದಿಗೆ ಬದುಕಿನಲ್ಲಿ ಶಿಸ್ತು ಕಲಿಸಲು ಇಂತಹ ತರಬೇತಿಗಳನ್ನು ನೀಡಲು ಕ್ರಮ ವಹಿಸಬೇಕು. ಈ ಹಿನ್ನೆಲೆಯಲ್ಲಿ ಸ್ಕೌಟ್ಸ್ & ಗೈಡ್ಸ್ ಶಿಕ್ಷಣ ಇಲಾಖೆಯರು ಅಗತ್ಯ ಸಹಕಾರ ನೀಡಬೇಕು ಎಂದು ಶಿಕ್ಷಣ ಇಲಾಖೆಯ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಸ್ಕೌಟ್ಸ್ ಮತ್ತು ಗೈಡ್ಸ್ ಕೊಪ್ಪಳ ಜಿಲ್ಲಾ ಮುಖ್ಯ ಆಯುಕ್ತರಾದ ಹೆಚ್.ಎಂ ಸಿದ್ದರಾಮಸ್ವಾಮಿ ಮಾತನಾಡಿ, ಕೊಪ್ಪಳ ಜಿಲ್ಲೆಯಲ್ಲಿ ಭಾರತ ಸ್ಕೌಟ್ಸ್ ಮತ್ತು ಗೈಡ್ಸ್ನ 82 ಕಬ್, 49 ಫ್ಲಾಕ್, 334 ಸ್ಕೌಟ್ಸ್, 258 ಗೈಡ್ಸ್, 66 ರೋರ್ಸ್, 29 ರೇಂಜ್ಸ್ ಸೇರಿದಂತೆ ಒಟ್ಟು 818 ನಮ್ಮ ಸಂಸ್ಥೆಯ ಸದಸ್ಯ-ರಿದ್ದಾರೆ ಎಂದು ಮಾಹಿತಿ ನೀಡಿದರು.

*ಧ್ವಜ ಚೀಟಿಗಳ ಬಿಡುಗಡೆ:* ಸ್ಕೌಟ್ಸ್ & ಗೈಡ್ಸ್ ಧ್ವಜ ಸ್ಥಾಪನಾ ದಿನಾಚರಣೆ ನಿಮಿತ್ತ ಧ್ವಜ ಚೀಟಿಗಳನ್ನು ಜಿಲ್ಲಾಧಿಕಾರಿಗಳು ಬಿಡುಗಡೆ ಮಾಡಿದರು.

ಪದವಿ ಪೂರ್ವ ಶಿಕ್ಷಣ ಇಲಾಖೆ ಉಪನಿರ್ದೇಶಕ ಜಗದೀಶ್, ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕ ಎಸ್. ಎಸ್ ಬಿರಾದಾರ್, ಜಿಲ್ಲಾ ವಾರ್ತಾ ಧಿಕಾರಿ ಡಾ.ಸುರೇಶ್ ಜಿ., ಕೊಪ್ಪಳ ಜಿಲ್ಲಾ ಗೈಡ್ಸ್ ಆಯುಕ್ತೆ ಅರುಣಾ ವಸ್ತ್ರದ್, ಸ್ಕೌಟ್ಸ್ & ಗೈಡ್ಸ್ ಸಂಸ್ಥೆಯ ಜಿಲ್ಲಾ ಕಾರ್ಯದರ್ಶಿ ಮಾರುತಿ ಆರೇರ್, ಜಿಲ್ಲಾ ಖಜಾಂಚಿ ಪ್ರಹಲ್ಲಾದ್ ಬಡಿಗೇರ್, ಜಿಲ್ಲಾ ಜಂಟಿ ಕಾರ್ಯದರ್ಶಿ ದ್ರಾಕ್ಷಾಯಣಿ ಬಂಡಿ ಸೇರಿ ಪದಾಧಿಕಾರಿಗಳು ಉಪಸ್ಥಿತರಿದ್ದರು.

*ಸ್ವಚ್ಛತಾ ಮತ್ತು ಆರೋಗ್ಯ ಜಾಗೃತಿ ಜಾಥಕ್ಕೆ ಚಾಲನೆ:* ಭಾರತ್ ಸ್ಕೌಟ್ಸ್ ಮತ್ತು ಗೈಡ್ಸ್ ಸಂಸ್ಥಾಪನಾ ದಿನಾಚರನೆ ಪ್ರಯುಕ್ತ ಜಿಲ್ಲಾ ಪಂಚಾಯತ್, ಶಾಲಾ ಶಿಕ್ಷಣ ಇಲಾಖೆ, ಸ್ಕೌಟ್ಸ್ & ಗೈಡ್ಸ್ ಕೊಪ್ಪಳ ಜಿಲ್ಲಾ ಸಂಸ್ಥೆಯ ಸಹಯೋಗದಲ್ಲಿ ಹಮ್ಮಿಕೊಂಡ ಸ್ವಚ್ಛತಾ ಮತ್ತು ಆರೋಗ್ಯ ಜಾಗೃತಿ ಜಾಥ-'ಕ್ಕೆ ಜಿಲ್ಲಾಧಿಕಾರಿಗಳು ಹಸಿರು ನಿಶಾನೆ ತೋರಿಸುವುದರ ಮೂಲಕ ಜಿಲ್ಲಾಡಳಿತದ ಭವನದ ಆವರಣದಲ್ಲಿ ಚಾಲನೆ ನೀಡಿದರು. ಈ ವೇಳೆ ವಿವಿಧ ಇಲಾಖೆಗಳ ಅಧಿಕಾರಿಗಳು ಹಾಗೂ ಸ್ಕೌಟ್ಸ್ & ಗೈಡ್ಸ್ ಕೊಪ್ಪಳ ಜಿಲ್ಲಾ ಸಂಸ್ಥೆಯ ಪದಾಧಿಕಾರಿಗಳಿದ್ದರು.

# ರೈತರ ಬಾಳಿಗೆ ಕೊಳ್ಳಿ ಇಟ್ಟ ದಟ್ಟ ಮಂಜು

## ಇಬ್ಬನಿಯಿಂದ ಉದುರುತ್ತಿರುವ ತೊಗರಿ ಬೆಳೆಯ ಹೂವು: ಬರಡಾದ ಬೆಳೆ

**ಇಂಡಿ:** ಮಂಜಿನಿಂದ ತಾಲೂಕಿನಲ್ಲಿ ತೊಗರಿ ಬೆಳೆ ಅಕ್ಷರಶಃ ಕಮರಿದೆ. ದಟ್ಟ ಮಂಜು ಕವಿಯುತ್ತಿದ್ದರಿಂದ ತೊಗರಿ ಬೆಳೆಯ ಮೇಲೆ ಪರಿಣಾಮ ಬೀರುತ್ತಿದೆ. ತೊಗರಿ ಮೊಗ್ಗುವಿನಿಂದ ಕೂಡಿದೆ. ಆದರೆ ಬೆಳಗ್ಗೆ ಮಂಜಿನ ವಾತಾವರಣ ದಿಂದ ಹೂ ಉದುರುವಿಕೆ, ಎಲೆ ಹಾಗೂ ಗಿಡದ ಮೇಲೆ ಕಂದು ಚುಕ್ಕೆ ಕಾಣಿಸಿಕೊಳ್ಳುತ್ತಿದ್ದರಿಂದ ಇಳುವರಿ ಕುಸಿಯುವ ಸಾಧ್ಯತೆಗಳಿವೆ ಎನ್ನುತ್ತಾರೆ ಕೃಷಿ ಇಲಾಖೆ ಅಧಿಕಾರಿಗಳು.

ತಾಲೂಕಿನಲ್ಲಿ ರೈತರು ಬೆಳೆಯುತ್ತಿದ್ದ ತೊಗರಿಗೆ ಪ್ರತಿ ವರ್ಷ ಉತ್ತಮ ಬೆಲೆ ಮಾರುಕಟ್ಟೆಯಲ್ಲಿ ದೊರೆಯುವದರಿಂದ ರೈತರು ಹೆಚ್ಚು ತೊಗರಿ ಬೆಳೆಯುತ್ತಿದ್ದಾರೆ. ತಾಲೂಕಿನ ಒಟ್ಟು ಒಂದು ಲಕ್ಷ 20 ಸಾವಿರ ಹೇಕ್ಟರ ಪ್ರದೇಶದಲ್ಲಿ ತೊಗರಿ ಬಿತ್ತನೆ ಮಾಡಲಾಗಿದೆ. ಆದರೆ ತೊಗ-ರಿಗೆಹವಾಮಾನ ವೈಪರೀತ ಪೆಟ್ಟು ಕೊಡುತ್ತಿದೆ. ರಾತ್ರಿಯಿಂದಲೇ ಮಂಜು ಮುಸುಕಿದ ವಾತಾವರಣ ಸೃಷ್ಟಿಯಾಗುತ್ತಿದೆ.ನಸುಕಿನ ಜಾವ ಅಧಿಕವಾಗುವ ಮಂಜು ಬೆಳಗ್ಗೆ 8 ರ ವರೆಗೂ ಇರುತ್ತದೆ. ಇದರಿಂದ ಉಳಿದ ಬೆಳೆಗೂ ಮಂಜು ಕಂಟಕವಾಗಲಿದೆ ಎನ್ನುತ್ತಾರೆ ರೈತರು. ಮಂಜಿನಿಂದ ತೊಗರಿ ಮೊಗ್ಗಿನ ಕೊನೆಯ ಭಾಗ ಸುಟ್ಟಂತೆ ಆಗಲಿದೆ. ಇದರಿಂದ ಹಾನಿಯಾಗುವ ಸಾಧ್ಯತೆ ಇದೆ.



**ಪ್ರಸಕ್ತ ಸನ್ನಿವೇಶದಲ್ಲಿ ಮುಂಜಾನೆ ಇಬ್ಬನಿಯಿಂದ ತೊಗರಿ ಬೆಳೆಯಲ್ಲಿ ಎಲೆ ಚಿಕ್ಕೆರೋಗ ಹೆಚ್ಚಾಗುವ ಸಾಧ್ಯತೆ ಇದ್ದು ರೋಗದ ಲಕ್ಷಣಗಳು ಸಣ್ಣ ಗೋಲಾಕಾರದ ಕಂದು ಬಣ್ಣದ ಚುಕ್ಕೆಗಳು ಎಲೆಯ ಮೇಲೆ ಕಂಡು ಬರುತ್ತವೆ. ಈ ಚುಕ್ಕೆಗಳು ಸಂಖ್ಯೆ ಮತ್ತು ಗಾತ್ರದಲ್ಲಿ ಬೆಳೆದು ಒಂದನ್ನೊಂದು ಕೂಡಿಕೊಂಡು ಎಲೆಯ ಬಹುಭಾಗವನ್ನು ಆವರಿಸುವುದು. ರೋಗ ತೀರ್ವ ವಾದಂತೆ ಎಲೆಗಳೆಲ್ಲಾ ಉದುರಿಹೋಗಿಗಿಡ ಬೇಳಾಗಿ ಕಾಣುತ್ತದೆ.**

- **ಡಾ. ಪ್ರಕಾಶ** ಕೃಷಿ ವಿಜ್ಞಾನಿ ಕೃಷಿ ವಿಜ್ಞಾನ ಕೇಂದ್ರ

ಕಾರ್ಬನ ಡೈಜಿಮ್ 50 ಡಬ್ಲೂಪಿ ಒಂದು ಗ್ರಾಂ ಅಥವಾ ಹೆಕ್ಸಾಕೊನೊಝೋಲ್ 5 ಇಸಿ ಒಂದು ಎಂ ಎಲ್, ಜೊತೆಗೆ 0.5 ಎಂಎಲ್ ಡಬ್ಲೂ ಎಎ ಪ್ರತಿ ಲೀಟರ ನೀರಿಗೆ ಬೆರೆಸಿ ಸಿಂಪಡಿಸಿರಿ.ತೊಗರಿಯಲ್ಲಿ ಎಲೆ ಮೂದುಡುವಿಕೆ ಜೊಂಡೆ ಗಟ್ಟುವದು ನಿರ್ವಹಣೆಗೆ ಪ್ರೋಫೆನೊಪಾಸ 2 ಎಂಎಲ ಮತ್ತು ಕಾರಟಾಪ ಹೈಡ್ರೋಕ್ಲೋರೈಡ್ ಒಂದು ಗ್ರಾಂ ಜೊತೆಗೆ ಲಘುಪೋಷಕಾಂಶಗಳ ಮಿಶ್ರಣ ಫಲ್ಲ ಬೂಸ್ಟರನ್ನು 10 ಗ್ರಾಂ ಪ್ರತಿ ಲೀಟರಗೆ ನೀರಿಗೆ ಬೆರೆಸಿ ಸಿಂಪಡಿಸಬೇಕು.

-**ಡಾ. ಹೀನಾ** ವಿಜ್ಞಾನಿ ಕೃಷಿ ವಿಜ್ಞಾನ ಕೇಂದ್ರ ಇಂಡಿ

**ಪ್ರಸಕ್ತ ಸನ್ನಿವೇಶದಲ್ಲಿ ಮುಂಜಾನೆ ಇಬ್ಬನಿಯಿಂದ ತೊಗರಿ ಬೆಳೆಯಲ್ಲಿ ಎಲೆ ಚಿಕ್ಕೆರೋಗ ಹೆಚ್ಚಾಗುವ ಸಾಧ್ಯತೆ ಇದ್ದು ರೋಗದ ಲಕ್ಷಣಗಳು ಸಣ್ಣ ಗೋಲಾಕಾರದ ಕಂದು ಬಣ್ಣದ ಚುಕ್ಕೆಗಳು ಎಲೆಯ ಮೇಲೆ ಕಂಡು ಬರುತ್ತವೆ. ಈ ಚುಕ್ಕೆಗಳು ಸಂಖ್ಯೆ ಮತ್ತು ಗಾತ್ರದಲ್ಲಿ ಬೆಳೆದು ಒಂದನ್ನೊಂದು ಕೂಡಿಕೊಂಡು ಎಲೆಯ ಬಹುಭಾಗವನ್ನು ಆವ-ರಿಸುವುದು. ರೋಗ ತೀರ್ವ ವಾದಂತೆ ಎಲೆಗಳೆಲ್ಲಾ ಉದುರಿಹೋಗಿಗಿಡ ಬೇಳಾಗಿ ಕಾಣುತ್ತದೆ.**

- **ಡಾ.ಪ್ರಕಾಶ** ಕೃಷಿ ವಿಜ್ಞಾನಿಗಳು ಕೃಷಿ ವಿಜ್ಞಾನ ಕೇಂದ್ರ ಇಂಡಿ

## ವಿರೇಂದ್ರ ಹೆಗ್ಗಡೆ ಕಾರ್ಯ ಶ್ಲಾಘನೀಯ



**ಗೋಕಾಕ:** ವ್ಯಸನಿಗಳನ್ನು ದುಶ್ಚಟ ಗಳಿಂದ ಮುಕ್ತಗೊಳಿಸಿ ಅವರನ್ನು ಸನ್ಮಾರ್ಗಕ್ಕೆ ತರುವ ಮೂಲಕ ಅವರ ಕುಟುಂಬವನ್ನು ರಕ್ಷಣೆ ಮಾಡುವ ವಿರೇಂದ್ರ ಹೆಗಡೆ ಅವರ ಸಮಾಜ ಮುಖಿ ಕಾರ್ಯ ಶ್ಲಾಘನೀಯ ಎಂದು ಜ್ಞಾನ ಮಂದಿರದ ಧರ್ಮದರ್ಶಿ ಸುವರ್ಣ ಹೋಸಮಠ ಹೇಳಿದರು.

ಬುಧವಾರದಂದು ನಗರದ ಜ್ಞಾನ ಮಂದಿರದಲ್ಲಿ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ, ಅಖಿಲ ಕರ್ನಾಟಕ ಜನಜಾಗೃತ ವೇದಿಕೆ, ಶ್ರೀ ಧರ್ಮಸ್ಥಳ ಮಂಜುನಾಥೇಶ್ವರ ವ್ಯಸನಮುಕ್ತಿ ಮತ್ತು ಸಂಶೋಧನಾ ಕೇಂದ್ರ, ಕರ್ನಾಟಕ ರಾಜ್ಯ ಮಧ್ಯಪಾನ ಸಂಯಮ ಮಂಡಳಿ, ನಗರಸಭೆ ಮತ್ತು ಶೌರ್ಯ ವಿಪತ್ತು ನಿರ್ವಾಹಣ ಘಟಕ ಇವುಗಳ ಸಂಯುಕ್ತಾಶ್ರಯದಲ್ಲಿ ಹಮ್ಮಿಕೊಂಡ 1882ನೇ ಮಧ್ಯ ವರ್ಜನಾ ಶಿಬಿರವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಯುವ ಪೀಳಿಗೆ ದುಶ್ಚಟಗಳಿಂದ ದೂರವಿದ್ದು ಸಮಾಜಮುಖಿ ಕಾರ್ಯ ಗಳಲ್ಲಿ ತಮ್ಮನ್ನು ತೊಡಗಿಸಿಕೊಳ್ಳಬೇಕು. ವ್ಯಸನಿಗಳಾಗದೆ ಉದ್ಯೋಗಗಳಲ್ಲಿ ಸಕ್ರಿಯವಾಗಿ ತಮ್ಮ ಬದುಕನ್ನು ರೂಪಿಸಿಕೊಳ್ಳಿ ಯುವ ಶಕ್ತಿಯೇ ದೇಶದ ಆಸ್ತಿಯಾಗಿದ್ದು, ಉತ್ತಮ ನಾಗರಿಕರಾಗಿ ಬಲಿಷ್ಠ ಭಾರತ ನಿರ್ಮಿಸುವಂತೆ ಕರೆ ನೀಡಿದರು.

ನಗರಸಭೆ ಅಧ್ಯಕ್ಷ ಪ್ರಕಾಶ್ ಮುರಾರಿ, ಗಣ್ಯರಾದ ಅಶೋಕ ಪೂಜಾರಿ, ಸೋಮಶೇಖರ್ ಮಗದುಮ್ಮ, ನರಸಿಂಹ ಪೂಜಾರಿ, ಸುಭಾಷ್ ಅನಸಿ, ಡಾ.ರವೀಂದ್ರ ಅಂಟಿನ, ಡಾ.ರಮೇಶ ಪಟಗುಂದಿ, ಎಚ್.ಆರ್.ಲವಕುಮಾರ, ತಿಮ್ಮೇಶಿ, ಮಹಾಂತೇಶ ಪೂಜೇರಿ, ಭಾಸ್ಕರ್, ನಾಗಲಾಂಗ ಪೋತೇದಾರ, ವಕೀಲ ಬಿ.ಬಿ.ಬಿರನಗಡ್ಡಿ, ಸುರೇಶ ಇದ್ದರು.

# ಜೋಳಕ್ಕೆ ಬೆಂಬಲ ಬೆಲೆ ನಿಗದಿ



**ಗದಗ:** 2024-25 ನೇ ಸಾಲಿನ ಬೆಂಬಲ ಬೆಲೆ ಯೋಜನೆ ಯಡಿಯಲ್ಲಿ ರೈತರಿಂದ ಎಫ್.ಎ.ಕ್ಯೂ ಗುಣಮಟ್ಟದ ಬಿಳಿ ಜೋಳ ಉತ್ಪನ್ನವನ್ನು ಖರೀದಿಸಲು ಬೆಂಬಲ ಬೆಲೆ ನಿಗದಿಪಡಿಸಲಾಗಿದೆ. ನೋಂದಣಿ ಪ್ರಕ್ರಿಯೆಯಲ್ಲಿ ರೈತರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳಲು ಕ್ರಮ ವಹಿಸಬೇಕೆಂದು ಜಿಲ್ಲಾಧಿಕಾರಿ ಗೋವಿಂದರೆಡ್ಡಿ ತಿಳಿಸಿದರು.

ಜಿಲ್ಲಾಧಿಕಾರಿಗಳ ಸಭಾಭವ ನದಲ್ಲಿ ಮಂಗಳವಾರ 2024-25ನೇ ಸಾಲಿನ ಮುಂಗಾರು ಋತುವಿನಲ್ಲಿ ಕನಿಷ್ಠ ಬೆಂಬಲ ಬೆಲೆ ಯೋಜನೆಯಡಿಯಲ್ಲಿ ಜೋಳ ಕೃಷಿ ಹುಟ್ಟುವಳಿ ಖರೀದಿಸುವ ಕುರಿತು ಜರುಗಿದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಸರ್ಕಾರದ ಮಾನದಂಡಗಳನ್ವಯ ಎಫ್.ಎ.ಕ್ಯೂ ಗುಣಮಟ್ಟವನ್ನು ದೃಢೀಕರಿಸಲು ಕ್ರಮ ವಹಿಸಬೇಕು. ಖರೀದಿ ಏಜೆನ್ಸಿಯವರು ತಮ್ಮ ಸಂಸ್ಥೆಯ ಹಿರಿಯ ಅಧಿಕಾರಿಗಳು ಮೇಲುಸ್ತುವಾರಿ ತಪಾಸಣೆ ಕೈಗೊಳ್ಳಬೇಕು. ಪ್ರತಿ ಖರೀದಿ ಕೇಂದ್ರಕ್ಕೆ ಗ್ರೇಡರ್‌ಗಳನ್ನು ನೇಮಿಸಬೇಕು ಎಂದು ಜಿಲ್ಲಾಧಿಕಾರಿ ಗೋವಿಂದರೆಡ್ಡಿ ಸೂಚಿಸಿದರು.

ಆಹಾರ ಇಲಾಖೆಯ ಜಂಟಿ ನಿರ್ದೇಶಕರಾದ ವಿನೋದಕುಮಾರ್ ಹೆಗ್ಗಳಗಿ ಮಾತನಾಡಿ ಸರ್ಕಾರದ ಆದೇಶದನ್ವಯ ಮುಂಗಾರು ಋತುವಿನ ಬೆಂಬಲ ಬೆಲೆ ಯೋಜನೆಯಡಿಯಲ್ಲಿ ರೈತರಿಂದ ಎಫ್.ಎ.ಕ್ಯೂ ಗುಣಮಟ್ಟದ ಬಿಳಿ ಜೋಳ ಉತ್ಪನ್ನಖರೀದಿಸಲು ಕರ್ನಾಟಕ ರಾಜ್ಯ ಸಹಕಾರ ಮಾರಾಟ ಮಹಾಮಂಡಳ (ಮಾರ್ಕಫೆಡ್) ಸಂಸ್ಥೆಯನ್ನು ರಾಜ್ಯದ ವತಿಯಿಂದ ಖರೀದಿ ಸಂಸ್ಥೆಯನ್ನಾಗಿ ನೇಮಿಸಿ ಆದೇಶಿಸಿದೆ. ಸರ್ಕಾರದ ಆದೇಶದನ್ವಯ ಬಿಳಿಜೋಳ- ಹೈಬ್ರೀಡ್ - ಪ್ರತಿ ಕ್ವಿಂಟಾಲ್ ಗೆ 3371 ರೂ. ಹಾಗೂ ಬಿಳಿ ಜೋಳ -ಮಾಲ್ದಂಡಿ - ಪ್ರತಿ ಕ್ವಿಂಟಾಲ್ ಗೆ 3421 ರೂ. ಬೆಂಬಲ ಬೆಲೆ ನಿಗದಿಪಡಿಸಲಾಗಿದೆ ಎಂದು ಸಭೆಗೆ ವಿವರಿಸಿದರು.

ಕೇಂದ್ರ ಸರ್ಕಾರದ ಹಾಗೂ ರಾಜ್ಯ ಸರ್ಕಾರದ ಬೆಂಬಲ ಬೆಲೆ ಖರೀದಿ ಮಾರ್ಗಸೂಚಿಗಳನ್ವಯ ಬಿಳಿ ಜೋಳ ಉತ್ಪನ್ನ ಖರೀದಿಗೆ 1-12-2024 ರಿಂದ ನೋಂದಣಿ ಕಾರ್ಯ ಕೈಗೊಳ್ಳುವುದು. ಹಾಗೂ 1-1-2025 ರಿಂದ 31-3-2025ರ ಅವಧಿಯಲ್ಲಿ ಖರೀದಿ ಪ್ರಕ್ರಿಯೆ ಜರುಗಿಸುವುದು. ಜಿಲ್ಲೆಯ 4 ಕಡೆ ಖರೀದಿ ಕೇಂದ್ರಗಳನ್ನು ತೆರೆಯಲು ತೀರ್ಮಾನಿಸಲಾಯಿತು.ಜಂಟಿ ಕೃಷಿ ನಿರ್ದೇಶಕರು, ಸಹಕಾರಿ ಸಂಘಗಳ ಇಲಾಖೆಯ ಉಪನಿಬಂಧಕರು, ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ ಕಾರ್ಯದರ್ಶಿಗಳು ವಿವಿಧ ಇಲಾಖೆಯ ಅಧಿಕಾರಿಗಳು ಹಾಜರಿದ್ದರು. ಬೆಂಬಲ ಬೆಲೆ ಯೋಜನೆಯಡಿ ಜೋಳ ಖರೀದಿ ಕೇಂದ್ರಗಳು: ಗದಗ ಎಪಿಎಂಸಿ ಮಾರುಕಟ್ಟೆ ಪ್ರಾಂಗಣ ; ಲಕ್ಷೇಶ್ವರ ಎಪಿಎಂಸಿ ಮಾರುಕಟ್ಟೆ ಪ್ರಾಂಗಣ ; ಮುಂಡರಗಿ ಎಪಿಎಂಸಿ ಮಾರುಕಟ್ಟೆ ಪ್ರಾಂಗಣ ; ರೋಣ ಎಪಿಎಂಸಿ ಮಾರುಕಟ್ಟೆ ಪ್ರಾಂಗಣ.

## ಸುಧಾರಿತ ಉಪಕರಣ ಸೌಲಭ್ಯ ಕಾರ್ಯಕ್ರಮದಡಿ ಅರ್ಜಿ ಆಹ್ವಾನ

**ಧಾರವಾಡ:** 2024-25 ನೇ ಸಾಲಿಗೆ ಜಿಲ್ಲಾ ವಲಯ ಯೋಜನೆಯಡಿ ಗ್ರಾಮೀಣ ಭಾಗದ ಕುಶಲಕರ್ಮಿಗಳಿಗೆ ಉಚಿತವಾಗಿ ವಿದ್ಯುತ್‌ಚಾಲಿತ ಹೊಲಿಗೆ ಯಂತ್ರ, ಬಡಗಿತನ ಸುಧಾರಿತ ಉಪಕರಣ ಮತ್ತು ಗೌಂಡಿ ಸುಧಾರಿತ ಉಪಕರಣ ಕಾರ್ಯಕ್ರಮದಡಿ ಸೌಲಭ್ಯ ನೀಡಲು ಅರ್ಹರಿಂದ ಅರ್ಜಿ ಆಹ್ವಾನಿಸಲಾಗಿದೆ. ಧಾರವಾಡ ಜಿಲ್ಲೆಯ ಗ್ರಾಮ ಪಂಚಾಯತ ವ್ಯಾಪ್ತಿಗೆ ಒಳಪಡುವ ಗ್ರಾಮೀಣ ಭಾಗದ ಕುಶಲಕರ್ಮಿಗಳು ಸೂಕ್ತ ದಾಖಲೆಗಳೊಂದಿಗೆ ಜನವೇರಿ 6, 2025 ರೊಳಗಾಗಿ ಜುಚಿಡಿತಿಚಿಜ.ಟಿಛಿ.ಎಟಿ ವೆಬ್‌ಸೈಟ ಮೂಲಕ ಅರ್ಜಿ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ದೂರವಾಣಿ: 0836-2324798 ಗೆ ಸಂಪರ್ಕಿಸಬಹುದು ಎಂದು ಕೈಗಾರಿಕಾ ವಿಭಾಗ ಜಿಲ್ಲಾ ಪಂಚಾಯತ, ಉಪ ನಿರ್ದೇಶಕರು (ಗ್ರಾಕೈ) ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಮಕ್ಕಳ ಪ್ರೋತ್ಸಾಹ ಧನ 1 ರಿಂದ 2 ಲಕ್ಷಕ್ಕೆ ಹೆಚ್ಚಳ



**ಧಾರವಾಡ:** ಐಐಟಿ, ಐಐಎಂ, ಐಐ-ಎಸ್‌ಸಿ, ಎನ್‌ಐಟಿ (ಖಖಖಿ/ಖಖಒ/ಖಖಖಅ /ಓಖಖಿ) ಯಂತಹ ರಾಷ್ಟ್ರೀಯ ಸಂಸ್ಥೆಗಳಲ್ಲಿ ಓದುವ ಎಸ್‌ಸಿ ಮತ್ತು ಎಸ್‌ಟಿ ವಿದ್ಯಾರ್ಥಿಗಳ ಪ್ರೋತ್ಸಾಹ ಧನವನ್ನು 1 ರಿಂದ 2 ಲಕ್ಷಕ್ಕೆ ಹೆಚ್ಚಳ ಮಾಡಿ ಸರ್ಕಾರವು ಆದೇಶ ಹೊರಡಿಸಿದ್ದು ಇದು ಪರಿಶಿಷ್ಟ ಸಮುದಾಯದ ವಿದ್ಯಾರ್ಥಿ ಗಳ ಹೆಚ್ಚಿನ ಶೈಕ್ಷಣಿಕ ಸಾಧನೆಗೆ ಕಾರಣ ವಾಗಲಿದೆ ಎಂದು ಮಾನ್ಯ ಸಮಾಜ ಕಲ್ಯಾಣ ಸಚಿವರಾದ ಡಾ ಹೆಚ್ ಸಿ ಮಹದೇವಪ್ಪನವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಪಿಯುಸಿ ಪರೀಕ್ಷೆಯಲ್ಲಿ 95ಕ್ಕೂ ಹೆಚ್ಚಿನ ಅಂಕ ಪಡೆದು, ನೀಟ್ ಪ್ರವೇಶ ಪರೀಕ್ಷೆಯ ಮೂಲಕ ಸರ್ಕಾರಿ ಕೋಟಾ ದಡಿ ಪ್ರವೇಶ ದೊರಕದೇ ಮ್ಯಾನೇಜ್ ಮೆಂಟ್ ಕೋಟಾದಡಿ ಎಂಬಿಬಿಎಸ್ ಕೋರ್ಸ್‌ಗೆ ಸೀಟು ಪಡೆದುಕೊಂಡ ಪ.ಜಾತಿಯ ಮಕ್ಕಳಿಗೆ 25 ಲಕ್ಷ ರೂ. ಶುಲ್ಕ ಧನ ಒದಗಿಸಲು ಸರ್ಕಾರ ತೀರ್ಮಾನಿಸಿದೆ.

ಎಂಬಿಬಿಎಸ್ ಪದವಿಯನ್ನು ಪಡೆಯುತ್ತಿರುವ ಪರಿಶಿಷ್ಟ ಜಾತಿಯ ವಿದ್ಯಾರ್ಥಿಗಳು ಮೊದಲ ವರ್ಷ 60% ಗೂ ಹೆಚ್ಚಿನ ಅಂಕಗಳನ್ನು ಪಡೆದು ಉತ್ತೀರ್ಣ ರಾದರೆ ಅವರಿಗೆ ಅವರಿಗೆ ಮತ್ತೆ 25 ಲಕ್ಷ ರೂ. ಪ್ರೋತ್ಸಾಹ ಧನವನ್ನು ನೀಡಲಾಗುವುದು.

ಶಿಕ್ಷಣವೇ ಸಮಾಜವನ್ನು ಬದಲಿಸುವ ಕೀಲಿಕೈ ಎಂಬ ಅಂಶವನ್ನು ಮನಗಂಡು ಈ ಒಂದು ಮಹತ್ವದ ಘೋಷಣೆಯನ್ನು ಸರ್ಕಾರವು ಮಾಡಿದ್ದು, ಇದರಿಂದ ಉನ್ನತ ಶಿಕ್ಷಣ ಮಾಡಬೇಕೆಂಬ ವಿದ್ಯಾರ್ಥಿಗಳ ಕನಸ್ಸು ನನಸಾಗಲಿದೆ.

ಐಐಟಿ ಐಐಎಂ ನಂತಹ ಶಿಕ್ಷಣ ಸಂಸ್ಥೆಗಳಲ್ಲಿ ಓದುವಂತಹ ಪರಿಶಿಷ್ಟ ಜಾತಿ ಮತ್ತು ಪಂಗಡದ ಮಕ್ಕಳು ದೇಶ ನಿರ್ಮಾಣದಲ್ಲಿ ಸಕ್ರಿಯವಾಗಿ ತೊಡಗಬೇಕು, ಆ ಮೂಲಕ ಸಮೃದ್ಧ ಮತ್ತು ಸಶಕ್ತ ರಾಷ್ಟದ ನಿರ್ಮಾಣವಾಗಬೇಕು ಎಂದು ಮಾನ್ಯ ಸಚಿವರು ತಿಳಿಸಿದರು.

ಇನ್ನು ಬಡತನದ ಬೇಗೆಗೆ ಸಿಲುಕಿ ಎಂಬಿಬಿಎಸ್ ಓದುವ ಬಯಕೆ ಇರುವಂತಹ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಸರ್ಕಾರಿ ಕೋಟಾದಡಿ ಸೀಟು ಸಿಗದೇ ಅವರು ಖಾಸಗೀ ಸಂಸ್ಥೆಗಳಲ್ಲಿ ಓದುತ್ತಿದ್ದರೆ, ಅಂತಹ ಪ್ರತಿಭಾವಂತ ಮಕ್ಕಳ ಶುಲ್ಕವನ್ನು ಸರ್ಕಾರ ಭರಿಸಲಿದ್ದು, ಇದಕ್ಕಾಗಿ ಆರಂಭಿಕವಾಗಿ 25 ಲಕ್ಷ ರೂ. ನೀಡುವ ನಿರ್ಧಾರವನ್ನು ತೆಗೆದುಕೊಂಡಿದೆ.

ಈಗಾಗಲೇ ಪ್ರಬುದ್ಧ ಯೋಜನೆಯಡಿ ವಿದೇಶಿ ವಿದ್ಯಾಲಯದಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳ ಸಂಖ್ಯೆಯನ್ನು ಹೆಚ್ಚಿಸಿರುವ ನಮ್ಮ ಸರ್ಕಾರವು ಇದೀಗ ಮಕ್ಕಳ ಉತ್ತಮ ಶಿಕ್ಷಣವನ್ನು ಗಮನದಲ್ಲಿಟುಕೊಂಡು ಮುಖ್ಯ ಘೋಷಣೆಯನ್ನು ಮಾಡಿರುತ್ತದೆ.

ಹೀಗಾಗಿ ಬಾಬಾ ಸಾಹೇಬರ ಆಶಯದಂತೆ ನಮ್ಮೆಲ್ಲಾ ಪರಿಶಿಷ್ಟ ಜಾತಿ ಮತ್ತು ಪಂಗಡದ ವಿದ್ಯಾರ್ಥಿಗಳು ಶಿಕ್ಷಣ ಪಡೆಯುವ ನಿಟ್ಟಿನಲ್ಲಿ ಹೆಚ್ಚು ಆಸಕ್ತಿ ಹೊಂದಿ, ಶ್ರಮ ಹಾಕಿ ಓದಬೇಕೆಂದು ಮಾನ್ಯ ಸಚಿವರು ಆಶಯವನ್ನು ವ್ಯಕ್ತಪಡಿಸಿದ್ದಾರೆ.

# ಮಕ್ಕಳು ಬರ್ಗರ್ ಪಿಜ್ಜಾ ಬೇಕು ಎಂದು ಹಠ ಮಾಡುತ್ತಾರಾ? ಹಾಗಾದ್ರೆ ಪೋಷಕರು ಈ ಟಿಪ್ಸ್ ಫಾಲೋ ಮಾಡಿ



ಪೋಷಕರು ಈ ಕ್ರಮಗಳನ್ನು ಪಾಲಿಸಿಕೊಂಡು ಹೋದರೆ, ಆಗ ಮಕ್ಕಳು ಯಾವಾಗಲೂ ಅನಾರೋಗ್ಯಕರವಾಗಿ ಇರುವ ಆಹಾರ ಸೇವನೆ ಮಾಡುವುದನ್ನು ತಪ್ಪಿಸಬಹುದು ಮತ್ತು ಅವರ ದೇಹದಲ್ಲಿ ಬೊಜ್ಜು ನಿರ್ಮಾಣವಾಗುವುದನ್ನು ತಡೆದು, ಆರೋಗ್ಯಕರ ಜೀವನ ಸಾಗಿಸುವಂತೆ ಮಾಡಬಹುದು.

ಮನೆಯಲ್ಲಿ ಎಷ್ಟೇ ಒಳ್ಳೆಯ ಆಹಾರ ಮಾಡಿ ಮಕ್ಕಳಿಗೆ ನೀಡಿದರೂ ಅದು ಅವರ ಬಾಯಿಗೆ ರುಚಿಸದು. ಹೀಗಾಗಿ ಅವರು ರಸ್ತೆ ಬದಿ ಹಾಗೂ ಹೊರಗಡೆ ಸಿಗುವಂತಹ ಬೇರೆ ಬೇರೆ ರೀತಿಯ ಫಾಸ್ ಫುಡ್ ಗೆ ಒಗ್ಗಿಕೊಂಡಿರುವರು. ಇದು ಶುಚಿತ್ವವಿಲ್ಲದೆ, ಅನಾರೋಗ್ಯಕ್ಕೆ ಉಂಟು ಮಾಡುವುದು. ಇದು ಮಕ್ಕಳಲ್ಲಿ ಅನಾರೋಗ್ಯಕರ ಆಹಾರ ಕ್ರಮಕ್ಕೆ ಕಾರಣವಾಗಬಹುದು. ಮಕ್ಕಳಲ್ಲಿ ಇದರ ಪರಿಣಾಮವಾಗಿ ಬೊಜ್ಜು ಆವರಿಸುವುದು. ಬರ್ಗರ್, ಪಿಜ್ಜಾ, ಚಿಪ್ಸ್ ಮತ್ತು ಚಾಕಲೇಟ್ ನಂತಹ ಆಹಾರಗಳನ್ನು ಹೆಚ್ಚು ಸಂಸ್ಕ–ರಿಸಲಾಗುತ್ತದೆ. ಇದು ಆರೋಗ್ಯಕ್ಕೆ ಒಳ್ಳೆಯದು.

ಪೋಷಕರು ತಮ್ಮ ಮಕ್ಕಳನ್ನು ಅನಾರೋಗ್ಯಕರ ಆಹಾರದಿಂದ ದೂರವಿಡಲು ತುಂಬಾ ಶ್ರಮ ವಹಿಸಬೇಕಾಗುತ್ತದೆ. ಇದರ ಜತೆಗೆ ಮಕ್ಕಳಿಗೆ ಪೋಷಕಾಂಶಗಳು ಇರುವ ಆಹಾರ ನೀಡಿ, ಅವರನ್ನು ದೈಹಿಕವಾಗಿಯೂ ಚಟುವಟಿಕೆಯಿಂದ ಇರುವಂತೆ ಮಾಡಬೇಕು. ಸಂಸ್ಕರಿಸಲ್ಪಟ್ಟಿರುವಂತಹ ಆಹಾರಗಳಲ್ಲಿ ಯಾವುದೇ ರೀತಿಯ ಪೋಷಕಾಂಶಗಳು ಕೂಡ ಇರುವುದಿಲ್ಲ. ಹೀಗಾಗಿ ಇದು ಆರೋಗ್ಯಕ್ಕೆ ಶೂನ್ಯ ಲಾಭ ನೀಡುವುದು. ಆದರೆ ಪೋಷಕರು ಈ ಕ್ರಮಗಳನ್ನು ಅನುಸರಿಸಿಕೊಂಡು ಹೋದರೆ ಆಗ ಖಂಡಿತವಾಗಿಯೂ ಮಕ್ಕಳು ಆರೋಗ್ಯಕರ ಕ್ರಮವನ್ನು ಪಾಲಿಸಬಹುದು.

ಪೋಷಕರಿಗೆ ಈ ವಿಚಾರ ಗೊತ್ತಿರಲಿ...

ಯಾವಾಗಲೂ ಮಕ್ಕಳಿಗೆ ತಮ್ಮ ಪೋಷಕರೇ ಹೀರೋಗಳಾಗಿರುವರು. ಹೀಗಾಗಿ ಮಕ್ಕಳಿಗೆ ಆರೋಗ್ಯಕರ ಆಹಾರ ನೀಡುವ ಮೊದಲು, ನೀವೇ ಅದನ್ನು ಪಾಲಿಸಿರಿ. ಮನೆಯ ಸಂಪೂರ್ಣ ಆಹಾರ ಕ್ರಮದಲ್ಲಿ ಎಲ್ಲಾ ರೀತಿಯ ಪೋಷಕಾಂಶಗಳು ಇರಲಿ ಮತ್ತು ಇದನ್ನು ಮಕ್ಕಳಿಗೂ ನೀಡಿ.

ನಮಗೆಲ್ಲಾ ಗೊತ್ತೇ ಇರುವ ಹಾಗೆ ಇಂದಿನ ದಿನಗಳಲ್ಲಿ ಟಿವಿ ಜಾಹೀರಾತುಗಳಲ್ಲಿ ಬರುವ ವಿವಿಧ ಬಗೆಯ ತಿನಿಸುಗಳಿಗೆ ಮಕ್ಕಳ ಮನಸ್ಸು ಬೇಗನೇ ಕರಗಿ ಹೋಗುತ್ತವೆ! ಅಷ್ಟೇ ಅಲ್ಲದೆ ಅಂತಹದ್ದೇ ಆಹಾರ ಬೇಕು ಎಂದ ಹಠ ಮಾಡಲು ಶುರು ಮಾಡುವರು.ಇದು ಆರೋಗ್ಯಕಾರಿ ಅಲ್ಲವೆಂದು ಹೇಳಿದರೂ ಅವರಿಗೆ ಅದು ಅರ್ಥವಾಗದು.

ಈ ಬಗ್ಗೆ ಆರೋಗ್ಯ ತಜ್ಞರು ಕೂಡ ಹೇಳುವ ಹಾಗೆ, ಅನಾರೋಗ್ಯಕರ ಆಹಾರ ಉತ್ಪನ್ನಗಳಲ್ಲಿ ಕಡಿಮೆ ಗುಣಮಟ್ಟದ ಎಣ್ಣೆ, ಕೃತಕ ಸಕ್ಕರೆಯಾಂಶ ಹಾಗೂ ಅನಾರೋಗ್ಯಕರ ಕೊಬ್ಬು ಮತ್ತು ಕೃತಕ ರುಚಿಕಾರಕಗಳು ಹೆಚ್ಚಾಗಿರುವು ದರಿಂದ, ಮಕ್ಕಳಲ್ಲಿ ಅನಾರೋಗ್ಯ ಸಮಸ್ಯೆಗಳು ಸಣ್ಣ ವಯಸ್ಸಿಗೆಯೇ ಕಾಣಿಸಿಕೊಳ್ಳುತ್ತವೆ.

ಇಂದಿನ ದಿನಗಳಲ್ಲಿ ಮಕ್ಕಳು ಅತಿಯಾಗಿ ಸಕ್ಕರೆಯುಕ್ತ ಆಹಾರ ಮತ್ತು ಪಾನೀಯಗಳನ್ನು ಸೇವನೆ ಮಾಡುವರು. ಇದರಿಂದಾಗಿ ಬೊಜ್ಜು, ದಂತ ಸಮಸ್ಯೆಗಳು ಮತ್ತು ಟೈಪ್ 2 ಮಧುಮೇಹದ ಅಪಾಯವು ಬರುವುದು. ಹೀಗಾಗಿ ಮಕ್ಕಳನ್ನು ಇಂತಹ ಸಕ್ಕರೆಯುಕ್ತ ಆಹಾರ ಮತ್ತು ಪಾನೀಯ ಗಳಿಂದ ದೂರವಿಡಬೇಕು. ಇದರ ಬದಲಿಗೆ ಹಣ್ಣುಗಳನ್ನು ಮಕ್ಕಳಿಗೆ ನೀಡಿದರೆ ಆಗ ಅದರಲ್ಲಿ ಒಳ್ಳೆಯ ನೈಸರ್ಗಿಕ ಸಕ್ಕರೆ ಅಂಶವು ಇರುವುದು.


**ಜಂಕ್ ಫುಡ್ ಕಡೆಗಣಿಸಿ**

ಮನೆಯಲ್ಲಿ ಸಕ್ಕರೆಯುಕ್ತ ಪಾನೀಯ ಹಾಗೂ ಅನಾರೋಗ್ಯಕರ ಆಹಾರವನ್ನು ಕಡೆಗಣಿಸಿ. ಮನೆಯಲ್ಲಿ ಸಿಹಿ, ತಂಪು ಪಾನೀಯಗಳು ಮತ್ತು ಸಂಸ್ಕ–ರಿಸಿದ ಆಹಾರಗಳನ್ನು ತಂದು ಶೇಖರಣೆ ಮಾಡುವುದನ್ನು ಮೊದಲಿಗೆ ನಿಲ್ಲಿಸಿ. ಇದ–ರಿಂದ ಮಕ್ಕಳಿಗೆ ಅನಾರೋಗ್ಯಕರ ಆಹಾರವು ಸಿಗುವುದು ಕಡಿಮೆ ಆಗುವುದು.

ಏಕೆಂದರೆ ಇಂದಿನ ದಿನಗಳಲ್ಲಿ ಮಕ್ಕಳು ಅತಿಯಾಗಿ ಕೃತಕ ಸಕ್ಕರೆಯಾಂಶ ಹೆಚ್ಚಿರುವ ಪಾನೀಯ ಹಾಗೂ ಆಹಾರಗಳ ಕಡೆಗೆ ಹೆಚ್ಚಿನ ಗಮನಹರಿಸು ತ್ತಿರುವುದ–ರಿಂದ, ಸಣ್ಣವಯಸ್ಸಿಗೆಯೇ ಬೊಜ್ಜು, ಹಲ್ಲಿನ ಸಮಸ್ಯೆಗಳು ಮತ್ತು ಟೈಪ್ 2 ದಂತಹ ಮಧುಮೇಹದ ಅಪಾಯ ಕಾಣಿಸಿಕೊಳ್ಳುವ ಸಾಧ್ಯತೆ ಹೆಚ್ಚಿರುತ್ತದೆ ಎಂದು ತಜ್ಞರು ಕೂಡ ಎಚ್ಚರಿಕೆಯನ್ನು ನೀಡುತ್ತಾರೆ.

ಇಷ್ಟು ಮಾತ್ರವಲ್ಲ ತಪ್ಪಿಯೂ ಕೂಡ ಮಕ್ಕಳಿಗೆ ಸಂಸ್ಕರಿಸಿದ ಮತ್ತು ಪ್ಯಾಕ್ ಮಾಡಿರುವಂತಹ ಆಹಾರಗಳನ್ನು ನೀಡಬೇಡಿ. ಯಾಕೆಂದ್ರೆ ಇಂತಹ ಆಹಾರಗಳಲ್ಲಿ ಅಧಿಕ ಪ್ರಮಾಣದ ಅನಾರೋಗ್ಯಕರ ಕೊಬ್ಬು, ಸೋಡಿಯಂ ಅಂಶಗಳು ಕಂಡು ಬರುವುದರಿಂದ, ಮಕ್ಕಳಲ್ಲಿ ಹೃದಯಕ್ಕೆ ಸಂಬಂಧಪಟ್ಟ ಸಮಸ್ಯೆ ಬಹಳ ಬೇಗನೇ ಕಾಣಿಸಿಕೊಳ್ಳಲು ಶುರುವಾಗುತ್ತವೆ.





**ಆಹಾರದ ಸಮಯವು ಖುಷಿ ನೀಡಲಿ**

ಮಕ್ಕಳನ್ನು ಕೂಡ ಆಹಾರ ತಯಾರಿಕೆ ಮತ್ತು ಯೋಜನೆಯಲ್ಲಿ ಸೇರಿಸಿ ಕೊಳ್ಳಿ, ಇದ–ರಿಂದ ಅವರಿಗೆ ಆರೋಗ್ಯಕರ ಆಹಾರ ಸೇವನೆ ಮಾಡುವುದು ಹೆಚ್ಚು ಖುಷಿ ನೀಡುವುದು ಮತ್ತು ಇದನ್ನು ಅವರು ಆನಂದಿಸುವರು. ಅಂಗಡಿಗೆ ಕರೆದುಕೊಂಡು ಹೋದಾಗ ಅವರು ತರಕಾರಿ ಮತ್ತು ಹಣ್ಣು ಗಳನ್ನು ಆಯ್ಕೆ ಮಾಡಲು ಹೇಳಿ. ಮಕ್ಕಳ ಜತೆಗೆ ನೀವು ಮಾತುಕತೆ ನಡೆಸಿದರೆ, ಆಗ ಇದರಿಂದ ಮಕ್ಕಳಿಗೆ ಊಟದ ಸಮಯದಲ್ಲಿ ಖುಷಿಯ ಅನುಭವ ಆಗುವುದು.

**ದೈಹಿಕ ಚಟುವಟಿಕೆ**


ಇಂದಿನ ದಿನಗಳಲ್ಲಿ ಮಕ್ಕಳಿಗೆ ಸರಿಯಾದ ದೈಹಿಕ ವ್ಯಾಯಾಮ ಸಿಗದೆ ಹಾಗೂ ಹೊರಗಿನ ಆಹಾರಗಳ ಅತಿಯಾದ ಸೇವನೆಯಿಂದಾಗಿ ದೇಹದಲ್ಲಿ ಬೊಜ್ಜು ಬೆಳೆವಣಿಗೆ ಹೆಚ್ಚಾಗುತ್ತಿರುವುದು ನಮಗೆಲ್ಲಾ ಗೊತ್ತೇ ಇದೆ. ಹೀಗಾಗಿ ಮಕ್ಕಳಲ್ಲಿ ಬೊಜ್ಜನ್ನು ತಡೆಯಲು ದೈಹಿಕ ಚಟುವಟಿಕೆಯು ಅತೀ ಅಗತ್ಯವಾಗಿರುವುದು. ಮಕ್ಕಳು ಯಾವಾಗಲೂ ಕ್ರೀಡೆ, ಹೊರಾಂಗಣ ಆಟ ಮತ್ತು ಕುಟುಂಬ ದೊಂದಿಗಿನ ಚಟುವಟಿಕೆಗಳಲ್ಲಿ ಭಾಗಿಯಾಗುವಂತೆ ಮಾಡಿ. ನಿಯಮಿತ ವಾಗಿ ದೈಹಿಕ ಚಟುವಟಿಕೆಯು ಇದ್ದರೆ ಆಗ ಇದ–ರಿಂದ ಕ್ಯಾಲರಿ ದಹಿಸಲ್ಪ ಡುವುದು ಮತ್ತು ಆರೋಗ್ಯವು ಉತ್ತಮವಾಗಿರುವುದು.

**ಸ್ಕ್ರೀನ್ ಟೈಂ ಕಡಿಮೆ ಮಾಡಿ**

ಇಂದಿನ ಡಿಜಿಟಲ್ ಯುಗದಲ್ಲಿ ಮಕ್ಕಳು ಸ್ಮಾರ್ಟ್ ಫೋನ್ ವ್ಯಸನಿಗ ಳಾಗುತ್ತಿದ್ದಾರೆ. ಮೊಬೈಲ್ ನಲ್ಲಿ ಬರುವಂತಹ ವಿಡಿಯೋಗಳು ಮಕ್ಕಳ ಮೆದುಳಿನ ಮೇಲೆ ವ್ಯತಿರಿಕ್ತ ಪರಿಣಾಮ ಬೀರುತ್ತಿದೆ.

ಇದರಿಂದ ಮಕ್ಕಳಲ್ಲಿ ಏಕಾಗ್ರತೆ ಕೊರತೆ, ವರ್ತನೆಯಲ್ಲಿ ಅಸಹಜತೆಗೆ ಕಾರಣವಾಗುತ್ತದೆ ಎಂದು ತಜ್ಞರು ಕೂಡ ಎಚ್ಚರಿಸುತ್ತಾರೆ. ಅಷ್ಟೇ ಅಲ್ಲದೆ ಮಕ್ಕಳು ಅನಾರೋಗ್ಯಕರ ಆಹಾರದ ಜತೆಗೆ ಹೆಚ್ಚಿನ ಸಮಯವನ್ನು ಸ್ಕ್ರೀನ್ ನೋಡಿ ಕಳೆದರೆ, ಆಗ ಇದರಿಂದ ಇನ್ನಷ್ಟು ಸಮಸ್ಯೆಯಾಗುವುದು. ಮಕ್ಕಳಿಗೆ ಮೊಬೈಲ್ ನೀಡಿದರೂ ಅವರಿಗೆ ಇಂತಿಷ್ಟು ಸಮಯ ಎಂದು ನಿಗದಿ ಮಾಡಬೇಕು ಮತ್ತು ಹೊರಾಂಗಣ ಆಟಗಳಲ್ಲಿ ಹೆಚ್ಚು ತೊಡಗಿ ಕೊಳ್ಳುವಂತೆ ಮಾಡಬೇಕು. ಸ್ಕ್ರೀನ್ ಟೈಂ ಕಡಿಮೆ ಮಾಡಿದರೆ, ಆಗ ಅನಾರೋಗ್ಯಕರ ಆಹಾರ ಸೇವನೆಯು ಕಡಿಮೆ ಆಗುವುದು.

# ನಿಮ್ಮ ಕೆನ್ನೆ ಕೂಡ ಪಿಂಕ್ ಆಗಿ ಕಾಣಬೇಕೆ? ಅರೇಬಿಕ್ ಮಹಿಳೆಯರ ಈ ಟಿಪ್ಸ್ ಫಾಲೋ ಮಾಡಿ



ಅಂದವಾದ ಮುಖ ಯಾರಿಗೆ ತಾನೇ ಇಷ್ಟವಿರಲ್ಲ. ಅದರಲ್ಲೂ ಗುಲಾಬಿ ರಂಗಿನ ಕೆನ್ನೆ ಎಂದರೆ ಹೆಂಗಳೆಯರಿಗೆ ಮತ್ತಷ್ಟೂ ಪ್ರೀತಿ. ಇದಕ್ಕಾಗಿ ತಮ್ಮ ಮುಖಕ್ಕೆ ಪಿಂಕ್ ಬಣ್ಣದ ಕಾಸ್ಮೆಟಿಕ್ ಪೌಡರ್ ಗಳನ್ನು ಬಳಸುತ್ತಾರೆ. ಸಾಮಾನ್ಯವಾಗಿ ಮೇಕಪ್ ಮಾಡುವಾಗ ಗುಲಾಬಿ ಬಣ್ಣಕ್ಕೆ ಹೆಚ್ಚಿನ ಮಹತ್ವವಿರುತ್ತದೆ. ಆದರೆ ನೈಸರ್ಗಿಕವಾಗಿ ಗುಲಾಬಿ ಬಣ್ಣದ ತ್ವಚೆ ಪಡೆಯುವುದು ಹೇಗೆ ಎಂಬುದನ್ನು ಇಲ್ಲಿ ತಿಳಿಸಲಾಗಿದೆ.

ಭಾರತೀಯ ಮಹಿಳೆಯರ ಸೌಂದರ್ಯದ ಬಗ್ಗೆ ನಾವೇನೂ ಹೇಳಬೇಕಿಲ್ಲ. ಬರೀ ಸೌಂದರ್ಯವಲ್ಲ ಇಲ್ಲಿನ ಮಹಿಳೆಯರ ಮುಖ ತುಂಬಾ ಲಕ್ಷಣವಾಗಿರುತ್ತದೆ. ಹಾಗೆಯೇ ಇನ್ನು ಕೆಲವು ದೇಶಗಳ ಯುವತಿಯರು ಹುಟ್ಟು ಸುಂದ–ರಿಯರಾಗಿರುತ್ತಾರೆ. ಅವರ ತ್ವಚೆ ಯಾವುದೇ ಕಲೆಗಳಿರದೆ ನುಣುಪಾಗಿರುತ್ತದೆ ಮತ್ತು ಪಿಂಕ್ ಬಣ್ಣದಿಂದ ಹೊಳೆಯುತ್ತಿರುತ್ತದೆ. ವಿಶೇಷವಾಗಿ ಅರೇಬಿಕ್ ಮಹಿಳೆಯರ ಬಗ್ಗೆ ಮಾತನಾಡಿದರೆ, ಅವರು ತಮ್ಮ ಮುಖದ ಮೇಲೆ ನೈಸರ್ಗಿಕ ಗುಲಾಬಿ ಹೊಳಪನ್ನು ಹೊಂದಿರುತ್ತಾರೆ, ಪ್ರತಿ ಹುಡುಗಿಯೂ ಅದೇ ರೀತಿಯ ತ್ವಚೆ ಹೊಂದಲು ಬಯಸುತ್ತಾರೆ. ಪಾಕಿಸ್ತಾನಿ ವೈದ್ಯ ಡಾ.ಶಿರೀನ್ ಫಾತಿಮಾ ಅರಬ್ ಮಹಿಳೆಯರ ಸೌಂದರ್ಯದ ಗುಟ್ಟನ್ನು ಹಂಚಿಕೊಂಡಿದ್ದಾರೆ.

**ನೈಸರ್ಗಿಕ ಗುಲಾಬಿ ಹೊಳಪು**

ಸುಂದರ ಮಹಿಳೆಯರು ತಮ್ಮ ಮುಖದ ಮೇಲೆ ಏನು ಅನ್ವಯಿಸುತ್ತಾರೆ ಎಂಬುದನ್ನು ತಿಳಿದುಕೊಳ್ಳಲು ಪ್ರತಿಯೊಬ್ಬರೂ ಬಯಸುತ್ತಾರೆ. ಅವರನ್ನು ನಾವೂ ಅನುಸರಿಸಿದರೆ ನಮ್ಮ ಚರ್ಮವು ಮೃದುವಾದ, ಹೊಳೆಯುವ ಮತ್ತು ಗುಲಾಬಿ ಬಣ್ಣಕ್ಕೆ ತಿರುಗುತ್ತದೆ ಎಂಬುದು ಕೆಲವು ಮಹಿಳೆಯರ ಕಲ್ಪನೆ. ಹುಡುಗಿಯರು ಪಿಂಕಿಶ್ ತ್ವಚೆ ಪಡೆಯಲು ವಿವಿಧ ಬ್ರ್ಯಾಂಡ್ಗಳ ಬ್ಲಶ್ ಅಥವಾ ಕೆನ್ನೆಯ ಕಾಸ್ಮೆಟಿಕ್ಸ್ ಗಳನ್ನು ಬಳಸುತ್ತಾರೆ.

**ಫೇಸ್‌ಪ್ಯಾಕ್‌ಗೆ ಬೇಕಾಗುವ ಸಾಮಾಗ್ರಿಗಳು**

ದಾಸವಾಳ ಹೂಗಳು– 5–6
ನೀರು – 1 ಗ್ಲಾಸ್
ಅಕ್ಕಿ ಹಿಟ್ಟು – 1 ಟೀಸ್ಪೂನ್
ಕಾರ್ನ್ ಹಿಟ್ಟು – 1 ಟೀಸ್ಪೂನ್
ಹಾಲಿನ ಪುಡಿ – 1 ಟೀಸ್ಪೂನ್
ಬೀಟ್ರೂಟ್ ಪುಡಿ – 1 ಟೀಸ್ಪೂನ್
ವೈದ್ಯರ ಸಲಹೆ

**ಪೇಸ್ಟ್ ತಯಾರಿಸುವ ವಿಧಾನ**

ಮೊದಲನೆಯದಾಗಿ, ದಾಸವಾಳದ ಹೂವುಗಳನ್ನು 1–2 ಗಂಟೆಗಳ ಕಾಲ ನೀರಿನಲ್ಲಿ ನೆನೆಸಿಡಿ. ಇದರ ನಂತರ, ನಿಮ್ಮ ಆಯ್ಕೆಯ ಯಾವುದೇ ಸೋಪ್ ತೆಗೆದುಕೊಂಡು ಅದನ್ನು ಪುಡಿಮಾಡಿ. ಇದರ ನಂತರ, ಒಂದು ಬೌಲ್ ತೆಗೆದುಕೊಂಡು ಅದರಲ್ಲಿ ಅಕ್ಕಿ ಹಿಟ್ಟು, ಕಾರ್ನ್ ಫ್ಲೋರ್, ಹಾಲಿನ ಪುಡಿ ಮತ್ತು ಬೀಟ್ರೂಟ್ ಪುಡಿ ಸೇರಿಸಿ. ಕೊನೆಗೆ ಬಟ್ಟಲಿನಲ್ಲಿ ದಾಸವಾಳದ ನೀರನ್ನು ಹಾಕಿ ಚೆನ್ನಾಗಿ ಕಲಸಿ. ಈಗ ಸಿದ್ಧಪಡಿಸಿದ ಪೇಸ್ಟ್ ಅನ್ನು ಐಸ್ ಕ್ಯೂಬ್ ಪ್ಲೇಟ್ನಲ್ಲಿ ಹಾಕಿ ಮತ್ತು 2 ವಾರಗಳವರೆಗೆ ಫ್ರೀಜ್ ಮಾಡಿ.

**ಐಸ್ ಕ್ಯೂಬ್ ಬಳಸಿ**

2 ವಾರಗಳ ನಂತರ, ಹೆಪ್ಪುಗಟ್ಟಿದ ಐಸ್ ಕ್ಯೂಬ್ಗಳನ್ನು ನಿಮ್ಮ ಮುಖದ ಮೇಲೆ ಪ್ರತಿದಿನ ಉಜ್ಜಿಕೊಳ್ಳಿ ಮತ್ತು ನಂತರ ನಿಮ್ಮ ಚರ್ಮವು ನೈಸರ್ಗಿಕ ಗುಲಾಬಿ ಹೊಳಪನ್ನು ನೀಡಲು ಪ್ರಾರಂಭಿಸುತ್ತದೆ.

ದಾಸವಾಳದ ಹೂವು ಆರೋಗ್ಯದ ಜೊತೆಗೆ ತ್ವಚೆಗೂ ಪ್ರಯೋಜನಕಾರಿ. ಇದು ಎಕ್ಸ್ಫೋಲಿಯೇಟಿಂಗ್, ಬ್ಯಾಕ್ಟೀ–ರಿಯಾ ವಿರೋಧಿ ಮತ್ತು ಉತ್ಕರ್ಷಣ ನಿರೋಧಕಗಳಲ್ಲಿ ಸಮೃದ್ಧವಾಗಿದೆ. ಈ ಹೂವು ಸತ್ತ ಚರ್ಮದ ಕೋಶಗಳನ್ನು ತೆಗೆದುಹಾಕಲು ಕೆಲಸ ಮಾಡುತ್ತದೆ, ಚರ್ಮವನ್ನು ಶುದ್ಧೀಕರಿಸುತ್ತದೆ ಮತ್ತು ನೈಸರ್ಗಿಕ ಹೊಳಪನ್ನು ನೀಡುತ್ತದೆ.

**ಫೇಸ್ ಪ್ಯಾಕ್ ಗಳು, ಫೇಸ್ ಸೀರಮ್ ಗಳಲ್ಲಿ ದಾಸವಾಳದ ಪುಡಿ ಸೇರಿಸಿ**

ದಾಸವಾಳದ ಹೂವುಗಳಲ್ಲಿ ಉತ್ಕರ್ಷಣ ನಿರೋಧಕಗಳು ಸಮೃದ್ಧವಾಗಿವೆ, ಇದು ನಮ್ಮ ಚರ್ಮದ ಅಕಾಲಿಕ ವಯಸ್ಸಾಗುವಿಕೆಗೆ ಪ್ರಮುಖ ಕಾರಣಗಳಲ್ಲಿ ಒಂದಾದ ಫ್ರೀ ರಾಡಿಕಲ್ ಗಳ ವಿರುದ್ಧ ಹೋರಾಡಲು ಸಹಾಯ ಮಾಡುತ್ತದೆ. ಅವು ಉರಿಯೂತವನ್ನು ಕಡಿಮೆ ಮಾಡಲು ಸಹಾಯ ಮಾಡುತ್ತವೆ ಮತ್ತು ಸ್ಕ್ರಬ್ಗಳು ಮತ್ತು ಸ್ನಾನದ ಪುಡಿಗಳಿಗೆ ಸೇ–ರಿಸಿದಾಗ, ಅವು ಚರ್ಮವನ್ನು ಅದರ ನೈಸರ್ಗಿಕ ತೈಲಗಳಿಂದ ತೆಗೆದುಹಾಕದೆ ನಿಧಾನವಾಗಿ ಶುದ್ಧೀಕರಿಸುತ್ತವೆ. ಫೇಸ್ ಪ್ಯಾಕ್ ಗಳು ಮತ್ತು ಫೇಸ್ ಸೀರಮ್ ಗಳಲ್ಲಿ ದಾಸವಾಳದ ಪುಡಿಯನ್ನು ಸೇ–ರಿಸಬಹುದು. ಇದು ನಮ್ಮ ಚರ್ಮಕ್ಕೆ ಹೊಳಪನ್ನು ನೀಡುತ್ತದೆ.



# ಬಾದಾಮಿಯ ಉಪಯೋಗಗಳು



ಬಾದಾಮಿಯ ಮೂಲಸ್ಥಾನ ಪಶ್ಚಿಮ ಏಷ್ಯಾ, ನಮ್ಮ ದೇಶದಲ್ಲಿ ಪಂಜಾಬ್, ಕಾಶ್ಮೀರ ಹಾಗೂ ಆಫ್ಘಾನಿಸ್ಥಾನದಲ್ಲಿ ಹೆಚ್ಚಾಗಿ ಇತ್ತೀಚಿನ ದಿನಗಳಲ್ಲಿ ಬೆಳೆಯುತ್ತಿದ್ದಾರೆ.

ಉಪಯುಕ್ತ ಭಾಗಗಳು: ಬೀಜ, ಕವಚ, ಬಾದಾಮಿ ಎಣ್ಣೆ, ಬಾದಾಮಿಯಲ್ಲಿ 2 ಬಗೆ ಸಿಹಿ ಬಾದಾಮಿ, ಕಹಿ ಬಾದಾಮಿ

ಪೋಷಕಾಂಶಗಳು: ಅತ್ಯಧಿಕವಾದಂತಹ ಇ ಜೀವಸತ್ವ, ಅಧಿಕವಾದ ಮ್ಯಾಂಗನೀಸ್, ಬಯೋಟಿನ್, ತಾಮ್ರ, ಮೆಗ್ನೀಷಿಯಂ, ಫಾಸ್ಪರಸ್, ನಾರಿನಂಶ, ಸುಣ್ಣ, ಕಬ್ಬಿಣ, ಪ್ರೋಟೀನ್,

1. ಬಾದಾಮಿ ಎಣ್ಣೆ: ಬಾದಾಮಿ ಎಣ್ಣೆಯನ್ನು ಸೇವನೆ ಮಾಡುವುದರಿಂದ ಮಲಬದ್ಧತೆ ನಿವಾರಣೆಯಾಗುತ್ತದೆ.

2. ಕಿವಿನೋವು: ಬಾದಾಮಿ ಎಣ್ಣೆಯನ್ನು 2–2 ಹನಿಯಷ್ಟು ಎರಡೂ ಕಿವಿಗಳಿಗೆ ಹಾಕುವುದರಿಂದ ಕಿವಿನೋವು ನಿವಾರಣೆಯಾಗುತ್ತದೆ.

3. ಮಕ್ಕಳ ಸ್ನಾನಕ್ಕೆ: ಮಕ್ಕಳಿಗೆ ಅಭ್ಯಂಗ ಸ್ನಾನ ಮಾಡಿಸುವಾಗ ಬಾದಾಮಿ ಎಣ್ಣೆಯನ್ನು ಹಚ್ಚಿ ಮಾಲೀಷು ಮಾಡಿ ಸ್ನಾನ ಮಾಡಿಸುವುದರಿಂದ ಚರ್ಮವು ಕಾಂತಿಯುತ ವಾಗುತ್ತದೆ, ನುಣುಪಾಗಿರುತ್ತದೆ. ಆರೋಗ್ಯಪೂರ್ಣ ತ್ವಚೆ ಉಂಟಾಗುತ್ತದೆ.

4. ಎಣ್ಣೆಯನ್ನು ತೆಗೆದು ನಂತರದ ಚರಟವು ಅತಿ ಉಪಯುಕ್ತ ಅದನ್ನು ಹಿಟ್ಟಿನೊಡನೆ ಬೆರಸಿ ರೊಟ್ಟಿಯನ್ನು ಮಾಡಿ ಉಪಯೋಗಿಸಬಹುದಾಗಿದೆ. ಇದರಲ್ಲೂ ಪೌಷ್ಠಿಕಾಂಶಗಳು ಸಾಕಷ್ಠಿರುತ್ತದೆ.

5. ಅಸ್ಥಿಕ್ಷಯೆ: ಬಾದಾಮಿಯಲ್ಲಿ ಹಸುವಿನ ಹಾಲಿಗಿಂತ ಅಧಿಕವಾದ ಕ್ಯಾಲ್ಸಿಯಂ ಇರುತ್ತದೆ. ಹಾಗಾಗಿ ಮಕ್ಕಳ ಬೆಳವಣಿಗೆಗೆ ಅತ್ಯಂತ ಸಹಕಾರಿ. ಮೂಳೆಗಳು ಗಟ್ಟಿಯಾಗುತ್ತದೆ. ಮಕ್ಕಳಲ್ಲಿ ಕಂಡುಬರುವ ಅಸ್ಥಿಕ್ಷಯದಂತಹ ಸಮಸ್ಯೆಗಳಿಗೆ ಕೂಡ ಉತ್ತಮ ಪರಿಹಾರ ಇದರಲ್ಲಿದೆ.

6. ನರಗಳ ದೌರ್ಬಲ್ಯಕ್ಕೆ: ನರಗಳಿಗೆ ಸಂಬಂಧಪಟ್ಟಂತಹ ಸಮಸ್ಯೆಗಳಿದ್ದಾಗ ಬಾದಾಮಿಯನ್ನು ಯಾವುದೇ ರೂಪದಲ್ಲಿ ಸೇವಿಸಿದರೂ ನರಗಳಿಗೆ ಚೈತನ್ಯ ಬರುತ್ತದೆ.

7. ಮಲಬದ್ಧತೆ: ಬಾದಾಮಿಯ ಜೊತೆಯಲ್ಲಿ ಅಂಜೂರ ಅಥವಾ ಒಣದ್ರಾಕ್ಷಿಯನ್ನು ಸೇರಿಸಿಕೊಂಡು ತಿನ್ನುತ್ತಾ ಬಂದರೆ ಮಲಬದ್ಧತೆ ನಿವಾರಣೆಯಾಗುತ್ತದೆ.

8. ಸೌಂದರ್ಯವರ್ಧಕ: ಬಾದಾಮಿಯನ್ನು ಹಾಲಿನಲ್ಲಿ ತೇಯ್ದು, ಅದನ್ನು ಮುಖ ಹಾಗೂ ಕುತ್ತಿಗೆಯ ಭಾಗಕ್ಕೆ ಹಚ್ಚಿಕೊಳ್ಳಿ.

20 ನಿಮಿಷದ ನಂತರ ಸ್ವಚ್ಛಮಾಡಿಕೊಳ್ಳಿ ಮುಖದ ಕಲೆಗಳು ಹೋಗುತ್ತದೆ. ಹಾಗೆಯೇ ಮುಖದ ಕಾಂತಿಯೂ ಇಮ್ಮಡಿಯಾಗುತ್ತದೆ.

9. ಕೂದಲ ಬೆಳವಣಿಗೆಗೆ: ಬಾದಾಮಿ ಎಣ್ಣೆಯನ್ನು ತಲೆಯ ಬುಡದ ಭಾಗಕ್ಕೆ ಚೆನ್ನಾಗಿ ಹಚ್ಚಿ ಹಗುರವಾಗಿ ಮಾಲೀಷು ಮಾಡಿಕೊಳ್ಳಿ ಕೂದಲು ಕಾಂತಿಯುತವಾಗಿ, ಚೆನ್ನಾಗಿ ಬೆಳೆಯಲು ಸಹಕಾರಿಯಾಗುತ್ತದೆ.

ನಮ್ಮ ಪ್ರಕೃತಿ ನಮಗೆ ಬೇಕಾದುದನ್ನೆಲ್ಲಾ ಸಮೃದ್ಧವಾಗಿ ಕೊಟ್ಟಿದೆ. ಅದನ್ನು ಪೋಷಿಸಿ ಸಂರಕ್ಷಣೆ ಮಾಡುವುದು ನಮ್ಮೆಲ್ಲರ ಕರ್ತವ್ಯವಾಗಿದೆ.

# ಚಳಿಗಾಲದಲ್ಲೂ ನಿಮಗೆ ಬೆವರುತ್ತಿದ್ದರೆ ಈ ಸಮಸ್ಯೆ ಇರುವುದು ಖಂಡಿತ

ಚಳಿಗಾಲದಲ್ಲಿ ಬೆವರುವವರನ್ನು ನೀವು ನೋಡಿರಬಹುದು. ಇದಕ್ಕೆ ಹಲವಾರು ಕಾರಣಗಳಿವೆ. ಅವುಗಳಲ್ಲಿ ಮುಖ್ಯವಾದ ಕೆಲವು ಕಾರಣಗಳು ಹಾಗೂ ಈ ಸಮಸ್ಯೆಯನ್ನು ನಿವಾರಿಸುವುದು ಹೇಗೆ ತಿಳಿಯೋಣ.


ಬೇಸಿಗೆಯಲ್ಲಿ ಬೆವರುವುದು ಸಹಜ ಆದ–ರೆ ಕೆಲವರು ಚಳಿಗಾಲದಲ್ಲೂ ಬೆವರುವುದನ್ನು ನೀವು ಗಮನಿಸಿರಬಹುದು. ಅಂತಹರು ಬಹಳ ಎಚ್ಚರಿಕೆಯಿಂದ ಇರಬೇಕು. ಏಕೆಂದರೆ ಇದು ಗಂಭೀರ ಕಾಯಿಲೆಯ ಲಕ್ಷಣವೂ ಆಗಿರಬಹುದು. ಚಳಿಗಾಲದಲ್ಲಿ ಬೆವರಲು ಹಲವಾರು ಕಾರಣಗಳಿರಬಹುದು. ಚಳಿಗೆ ಬೆವರುವುದು ಶೀತ ವಾತಾವರಣದಲ್ಲಿ ಅಥವಾ ಚಳಿಯ ವಾತಾವರಣದಲ್ಲಿ ಸಂಭವಿಸುತ್ತವೆ. ಅವು ಸಾಮಾನ್ಯವಾಗಿ ಯಾವುದೇ ಸ್ಪಷ್ಟ ಕಾರಣವಿಲ್ಲದೆ ಪ್ರಾರಂಭಿಸುತ್ತದೆ ಮತ್ತು ಅವುಗಳನ್ನು ನಿರ್ವಹಿಸಲು ಕಷ್ಟವಾಗಬಹುದು. ಚಳಿಗಾಲದಲ್ಲಿ ಯಾವ ರೋಗಗಳು ಬೆವರುವಿಕೆಯ ಲಕ್ಷಣಗಳಾಗಿವೆ ಎಂಬುವುದನ್ನು ನಾವಿಲ್ಲಿ ತಿಳಿಯೋಣ.

**ಕಡಿಮೆ ರಕ್ತದೊತ್ತಡ**

ಚಳಿಗಾಲದಲ್ಲಿ ಅಚಾನಕ್ಕಾಗಿ ನಿಮಗೆ ಬೆವರುತ್ತಿದ್ದರೆ ಅದು ಕಡಿಮೆ ರಕ್ತದೊತ್ತಡ ಅಥ–ಬಾ ಲೋ ಬಿಪಿಯ ಲಕ್ಷಣವಾಗಿರಬಹುದು. ಇದರಿಂದಾಗಿ ಹೃದಯಾಘಾತದ ಅಪಾಯ ಹೆಚ್ಚಾಗುತ್ತದೆ. ಚಳಿಗಾಲದಲ್ಲಿ ಕಡಿಮೆ ರಕ್ತದೊತ್ತಡದಿಂದಾಗಿ, ಹೃದಯಕ್ಕೆ ರಕ್ತವನ್ನು ಪೂರೈಸುವ ಅಪಧಮನಿಗಳಲ್ಲಿ ಕ್ಯಾಲ್ಸಿಯಂ ಪ್ರಮಾಣವು ಹೆಚ್ಚಾಗುತ್ತದೆ ಮತ್ತು ಅವು ಮುಚ್ಚಲು ಪ್ರಾರಂಭಿಸುತ್ತವೆ. ಇದು ಬೆವರುವಿಕೆಗೆ ಕಾರಣವಾಗುತ್ತದೆ ಮತ್ತು ಹೃದಯ ಬಡಿತವನ್ನು ಹೆಚ್ಚಿಸುತ್ತದೆ. ಅಂತಹ ಪರಿಸ್ಥಿತಿಯಲ್ಲಿ ನೀವು ತಕ್ಷಣ ವೈದ್ಯರನ್ನು ಸಂಪರ್ಕಿಸಬೇಕು.

**ಋತುಬಂಧ**

ಋತುಬಂಧದ ಲಕ್ಷಣಗಳಲ್ಲಿ ಬೆವರುವುದು ಕೂಡಾ ಒಂದು. ಸಾಮಾನ್ಯವಾಗಿ 50 ವರ್ಷ ವಯಸ್ಸಿನ ನಂತರ ಮಹಿಳೆಯರು ಋತುಬಂಧವನ್ನು ಅನುಭವಿಸುತ್ತಾರೆ. ಆ ಸಂದರ್ಭದಲ್ಲಿ ಚಳಿಗಾಲದಲ್ಲೂ ಬೆವರುತ್ತದೆ.



ಆರಂಭದಲ್ಲಿ, ಹಾರ್ಮೋನ್ ಚಟುವಟಿ–ಕೆಗಳಿಂದಾಗಿ ಅತಿಯಾದ ಬೆವರುವಿಕೆ ಇರುತ್ತದೆ ಆದ್ದರಿಂದ ಇದನ್ನು ಲಘುವಾಗಿ ಪರಿಗಣಿಸಬಾರದು.

**ಹೈಪರ್ಹೈಡ್ರೋಸಿಸ್**

ಹೈಪರ್ಹೈಡ್ರೋಸಿಸ್ ರೋಗದ ಲಕ್ಷಣವೆಂದರೆ ಈ ವ್ಯಕ್ತಿಗಳಿಗೆ ಯಾವುದೇ ಋತುವಿನಲ್ಲೂ ಬೆವರುತ್ತದೆ. ಆದ–ರೆ ಚಳಿಗಾಲದಲ್ಲಿ, ಮುಖ, ಅಂಗೈ ಮತ್ತು ಅಡಿಭಾಗದಿಂದ ಅತಿಯಾದ ಬೆವರುವಿಕೆ ಇದ್ದರೆ, ಅದು ಹೈಪರ್ಹೈಡ್ರೋಸಿಸ್‌ನ ಚಿಹ್ನೆಯಾಗಿರಬಹುದು. ಬೆವರುವಿಕೆಯಿಂದಾಗಿ ದೇಹದ ಉಷ್ಣತೆಯು ನಿಯಂತ್ರಣದಲ್ಲಿರುತ್ತದೆ, ಆದರೆ ಈ ರೋಗದಲ್ಲಿ, ತಾಪಮಾನ ಕಡಿಮೆಯಾದಾಗಲೂ, ಅಂಗೈಗಳು ಮತ್ತು ಅಡಿಭಾಗಗಳು ವಿಪರೀತವಾಗಿ ಬೆವರಲಾರಂಭಿಸುತ್ತದೆ.

**ಮೂರ್ಛೆ ಹೋಗುವುದು**

ನಿಮ್ಮ ಮೆದುಳಿಗೆ ಸಾಕಷ್ಟು ಆಮ್ಲಜನಕ ಸಿಗದಿದ್ದಾಗ ಮೂರ್ಛೆ ಸಂಭವಿಸುತ್ತದೆ. ಮೂರ್ಛೆ ಹೋಗುವ ಮೊದಲು ಅಥವಾ ನಂತರ ಬೆವರುವಿಕೆ ಸಂಭವಿಸಬಹುದು. ದೇಹ ನಿರ್ಜಲೀಕರಣಗೊಳ್ಳುವುದು, ವ್ಯಾಯಾಮ ಅಥವಾ ಬಾಹ್ಯ ಉಷ್ಣತೆಯಿಂದಾಗಿ ತುಂಬಾ ಬಿಸಿಯಾಗುವುದು ಅಥವಾ ತುಂಬಾ ಬೆವರುವುದು, ನಿಮ್ಮ ಕಾಲುಗಳಿಂದ ರಕ್ತವು ಸಾಕಷ್ಟು ವೇಗವಾಗಿ ಹರಿಯದಿದ್ದಾಗ ಮೆದುಳಿನ ಆಮ್ಲಜನಕದ ನಷ್ಟದಿಂದಾಗಿ ಮೂರ್ಛೆ ಹೋಗುವ ಸಾಧ್ಯತೆ ಇದೆ.


**ಕಡಿಮೆ ಸಕ್ಕರೆ ಮಟ್ಟ**

ಚಳಿಗಾಲದಲ್ಲಿ ಬೆವರುವಿಕೆಗೆ ದೇಹದಲ್ಲಿನ ಸಕ್ಕರೆ ಅಂಶದ ಕೊರತೆಯೂ ಕಾರಣವಾಗಿರುತ್ತದೆ. ಅಚಾನಕ್ಕಾಗಿ ದೇಹದಲ್ಲಿ ಶುಗರ್ ಲೆವೆಲ್ ಕಡಿಮೆಯಾದರೆ ಬೆವರಲಾರಂಭಿಸುತ್ತದೆ. ಖಾಲಿ ಹೊಟ್ಟೆಯಲ್ಲಿ 1 ಡೆಸಿಲೀಟರ್ ರಕ್ತದಲ್ಲಿ ಮಾನವನ ಸಾಮಾನ್ಯ ಸಕ್ಕರೆ ಮಟ್ಟವು 70 ರಿಂದ 100 ಮಿಗ್ರಾಂ ಆಗಿರಬೇಕು. ಆದರೆ ಇದಕ್ಕಿಂತ ಕಡಿಮೆಯಾದರೆ ಬೆವರಲು ಪ್ರಾರಂಭಿಸುತ್ತೀರಿ, ಇದು ದೇಹದಲ್ಲಿ ಕಡಿಮೆ ಸಕ್ಕರೆಯ ಲಕ್ಷಣವಾಗಿದೆ. ಈ ಸ್ಥಿತಿಯು ಮಧುಮೇಹ ರೋಗಿಗಳಿಗೆ ಬಹಳ ಅಪಾಯಕಾರಿ.

**ಬೊಜ್ಜು**

ಅಧಿಕ ಬೊಜ್ಜನ್ನು ಹೊಂದಿರುವವ–ರಿಗೆ ಬೆವರುವುದು ಹೆಚ್ಚು. ಅದರಲ್ಲೂ ಸ್ಥೂಲಕಾಯತೆಯು ಚಳಿಗಾಲದಲ್ಲಿ ಬೆವರುವಿಕೆಗೆ ಕಾರಣವಾಗಬಹುದು. ದೇಹದಲ್ಲಿನ ಅಧಿಕ ಕೊಲೆಸ್ಟ್ರಾಲ್ ಕೂಡ ಇದಕ್ಕೆ ಕಾರಣವಾಗಿರಬಹುದು. ಅಂತಹ ಪರಿಸ್ಥಿತಿಯಲ್ಲಿ ಚಳಿಗಾಲದಲ್ಲಿ ಬೆವರಿದರೆ ಜಾಗರೂಕರಾಗಿರಬೇಕು. ನೀವು ತಕ್ಷಣ ಹೋಗಿ ವೈದ್ಯರನ್ನು ಭೇಟಿ ಮಾಡುವುದು

# ನ. ೧೮ ರಂದು ಶ್ರೀ ಕನಕದಾಸ ಜಯಂತಿ



ಧಾರವಾಡ : ಜಿಲ್ಲಾಡಳಿತ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಯೋಗದಲ್ಲಿ ನವೆಂಬರ 18 ರಂದು ಬೆಳಿಗ್ಗೆ 11 ಗಂಟೆಗೆ ಶ್ರೀ ಕನಕದಾಸ ಜಯಂತಿಯನ್ನು ಕರ್ನಾಟಕ ಕುಲಪುರೋಹಿತ ಆಲೂರು ವೆಂಕಟರಾವ್ ಸಾಂಸ್ಕೃತಿಕ ಭವನದಲ್ಲಿ ಆಯೋಜಿಸಲಾಗುವುದು ಎಂದು ಅಪರ ಜಿಲ್ಲಾಧಿಕಾರಿ ಗೀತಾ ಸಿ.ಡಿ. ಅವರು ಹೇಳಿದರು.

ಅವರು ಇಂದು ಬೆಳಿಗ್ಗೆ ಜಿಲ್ಲಾಧಿಕಾರಿಗಳ ಕಚೇರಿಯ ನೂತನ ಸಭಾಭವನದಲ್ಲಿ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ, ಮಾತನಾಡಿ, ಜಯಂತಿ ಕಾರ್ಯಕ್ರಮವನ್ನು ನಾವೆಲ್ಲರೂ ವಿಜೃಂಭಣೆಯಿಂದ ಪ್ರತಿವರ್ಷದಂತೆ ಆಚರಿಸೋಣ ಎಂದು ತಿಳಿಸಿದರು.

ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಕುಮಾರ ಬೆಕ್ಕೇರಿ ಅವರು ಸ್ವಾಗತಿಸಿ, ಪ್ರಾಸ್ತಾವಿಕವಾಗಿ ಮಾತನಾಡಿದರು. ಸಮಾಜದ ಮುಖಂಡರಾದ ಬಸಪ್ಪ ಗುಡೆಣ್ಣವರ, ದೇವರಾಜ ಕಂಬಳಿ, ಎನ್.ಎನ್.ಸವಣೂರ, ವಸಂತ ಹಾಗೂ ಸಾರ್ವಜನಿಕರು ಸಭೆಯಲ್ಲಿ ಉಪಸ್ಥಿತರಿದ್ದರು.

# ವಿದ್ಯಾರ್ಥಿಗೆ ದೋಷಪೂರಿತ ಲ್ಯಾಪಟಾಪ್ ನೀಡಿದ ಡೆಲ್ ಕಂಪನಿಗೆ ದಂಡ ವಿಧಿಸಿ ಪರಿಹಾರಕ್ಕೆ ಆದೇಶ

ಧಾರವಾಡ : ಧಾರವಾಡದ ಕುಮಾರ ವ್ಯಾಸ ದೇಸಾಯಿ ಇಂಜನೀಯರ್ ವಿದ್ಯಾರ್ಥಿಯಾಗಿದ್ದು ತನ್ನ ವ್ಯಾಸಂಗಕ್ಕೆ ಅನುಕೂಲವಾಗಲೆಂದು ಎದುರುದಾರರ ಮಳಿಗೆಯಲ್ಲಿ ಡೆಲ್ ಕಂಪನಿಯ ಲ್ಯಾಪಟಾಪನ್ನು ದಿ:23/12/2021ರಂದು ರೂ.67,990/– ಮತ್ತು ಹೆಚ್ಚಿನ ಒಂದು ವರ್ಷ ವಾರಂಟಿಗೆ ರೂ.1,999/– ಒಟ್ಟು ರೂ.69,989/– ಪಾವತಿಸಿ ಖರೀದಿಸಿದ್ದರು. ಖರೀದಿಯ 3 ತಿಂಗಳ ಒಳಗಾಗಿ ಲ್ಯಾಪ್ ಟಾಪ್‌ನಲ್ಲಿ ದೋಷಗಳು ಕಂಡುಬಂದಿದ್ದು ಅದನ್ನು ಎದುರುದಾರರು ಸರಿಪಡಿಸಿ ಕೊಟ್ಟಿರುತ್ತಾರೆ. ಮತ್ತೆ ಪದೇ ಪದೇ ಅದರಲ್ಲಿ ನ್ಯೂನ್ಯತೆಗಳು ಕಂಡುಬಂದಿದ್ದರಿಂದ ತನಗೆ ದೋಷಪೂರಿತ ಲ್ಯಾಪ್ ಟಾಪ್‌ನ್ನು ಕೊಟ್ಟು ಎದುರುದಾರರು ಅದನ್ನು ಸರಿಯಾಗಿ ರಿಪೇರಿ ಮಾಡಿಕೊಡದೇ ಎದುರುದಾರರ ನಡಾವಳಿಕೆ ಗ್ರಾಹಕರ ರಕ್ಷಣಾ ಕಾಯ್ದೆ ಅಡಿ ಸೇವಾ ನ್ಯೂನ್ಯತೆ ಆಗುತ್ತದೆ ಅಂತಾ ಹೇಳಿ ಅವರ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳುವಂತೆ ದೂರುದಾರ/ವಿದ್ಯಾರ್ಥಿ ದಿ:06/09/2023 ರಂದು ಧಾರವಾಡ ಜಿಲ್ಲಾ ಗ್ರಾಹಕರ ಆಯೋಗಕ್ಕೆ ದೂರು ಸಲ್ಲಿಸಿದ್ದರು.

ಸದರಿ ದೂರಿನ ಬಗ್ಗೆ ಕೂಲಂಕುಷವಾಗಿ ವಿಚಾರಣೆ ನಡೆಸಿದ ಆಯೋಗದ ಅಧ್ಯಕ್ಷರಾದ ಈಶಪ್ಪ. ಭೂತೆ ಹಾಗೂ ವಿಶಾಲಾಕ್ಷಿ. ಬೋಳಶೆಟ್ಟಿ ಮತ್ತು ಪ್ರಭು. ಹಿರೇಮಠ ಸದಸ್ಯರು, ದೂರುದಾರರು ತಮ್ಮ ಪ್ರಕರಣ ಸಾಬೀತು ಪಡಿಸಲು ಹಾಜರುಪಡಿಸಿದ ದಾಖಲೆಗಳನ್ನು ಪರಿಶೀಲಿಸಿದ ಆಯೋಗ ದೂರುದಾರರು ಹಾಜರುಪಡಿಸಿದ ದಾಖಲೆಗಳನ್ನು ಪರಿಶೀಲಿಸಿದಾಗ ಲ್ಯಾಪ್ ಟಾಪ್‌ನಲ್ಲಿ ಖರೀದಿಸಿದ 3 ತಿಂಗಳ ಒಳಗೆ ವಾಯ್‌ಫೈ ಸಿಸ್ಟಮ್ ತೊಂದರೆ, ಮತ್ತು ಬ್ಯಾಟರಿ ನ್ಯೂನ್ಯತೆ ಇತರೇ ಸಮಸ್ಯೆಗಳು ಇರುವುದು ಕಂಡುಬಂದಿರುತ್ತದೆ. ಅಲ್ಲದೇ ಆಯೋಗ ನೇಮಿಸಿದ ಕಮೀಷನರ್ ರಿಪೋರ್ಟನಲ್ಲಿಯೂ ಸಹ ಲ್ಯಾಪ್ ಟಾಪ್‌ನ ನ್ಯೂನ್ಯತೆಗಳ ಬಗ್ಗೆ ಪ್ರಸ್ತಾಪ ಇರುತ್ತದೆ. ಈ ಎಲ್ಲ ಮೇಲಿನ ಅಂಶಗಳನ್ನು ಅವಲೋಕಿಸಿದಾಗ ಎದುರುದಾರರು ಕೊಟ್ಟಂತಹ ಲ್ಯಾಪ್ ಟಾಪ್ ದೋಷಯುಕ್ತವಾಗಿರುವುದು ಕಂಡುಬರುತ್ತದೆ. ಎದುರುದಾರರು ದೂರುದಾರನಿಗೆ/ಗ್ರಾಹಕನಿಗೆ ದೋಷಯುಕ್ತ ಲ್ಯಾಪ್ ಟಾಪ್‌ನ್ನು ಮಾರಾಟ ಮಾಡಿ ಗ್ರಾಹಕರ ಸಂರಕ್ಷಣಾ ಕಾಯ್ದೆ ಅಡಿ ಸೇವಾ ನ್ಯೂನ್ಯತೆ ಎಸಗಿರುತ್ತಾರೆ ಅಂತಾ ಅಭಿಪ್ರಾಯಪಟ್ಟು ತೀರ್ಪು ನೀಡಿ ದೂರುದಾರರಿಗೆ ಹಳೆಯ ಲ್ಯಾಪ್‌ಟಾಪ್ ಪಡೆದುಕೊಂಡು ಅದೇ ಮಾಡಲ್‌ನ ನೂತನ ಲ್ಯಾಪ್ ಟಾಪ್‌ನ್ನು ಒಂದು ತಿಂಗಳ ಒಳಗೆ ಕೊಡಲು ಆದೇಶಿಸಿದೆ. ತಪ್ಪಿದ್ದಲ್ಲಿ ಲ್ಯಾಪ್ ಟಾಪ್‌ನ ಮೊತ್ತ ರೂ. 69,989/– ದಿ:19/05/2022 ರಿಂದ ಶೇ8% ರಮತೆ ಬಡ್ಡಿ ಸಮೇತ ಪೂರ್ತಿ ಹಣ ಸಂದಾಯವಾಗುವವರೆಗೆ ದೂರುದಾರ/ವಿದ್ಯಾರ್ಥಿ ವ್ಯಾಸ್ ಇವನಿಗೆ ಕೊಡಲು ಆಯೋಗ ನಿರ್ದೇಶಿಸಿದೆ ಜೊತೆಗೆ ರೂ.25,000/– ಪರಿಹಾರ ಮತ್ತು ಪ್ರಕರಣದ ಖರ್ಚು ವೆಚ್ಚ ರೂ.10,000/– ಗಳನ್ನು ದೂರುದಾರರಿಗೆ ಕೊಡುವಂತೆ ಬೆಂಗಳೂರಿನ ಡೆಲ್ ಕಂಪನಿಗೆ ಆಯೋಗ ಆದೇಶಿಸಿದೆ.

# ಇ-ಶ್ರಮ್ ನೊಂದಾಯಿತ ಕಾರ್ಮಿಕರಿಗೆ ಆದ್ಯತಾ ಪಡಿತರ ಚೀಟಿ ವಿತರಣೆ

ಕಾರವಾರ – ಸರ್ವೋಚ್ಚ ನ್ಯಾಯಾಲಯವು ಇ–ಶ್ರಮ್ ನೋಂದಾಯಿತ ಕಾರ್ಮಿಕರಿಗೆ ಆದ್ಯತಾ ಪಡಿತರ ಚೀಟಿ (ಬಿ.ಪಿ.ಎಲ್) ನೀಡಲು ಆದೇಶಿಸಿದ್ದು, ಆದ್ಯತಾ ಪಡಿತರ ಚೀಟಿ ಹೊಂದಲು ಅರ್ಹ ಇ–ಶ್ರಮ್ ನೋಂದಾಯಿತ ಕಾರ್ಮಿಕರಿಗೆ ಆದ್ಯತಾ ಪಡಿತರ ಚೀಟಿ ನೀಡುವ ಕಾರ್ಯ ಕರ್ನಾಟಕ ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿ ಪ್ರಾರಂಭವಾಗಿರುತ್ತದೆ.

ಆದ್ದರಿಂದ ಆದ್ಯತಾ ಪಡಿತರ ಚೀಟಿ ಹೊಂದಿಲ್ಲದ ಇ–ಶ್ರಮ್ ನೋಂದಾಯಿತ ಎಲ್ಲಾ ಅರ್ಹ ಕಾರ್ಮಿಕರು ತಮ್ಮ ಹತ್ತಿರದ ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆಯನ್ನು ಸಂಪರ್ಕಿಸುವುದು.

ಹೆಚ್ಚಿನ ಮಾಹಿತಿಗಾಗಿ ಟೋಲ್ ಫ್ರೀ ದೂರವಾಣಿ ಸಂಖ್ಯೆ:1800–425–9339 ಅಥವಾ ಸಹಾಯವಾಣಿ 1967ಕ್ಕೆ ಬೆಳಿಗ್ಗೆ 10 ಗಂಟೆಯಿಂದ ಸಂಜೆ 5.30 ಗಂಟೆಯವರೆಗೆ ಸಂಪರ್ಕಿಸುವಂತೆ ಆಹಾರ, ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಇಲಾಖೆಯ ಆಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

**ಚೂರು–ಪಾರು**

## ಸೇನಾ ಆಯ್ಕೆಯ ಪೂರ್ವ ಸಿದ್ದತೆ ಬಗ್ಗೆ ವೃತ್ತಿ ಮಾರ್ಗದರ್ಶನ ಹಾಗೂ ತರಬೇತಿ

ಕಾರವಾರ – ಭಾರತೀಯ ಸೇನೆ/ಇತರೆ ಯೂನಿಫಾರ್ಮ ಸೇವೆಗಳಿಗೆ ಸೇರ ಬಯಸುವ ಕರ್ನಾಟಕ ರಾಜ್ಯದ ಹಿಂದುಳಿದ ವರ್ಗಗಳ ಪ್ರವರ್ಗ–1, 2(ಎ), 3(ಎ) ಹಾಗೂ 3(ಬಿ) ಗಳ ಅರ್ಹ ಅಭ್ಯರ್ಥಿಗಳಿಗೆ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯು 2024–25ನೇ ಸಾಲಿನಲ್ಲಿ ಆಯ್ಕೆಯ ಪೂರ್ವ ಸಿದ್ದತೆ ಬಗ್ಗೆ ವೃತ್ತಿ ಮಾರ್ಗದರ್ಶನ ಹಾಗೂ ತರಬೇತಿಯನ್ನು ಉಚಿತವಾಗಿ ನೀಡುತ್ತಿದ್ದು, ತರಬೇತಿಗಾಗಿ ಅರ್ಹ ಯುವಕರಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ತರಬೇತಿಯು ಕಾರವಾರ ತಾಲೂಕಿನ ಮಾಜಾಳಿ ಹೆಂಜಾ ನಾಯ್ಕ ಸೇನಾ ಆಯ್ಕೆ ಪೂರ್ವ ತರಬೇತಿ ಶಾಲೆ"ಯಲ್ಲಿ ಮಾತ್ರ ನೀಡಲಾಗುವುದು. ಅಭ್ಯರ್ಥಿಗಳು ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳ ಕಛೇರಿಗೆ ಅರ್ಜಿಯನ್ನು ಖುದ್ದಾಗಿ ಅಥವಾ ನೋಂದಾಯಿತ ಅಂಚೆ ಮೂಲಕ ನ. 22 ರೊಳಗಾಗಿ ಅರ್ಜಿ ಸಲ್ಲಿಸಬಹುದು.

ಅಭ್ಯರ್ಥಿ ಮತ್ತು ಕುಟುಂಬದ ಒಟ್ಟು ಗರಿಷ್ಠ ವಾರ್ಷಿಕ ಆದಾಯ ಮಿತಿ– ಪ್ರವರ್ಗ–1 ಕ್ಕೆ ರೂ. 2.50 ಲಕ್ಷಗಳು ಹಾಗೂ ಪ್ರವರ್ಗ–2(ಎ), 3(ಎ) ಮತ್ತು 3(ಬಿ) ಗಳಿಗೆ ರೂ. 1 ಲಕ್ಷಗಳ ಒಳಗಿರಬೇಕು.

ಅಭ್ಯರ್ಥಿಯು 10ನೇ ತರಗತಿಯನ್ನು ಉತ್ತೀರ್ಣವಾಗಿದ್ದು, ಪ್ರತಿ ವಿಷಯದಲ್ಲಿ ಕನಿಷ್ಠ 33 ಅಂಕಗಳು ಮತ್ತು ಸರಾಸರಿ ಶೇ. 45 ರಷ್ಟು ಅಂಕಗಳನ್ನು ಪಡೆದಿರಬೇಕು.

ವಯೋಮಿತಿಯು ಜನ್ಮ ದಿನಾಂಕ ಮತ್ತು ವಯಸ್ಸು 10ನೇ ತರಗತಿಯ ಅಂಕ ಪಟ್ಟಿಯಲ್ಲಿರುವಂತೆ 22 ನವೆಂಬರ್ 2024 ಕ್ಕೆ ಅನ್ವಯಿಸುವಂತೆ ಅಭ್ಯರ್ಥಿಯ ವಯಸ್ಸನ್ನು ಪರಿಗಣಿಸಲಾಗುವುದು. ಅಭ್ಯರ್ಥಿಯು 22 ನವೆಂಬರ್ 2004 ರಿಂದ 22 ನವೆಂಬರ್ 2007 ರ ನಡುವಿನ ಅವಧಿಯಲ್ಲಿ ಜನಿಸಿರಬೇಕು.

ಅರ್ಜಿ ನಮೂನೆ ಹಾಗೂ ಹೆಚ್ಚಿನ ಮಾಹಿತಿಗಾಗಿ ಇಲಾಖಾ ವೆಬ್–ಸೈಟ್ https://bcwd.karnataka.gov.in ನಿಂದ ಪಡೆಯಬಹುದು ಹಾಗೂ ದೂರವಾಣಿ ಸಂಖ್ಯೆ :08382–226588 ನ್ನು ಸಂಪರ್ಕಿಸುವಂತೆ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಅಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಇಂಡಿಯಾ ಪೋಸ್ಟ್ ಪೇಮೆಂಟ್ಸ್ ಬ್ಯಾಂಕ್ ನವೆಂಬರ ೩೦ ರವರೆಗೆ ಡಿಜಿಟಲ್ ಲೈಫ್ ಸರ್ಟಿಫಿಕೇಟ್ ಅಭಿಯಾನ

ಧಾರವಾಡ : ಇಂಡಿಯಾ ಪೋಸ್ಟ್ ಪೇಮೆಂಟ್ಸ್ ಬ್ಯಾಂಕ್ ಹಾಗೂ ಪಿಂಚಣಿದಾರರ ಕಲ್ಯಾಣ ಇಲಾಖೆ ಸಹಯೋಗದೊಂದಿಗೆ ಜೀವನ ಪ್ರಮಾಣ ಪತ್ರ (Digital Life Certificate) ಅಭಿಯಾನ ಆರಂಭಿಸಿದೆ. ನವೆಂಬರ್ 1, 2024 ರಿಂದ ನವಂಬರ್ 30, 2024 ರವರೆಗೆ ಅಭಿಯಾನ ನಡೆಸಲಾಗುವುದು.

ಪಿಂಚಣಿದಾರರು ಹತ್ತಿರದ ಅಂಚೆ ಕಚೇರಿ ಅಥವಾ ಹತ್ತಿರದ ಪೋಸ್ಟ್‌ಮ್ಯಾನ, ಗ್ರಾಮೀಣ ಡಾಕ್ ಸೇವಕರನ್ನು ಸಂಪರ್ಕಿಸಬೇಕು. ಅಥವಾ ಡಿಜಿಟಿಲ್ ಲೈಫ್ ಪ್ರಮಾಣ ಪತ್ರ ನೀಡುವ ಸೇವೆಯನ್ನು ಮನೆಯಲ್ಲಿಯೇ ಕುಳಿತು ಬೆರಳುಚ್ಚು ಅಥವಾ ಮುಖಚಹರೆಯ ಮೂಲಕ ನಿಮ್ಮ ಜೀವನ ಪ್ರಮಾಣಪತ್ರವನ್ನು ಪಡೆಯಬಹುದು. ಈ ಸೇವೆಗಾಗಿ ಪಿಂಚಣಿದಾರರು ಕೇವಲ ರೂ.70 ಶುಲ್ಕದೊಂದಿಗೆ ತಮ್ಮ ಆಧಾರ್ ಹಾಗೂ ಪಿಂಚಣಿ ವಿವರಗಳನ್ನು ಒದಗಿಸಬೇಕು.

ಈ ಪ್ರಮಾಣ ಪ್ರಕ್ರಿಯೆ ಪೂರ್ಣಗೊಂಡ ನಂತರ ಪಿಂಚಣಿದಾರರು ತಮ್ಮ ಮೊಬೈಲ್‌ನಲ್ಲಿ ದೃಢೀಕರಣ ಮೆಸೇಜ್ ಪಡೆಯುತ್ತಾರೆ ಹಾಗೂ 2 ದಿನಗಳ ನಂತರ https://jeevanpramaan.gov.in/ppouser/login ವೆಬ್‌ಸೈಟ್‌ನಲ್ಲಿ ತಮ್ಮ ಜೀವನ ಪ್ರಮಾಣ ಪತ್ರವನ್ನು ಪಡೆಯಬಹುದು ಎಂದು ಭಾರತೀಯ ಅಂಚೆ ಇಲಾಖೆ ಪ್ರಕಟಣೆಯಲ್ಲಿ ತಿಳಿಸಿದೆ.

## ವಿವಿಧ ಸ್ನಾತಕೋತ್ತರ ಕೋರ್ಸುಗಳ ಪ್ರವೇಶಕ್ಕೆ ಅರ್ಜಿ: ಅವಧಿ ವಿಸ್ತರಣೆ

ಕೊಪ್ಪಳ : ಕೊಪ್ಪಳ ವಿಶ್ವವಿದ್ಯಾಲಯದಿಂದ 2024–25ನೇ ಸಾಲಿನ ಎಂ.ಎ. ಕನ್ನಡ, ಇಂಗ್ಲೀಷ್, ಇತಿಹಾಸ, ರಾಜ್ಯಶಾಸ್ತ್ರ, ಅರ್ಥಶಾಸ್ತ್ರ, ಸಮಾಜಶಾಸ್ತ್ರ, ಪತ್ರಿಕೋದ್ಯಮ, ಎಂ.ಕಾಂ. ಹಾಗೂ ಎಂ.ಎಸ್ಸಿ ಭೌತಶಾಸ್ತ್ರ, ರಸಾಯನಶಾಸ್ತ್ರ ಮತ್ತು 'ಗಣಿತಶಾಸ್ತ್ರ ಕೋರ್ಸುಗಳಿಗೆ ಕೊಪ್ಪಳ ವಿಶ್ವವಿದ್ಯಾಲಯದ ಮುಖ್ಯ ಆವರಣ, ಸ್ನಾತಕೋತ್ತರ ಕೇಂದ್ರ, ಯಲಬುರ್ಗಾ ಮತ್ತು ಗಂಗಾವತಿ ಹಾಗೂ ಕೊಪ್ಪಳ ವಿಶ್ವವಿದ್ಯಾಲಯದ ಸಂಯೋಜಿತ ಸರ್ಕಾರಿ, ಖಾಸಗಿ ಅನುದಾನಿತ ಮತ್ತು ಅನುದಾನೇತರ ಮಹಾವಿದ್ಯಾಲಯಗಳಲ್ಲಿ ಪ್ರವೇಶಾತಿಯನ್ನು ಯುಯುಸಿಎಂಎಸ್ ತಂತ್ರಾಂಶದ ಮೂಲಕ ಅರ್ಜಿ ಆಹ್ವಾನಿಸಲಾಗಿದ್ದು, ಅವಧಿಯನ್ನು ನವೆಂಬರ್ 11ರವರೆಗೆ ವಿಸ್ತರಿಸಲಾಗಿದೆ.

ಅರ್ಜಿ ಸಲ್ಲಿಸಲು ಅಕ್ಟೋಬರ್ 30 ಕೊನೆಯ ದಿನಾಂಕವಾಗಿತ್ತು, ಈ ದಿನಾಂಕವನ್ನು ವಿಸ್ತರಿಸಲಾಗಿದ್ದು, ನ.11ರ ವರೆಗೆ ಅರ್ಜಿ ಸಲ್ಲಿಸಲು ಅವಕಾಶವಿದೆ. ಆಸಕ್ತಿಯುಳ್ಳ ಅರ್ಹ ವಿದ್ಯಾರ್ಥಿಗಳು ಯುಯುಸಿಎಂಎಸ್ ಪೋರ್ಟಲ್ (https://uuems karnataka.gov.in) ಮೂಲಕ ಆನ್‌ಲೈನ್ ಅರ್ಜಿ ಸಲ್ಲಿಸಬಹುದಾಗಿದೆ. ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಿದ ನಂತರ ಅದರ ಒಂದು ಪ್ರತಿ ಜೊತೆಗೆ ಸಂಬಂಧಪಟ್ಟ ದಾಖಲಾತಿಗಳ ನಕಲು ಪ್ರತಿಯನ್ನು ದೃಢೀಕರಿಸಿ ಕೊಪ್ಪಳ ವಿಶ್ವವಿದ್ಯಾಲಯಕ್ಕೆ ಸಲ್ಲಿಸಬೇಕು.

ಅರ್ಜಿ ಶುಲ್ಕಗಳ ವಿವರ ಹಾಗೂ ಅರ್ಜಿಗಳನ್ನು ಸಲ್ಲಿಸಲು ಪಾಲಿಸಬೇಕಾದ ಮಾನದಂಡಗಳಿಗೆ ಸಂಬಂಧಿಸಿದ ಮಾಹಿತಿಯನ್ನು ವಿಶ್ವವಿದ್ಯಾಲಯದ ಜಾಲತಾಣಕ್ಕೆ ಭೇಟಿ ನೀಡಿ ಅಥವಾ ಪ್ರವೇಶಾತಿ ಪಡೆಯಲಿಚ್ಛಿಸುವ ವಿದ್ಯಾರ್ಥಿಗಳು ಕೊಪ್ಪಳ ವಿಶ್ವವಿದ್ಯಾಲಯದ ಮುಖ್ಯ ಆವರಣ, 4ನೇ ಮಹಡಿ, ಸರ್ಕಾರಿ ತಾಂತ್ರಿಕ ಮಹಾವಿದ್ಯಾಲಯ, ತಳಕಲ್, ಸ್ನಾತಕೋತ್ತರ ಕೇಂದ್ರ, ಯಲಬುರ್ಗಾ ಮತ್ತು ಗಂಗಾವತಿ ಹಾಗೂ ಸಂಯೋಜಿತ ಮಹಾವಿದ್ಯಾಲಯಗಳಿಗೆ ನೇರವಾಗಿ ಭೇಟಿ ನೀಡಿ ಮಾಹಿತಿ ಪಡೆಯಬಹುದು ಎಂದು ಕೊಪ್ಪಳ ವಿಶ್ವವಿದ್ಯಾಲಯದ ಕುಲಸಚಿವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಮಕ್ಕಳಲ್ಲಿನ ಪ್ರತಿಭೆ ಗುರುತಿಸಿ ಪ್ರೋತ್ಸಾಹಿಸಬೇಕು : ರವಿರಾಜ ಅಂಕೋಲೇಕರ್




ಕಾರವಾರ – ಮಕ್ಕಳಲ್ಲಿ ಅಡಗಿರುವ ಸುಪ್ತ ಪ್ರತಿಭೆಯನ್ನು ಗುರುತಿಸಿ ಅವರಿಗೆ ಸೂಕ್ತ ವೇದಿಕೆಯನ್ನು ಕಲ್ಪಿಸುವ ಮೂಲಕ ಅವರ ಕಲೆಗೆ ಪ್ರೋತ್ಸಾಹ ನೀಡಬೇಕು ಎಂದು ನಗರಸಭೆ ಅಧ್ಯಕ್ಷ ರವಿರಾಜ ಅಂಕೋಲೇಕರ್ ಹೇಳಿದರು.

ಅವರು ಶುಕ್ರವಾರ ರಾಜ್ಯ ಬಾಲ ಭವನ ಸೊಸೈಟಿ ಬೆಂಗಳೂರು, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಹಾಗೂ ಜಿಲ್ಲಾ ಬಾಲ ಭವನ ಸೊಸೈಟಿ ಇವರ ಸಂಯುಕ್ತ ಆಶ್ರಯದಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಸಭಾಂಗಣದಲ್ಲಿ ಆಯೋಜಿಸಿದ್ದ ಜಿಲ್ಲಾ ಮಟ್ಟದ ಮಕ್ಕಳ ದಿನಾಚರಣೆಯ ಅಂಗವಾಗಿ ವಿವಿಧ ಸ್ಪರ್ಧೆಗಳ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಮಕ್ಕಳು ಚಿಕ್ಕವರಾಗಿದ್ದ ಸಂದರ್ಭದಲ್ಲಿಯೇ ಪೋಷಕರು ಮತ್ತು ಶಿಕ್ಷಕಕರು ಅವರಲ್ಲಿನ ಪ್ರತಿಭೆಯನ್ನು ಗುರುತಿಸುವ ಮೂಲಕ ಅವರಲ್ಲಿನ ಕೌಶಲ್ಯ ಮತ್ತು ಅಭಿರುಚಿಗೆ ತಕ್ಕಂತೆ ವೇದಿಕೆ ಕಲ್ಪಿಸಿದಲ್ಲಿ , ಅವರು ಮುಂದಿನ ದಿನಗಳಲ್ಲಿ ಕಲೆ ಮತ್ತು ಸಂಸ್ಕೃತಿಯನ್ನು ಪ್ರತಿಬಿಂಬಿಸುವ ವ್ಯಕ್ತಿಗಳಾಗಿ ಹೊರಹೊಮ್ಮುವ ಮೂಲಕ ಜಿಲ್ಲೆಯ ಕೀರ್ತಿ ಪತಾಕೆಯನ್ನು ರಾಷ್ಟ್ರಮಟ್ಟದಲ್ಲಿ ಹೆಚ್ಚಿಸಲಿದ್ದಾರೆ ಎಂದರು.

ಜಿಲ್ಲಾ ಪಂಚಾಯತ ಉಪ ಕಾರ್ಯದರ್ಶಿ (ಆಡಳಿತ) ನಾಗೇಶ ರಾಯ್ಕರ್ ಮಾತನಾಡಿ ಮಕ್ಕಳಲ್ಲಿರುವ ಪ್ರತಿಭೆಯನ್ನು ಪ್ರದರ್ಶಿಸಲು ಸಿಕ್ಕ ಅವಕಾಶವನ್ನು ಎಲ್ಲಾ ವಿದ್ಯಾರ್ಥಿಗಳು ಬಳಸಿಕೊಳ್ಳುವ ಮೂಲಕ ರಾಷ್ಟ್ರ ಮಟ್ಟದಲ್ಲಿ ಉತ್ತಮ ಸಾಧನೆ ಮಾಡುವಂತೆ ಹಾರೈಸಿದರು.

ಕಾರ್ಯಕ್ರಮದಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪ ನಿರ್ದೇಶಕ ವಿರೂಪಾಕ್ಷಗೌಡ ಪಾಟೀಲ್, ಹಿರಿಯ ಸಹಾಯಕ ನಿರ್ದೇಶಕಿ ಡಾ. ಲಕ್ಷ್ಮೀದೇವಿ ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಸೋನಲ್ ಐಗಳ,

ನಿರ್ಣಾಯಕರಾದ ಕೆ ಜಾನ್ ಬೆಲ್, ಅನೀಲ್ ಮಡಿವಾಳ ವಿನುತಾ ಪಡ್ನೇಕರ, ಕೃಷ್ಣಾನಂದ ಗುರವ ಮತ್ತಿತರರು ಉಪಸ್ಥಿತರಿದ್ದರು.

ವಿದ್ಯಾರ್ಥಿನಿ ಗಿರಿಜಾ ವೈದ್ಯ ಪ್ರಾರ್ಥಿಸಿದರು. ಕಲ್ಪನಾ ರಶ್ಮಿ ಕಲಾಲೋಕ ನೃತ್ಯ ಶಾಲೆಯ ಪ್ರಾಂಶುಪಾಲ ಸೂರ್ಯಪ್ರಕಾಶ ಸ್ವಾಗತಿಸಿ, ನಿರೂಪಿಸಿ ವಂದಿಸಿದರು.

# ಉದ್ಯೋಗ ಖಾತರಿ ನಡಿಗೆ ಸಬಲತೆಯೇಡೆಗೆ ಅಭಿಯಾನ



ಕಾರವಾರ – ಸಿದ್ದಾಪುರ ತಾಲೂಕಿನ ಶಿರಳಗಿ ಗ್ರಾಮ ಪಂಚಾಯತ್ ವ್ಯಾಪ್ತಿಯಲ್ಲಿ ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯಡಿ 2025–26ನೇ ಸಾಲಿನ ಕ್ರಿಯಾಯೋಜನೆ ತಯಾರಿಸುವ ನಿಟ್ಟಿನಲ್ಲಿ "ಉದ್ಯೋಗ ಖಾತರಿ ನಡೆ ಸಬಲತೆಯೇಡೆಗೆ" ಅಭಿಯಾನದಡಿ ಮನೆ ಮನೆ ಭೇಟಿ ನಡೆಸಲಾಯಿತು.

ಉದ್ಯೋಗ ಖಾತರಿ ಯೋಜನೆಯಡಿ ದುಡಿಯುವ ಕೈಗಳಿಗೆ ಉದ್ಯೋಗ ಹಾಗೂ ಗ್ರಾಮೀಣ ಭಾಗದ ಕೃಷಿಭೂಮಿ ಅಭಿವೃದ್ಧಿಪಡಿಸಲು ಇರುವ ವೈಯಕ್ತಿಕ ಹಾಗೂ ಸಾಮೂದಾಯಿಕ ಕಾಮಗಾರಿಗಳ ಮಾಹಿತಿಯನ್ನು ಪಂಚಾಯತ್ ಅಭಿವೃದ್ಧಿ ಅಧಿಕಾರಿ ಗೌರೀಶ್ ಹೆಗಡೆ ವಿವರಿಸಿದರು.

ನರೇಗಾದಡಿ ವೈಯಕ್ತಿಕ ಕಾಮಗಾರಿಗಳಾದ ಬಚ್ಚಲು ಗುಂಡಿ, ಎರೆಹುಳು ತೊಟ್ಟಿ, ದನದ ಕೊಟ್ಟಿಗೆ, ಕುರಿಶೇಡ್, ಕೋಳಿಶೇಡ್, ಬದು ನಿರ್ಮಾಣ ತೋಟಗಾರಿಕಾ ಬೆಳೆಗಳಾದ ಅಡಿಕೆ, ಮಾವು, ಸಿಬೆ, ಹಿಪ್ಪು ನೇರಳೆ, ಕಾಳು ಮೆಣಸು ಹಾಗೂ ಇನ್ನಿತರೆ ಬೆಳೆಗಳನ್ನು ತೆಗೆದುಕೊಂಡು ಆರ್ಥಿಕವಾಗಿ ಸಬಲರಾಗಬಹುದು ಎಂಬುದರ ಅರಿವು ಮೂಡಿಸುವ ಮೂಲಕ ನರೇಗಾ ಯೋಜನೆಯ ಮಾಹಿತಿಯುಳ್ಳ ಕರಪತ್ರಗಳನ್ನು ಹಂಚಿ ವೈಯಕ್ತಿಕ ಕಾಮಗಾರಿಗಳನ್ನು ಪಡೆದುಕೊಳ್ಳುವಂತೆ ತಿಳಿಸಲಾಯಿತು.

ಈ ಸಂದರ್ಭದಲ್ಲಿ ತಾಲೂಕು ಐಇಸಿ ಸಂಯೋಜಕಿ ಪೂರ್ಣಿಮಾ ಗೌಡ ಹಾಗೂ ಗ್ರಾಮ ಪಂಚಾಯತ್ ಸಿಬ್ಬಂದಿಗಳು ಹಾಜರಿದ್ದರು.

# ಅಗಡಿಯಲ್ಲಿ ಉದ್ಯೋಗ ಖಾತರಿ ನಡಿಗೆ ಸಬಲತೆಯಡೆಗೆ ಅಭಿಯಾನ




ಕಾರವಾರ – ಮುಂಡಗೋಡ ತಾಲೂಕಿನ ಹುನಗುಂದ ಗ್ರಾಮ ಪಂಚಾಯತ್ ವ್ಯಾಪ್ತಿಯ ಹುನಗುಂದ ಮತ್ತು ಅಗಡಿ ಗ್ರಾಮದಲ್ಲಿ ಗುರುವಾರ ಉದ್ಯೋಗ ಖಾತರಿ ನಡಿಗೆ, ಸಬಲತೆಯಡೆಗೆ ಅಭಿಯಾನ ಗುರುವಾರ ಕಾರ್ಯಕ್ರಮ ನಡೆಯಿತು.

ಕಾರ್ಯಕ್ರಮದಲ್ಲಿ ಎಂದು ಐಇಸಿ ಸಂಯೋಜಕ ಕಿರಣ ಜೋತೆಪ್ಪನವರ ಮಾತನಾಡಿ, ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯ 2025–26ನೇ ಸಾಲಿನ ಕಾರ್ಮಿಕ ಆಯವ್ಯಯ ತಯಾರಿಕೆಗಾಗಿ ವೈಯಕ್ತಿಕ ಹಾಗೂ ಸಮುದಾಯ ಕಾಮಗಾರಿಗಳ ಬೇಡಿಕೆ ಸಲ್ಲಿಸಿ, ಯೋಜನೆಯ ಸದುಪಯೋಗ ಪಡೆದುಕೊಳ್ಳಬೇಕು ಎಂದರು.

ತಾಲೂಕಿನ ಬಾಚಣಕಿ, ಚವಡಳ್ಳಿ, ಸಾಲಗಾಂವ, ಕಾತೂರು, ಇಂದೂರು ಸೇರಿದಂತೆ ಎಲ್ಲ ಗ್ರಾಮ ಪಂಚಾಯತ್ ವ್ಯಾಪ್ತಿಯಲ್ಲಿನ ಗ್ರಾಮಗಳಲ್ಲಿ ಮನೆ ಮನೆಗೆ ಭೇಟಿ ನೀಡಿ ಜನರಿಗೆ ಯೋಜನೆಯ ಬಗ್ಗೆ ಸಂಪೂರ್ಣ ಮಾಹಿತಿ ಒದಗಿಸಿ, ಜಾಗೃತಿ ಮೂಡಿಸಲಾಗುತ್ತಿದೆ. ಮುಂದಿನ ಆರ್ಥಿಕ ವರ್ಷದ ಕ್ರಿಯಾ ಯೋಜನೆ ತಯಾರಿಸಲು ಈಗಲೇ ಬೇಡಿಕೆ ಸಂಗ್ರಹಿಸಲಾಗುತ್ತಿದ್ದು, ಅಗತ್ಯವಿರುವವರು ವೈಯಕ್ತಿಕ ಹಾಗೂ ಸಮುದಾಯ ಕಾಮಗಾರಿಗಳ ಬೇಡಿಕೆಯನ್ನು ಸಲ್ಲಿಸಬಹುದಾಗಿದೆ. ಸಾರ್ವಜನಿಕರಿಂದ ಪಡೆದ ಬೇಡಿಕೆಗಳನ್ನು ಗ್ರಾಮ ಸಭೆಯಲ್ಲಿ ಅನುಮೋದನೆ ಪಡೆದು, 2025–26 ನೇ ಸಾಲಿನ ಸಮಗ್ರ ಕ್ರಿಯಾ ಯೋಜನೆ ತಯಾರಿಸಿ ಜಿಲ್ಲಾ ಪಂಚಾಯಿತಿಯಿಂದ ಅನುಮೋದನೆ ಪಡೆದು, ಸಾರ್ವಜನಿಕರು ಯೋಜನೆಯಡಿ ಸೌಲಭ್ಯ ಪಡೆದುಕೊಳ್ಳಲು ಅನುಕೂಲ ಮಾಡಿಕೊಡಲಾಗುವುದು ಎಂದರು.

ಈ ಸಂದರ್ಭದಲ್ಲಿ ಗ್ರಾಮ ಪಂಚಾಯತ್ ಕಾರ್ಯದರ್ಶಿ ಸತೀಶ್ ಒಡೆಯರ್, ಬಿಎಫ್‌ಟಿ ಸಂತೋಷ ಹಿರೇಮಠ, ಲಕ್ಷ್ಮಣ ಲಮಾಣಿ ಸೇರಿದಂತೆ ಪಂಚಾಯತ್ ಸಿಬ್ಬಂದಿ ಹಾಗೂ ಗ್ರಾಮಸ್ಥರು ಉಪಸ್ಥಿತರಿದ್ದರು

# ಮಕ್ಕಳ ದಿನಾಚರಣೆ: ಮಕ್ಕಳಿಗಾಗಿ ವಿವಿಧ ಕಲಾ ಸ್ಪರ್ಧೆಗಳ ಆಯೋಜನೆ

ಧಾರವಾಡ : ಜಿಲ್ಲಾ ಬಾಲಭವನ ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಿಂದ 9 ರಿಂದ 16 ವರ್ಷದೊಳಗಿನ ಮಕ್ಕಳಿಗೆ ಡಿ.ಸಿ ಕಂಪೌಂಡ ಹತ್ತಿರದ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕರ ಕಛೇರಿಯ ಜಿಲ್ಲಾ ಬಾಲಭವನದಲ್ಲಿ ವಿವಿಧ ಕಲೆಗಳ ಪ್ರದರ್ಶನ ಸ್ಪರ್ಧೆಯನ್ನು ಏರ್ಪಡಿಸಲಾಗಿದೆ.

ಆಸಕ್ತ ಮಕ್ಕಳು ಸೃಜನಾತ್ಮಕ ಪ್ರದರ್ಶನ ಕಲೆಗಳಾದ ಶಾಸ್ತ್ರೀಯ ನೃತ್ಯ, ಜಾನಪದ ನೃತ್ಯ, ಕರ್ನಾಟಕ ಶಾಸ್ತ್ರೀಯ ಸಂಗೀತ, ಹಿಂದೂಸ್ತಾನಿ ಶಾಸ್ತ್ರೀಯ ಸಂಗೀತ, ಸುಗಮ ಸಂಗೀತ ಸ್ಪರ್ಧೆ, ವಾದ್ಯ ಸಂಗೀತ, ತಬಲಾ, ಮೃದಂಗ, ಕೀಬೋರ್ಡ್, ಕೊಳಲು, ಡೊಳ್ಳು ಮತ್ತು ನಗಾರಿ, ವಿಜ್ಞಾನದಲ್ಲಿ ಸೃಜನಾತ್ಮಕ ಆವಿಷ್ಕಾರ, ಚಿತ್ರಕಲಾ ಸ್ಪರ್ಧೆಗಳಲ್ಲಿ ಭಾಗವಹಿಸಬಹುದು.

ಮಕ್ಕಳು ತಮ್ಮ ಹೆಸರನ್ನು ನವೆಂಬರ್ 7, 2024 ರೊಳಗಾಗಿ ನೊಂದಾಯಿಸಿಕೊಳ್ಳಬೇಕು.

ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ: 0836–2447850 ಹಾಗೂ ಕಾರ್ಯಕ್ರಮ ಸಂಯೋಜಕ ಶಶಿಧರ ಮುಂದಿನಮನಿ –7676756563, ಕಛೇರಿ ಸಹಾಯಕಿ ನಿರ್ಮಲಾ ಭುಜಂಗನವರ–8951534958 ಇವರನ್ನು ಸಂಪರ್ಕಿಸಬಹುದು ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಜಿಲ್ಲಾ ಮಟ್ಟದ ಯುವಜನೋತ್ಸವ ಕಾರ್ಯಕ್ರಮ

# ಶಿಕ್ಷಣದ ಜೊತೆಗೆ ಕಲೆಗೂ ಹೆಚ್ಚು ಆದ್ಯತೆ ನೀಡಿ: ಸಿಇಓ ರಾಹುಲ್ ರತ್ನಂ ಪಾಂಡೇಯ

ಕೊಪ್ಪಳ : ಪ್ರತಿಯೊಬ್ಬರಲ್ಲಿ ಒಂದೊಂದು ವಿಶೇಷತೆಯಿದ್ದು, ಯುವಜನರು ಕೇವಲ ಓದು, ಬರಹ ಅಂತ ಮೀಸಲಿರದೆ ತಮ್ಮಲ್ಲಿರುವ ಕಲೆಗೂ ಹೆಚ್ಚಿನ ಆದ್ಯತೆ ನೀಡಬೇಕು ಎಂದು ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ರಾಹುಲ್ ರತ್ನಂ ಪಾಂಡೇಯ ಅವರು ಹೇಳಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಹಾಗೂ ಯುವ ಸಂಘಗಳ ಒಕ್ಕೂಟ ಇವರ ಸಹಯೋಗದಲ್ಲಿ ನಗರದ ಜಿಲ್ಲಾ ಕ್ರೀಡಾಂಗಣದಲ್ಲಿ ಶುಕ್ರವಾರದಂದು ಆಯೋಜಿಸಿದ್ದ ಕೊಪ್ಪಳ ಜಿಲ್ಲಾ ಮಟ್ಟದ ಯುವಜನೋತ್ಸವ–2024 ರ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಇಂದಿನ ಯುವ ಪೀಳಿಗೆಯೂ ಮೊಬೈಲ್ ಫೋನ್ ಗಳಿಗೆ ತುಂಬಾ ಹತ್ತಿರವಾಗಿದ್ದು, ಅದನ್ನು ತ್ಯಜಿಸಿ ಕಲೆ, ಸಾಹಿತ್ಯಗಳಿಗೆ ಹೆಚ್ಚಿನ ಒತ್ತು ಕೊಡಬೇಕು. ಯುವಕ ಯುವತಿಯರು ಮಾನಸಿಕವಾಗಿ ಸದೃಢರಾಗಲು ಯೋಗ ಹಾಗೂ ಕ್ರೀಡೆಯಲ್ಲಿ ತೊಡಗಬೇಕು. ಯುವಕರು ಎಲ್ಲರೊಂದಿಗೆ ಸಾಮರಸ್ಯ ಜೀವನವನ್ನು ನಡೆಸುವ ಶೈಲಿಯನ್ನು ಬೆಳಿಸಿಕೊಳ್ಳಬೇಕು. ನಮ್ಮ ಕಲೆ ಮತ್ತು ಸಂಸ್ಕೃತಿಯನ್ನು ನಾವೆಲ್ಲರೂ ಅರಿತುಕೊಳ್ಳಬೇಕು. ಜಿಲ್ಲೆಯಲ್ಲಿ ಹೆಸರು ವಾಸಿಯಾದ ಕಲೆ, ಸಾಹಿತ್ಯಗಳನ್ನು ಪ್ರೋತ್ಸಾಹಿಸುವದರ ಜೊತೆಗೆ ಸಂರಕ್ಷಿಸೋಣ ಎಂದು ತಿಳಿಸಿದರು.

ಯಾವುದೇ ಕೆಲಸ ಚಿಕ್ಕದು ದೊಡ್ಡದಲ್ಲ ಕೆಲಸದಲ್ಲಿ ಶ್ರದ್ಧೆ ಹಾಗೂ ಶ್ರಮ ಮುಖ್ಯವಾಗಿದೆ. ಯುವಕ ಯುವತಿಯರಿಗಾಗಿ ಹಲವಾರು ಅವಕಾಶಗಳು ಇದಾವೆ ಅವುಗಳನ್ನು ಬಳಸಿಕೊಳ್ಳಬೇಕು.

ಕಲಿಕೆ ಒಂದೇ ಮಾರ್ಗವಲ್ಲ, ಬದಲಾಗಿ ಅನೇಕ ರಂಗಗಳಲ್ಲಿ ಯುವಕರು ತಮ್ಮನ್ನು ತಾವು ತೊಡಗಿಸಿಕೊಂಡು ಮುನ್ನಡೆಯಬೇಕು.

ಪ್ರತಿಯೊಬ್ಬ ಯುವಕ–ಯುವತಿಯರಲ್ಲಿ ವಿಭಿನ್ನ ಹಾಗೂ ವಿಶಿಷ್ಟವಾದ ಪ್ರತಿಭೆಯನ್ನು ಹೊಂದಿರುತ್ತಾರೆ. ಸಂಕಲ್ಪ ಇಟ್ಟುಕೊಂಡು ಗುರಿ ತಲುಪಿದರೆ, ಯಶಸ್ಸು ನಿಮ್ಮದಾಗುತ್ತದೆ ಎಂದು ವಿದ್ಯಾರ್ಥಿಗಳಿಗೆ ಕಿವಿಮಾತು ಹೇಳಿದರು.



ಕರ್ನಾಟಕ ರಾಜ್ಯ ಯುವ ಸಂಘಗಳ ಒಕ್ಕೂಟದ ರಾಜ್ಯಾಧ್ಯಕ್ಷ ಡಾ. ಎಸ್ ಬಾಲಾಜಿ ಅವರು ಮಾತನಾಡಿ, ರಾಜ್ಯದಲ್ಲಿ ಸಾಂಸ್ಕೃತಿಕ ನೀತಿಗಳು ಜಾರಿಯಾಗಬೇಕು. ಯುವಕ ಯುವತಿಯರು ಹೆಚ್ಚಿನ ಸಂಖ್ಯೆಯಲ್ಲಿ ಸಾಂಸ್ಕೃತಿಕ ಚಟುವಟಿಕೆಗಳಲ್ಲಿ ಭಾಗಿಯಾಗಬೇಕು. ಗೆಲುವು ಸೋಲು ಮುಖ್ಯವಲ್ಲ ಮೊದಲು ಭಾಗವಹಿಸುವುದು ಮುಖ್ಯವಾಗಿದೆ. ಜಿಲ್ಲೆಯಲ್ಲಿ ಜಾನಪದ ತರಬೇತಿಗಳನ್ನು ಮಾಡಬೇಕು ಎಂದು ಹೇಳಿದರು.

ಹಿರಿಯ ಸಾಹಿತಿಗಳಾದ ಪ್ರೊ. ಅಲ್ಲಮಪ್ರಭು ಬೆಟ್ಟದೂರು ಅವರು ಮಾತನಾಡಿ, ನಮ್ಮ ಜಿಲ್ಲೆಯು ಜಾನಪದ ಕಲೆಗಳಿಂದ ಶ್ರೀಮಂತವಾಗಿದೆ, ಇಲ್ಲಿನ ಹೆಸರಾಂತ ಕಲೆಗಳು ಬಹಳ ಪುರಾತನವಾದ್ದು ಆಗಿದೆ. ಗವಿ ಮಠ ವರ್ಷದಿಂದ ವರ್ಷಕ್ಕೆ ಸಾಂಸ್ಕೃತಿಕ ಸ್ವರೂಪವನ್ನು ಹೆಚ್ಚು ಪಡೆಯುತ್ತಿದೆ ಎಂದರು. ಯುವಪೀಳಿಗೆಯು ಓದುವುದರ ಜೊತೆಗೆ ಕಲೆ, ಸಾಹಿತ್ಯ, ಕ್ರೀಡೆಯಲ್ಲಿ ಪಾಲ್ಗೊಳ್ಳಬೇಕು ಎಂದು ತಿಳಿಸಿದರು.

ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕ ವಿಠ್ಠಲ ಬಿ ಜಾಬಗೌಡರ ಅವರು ಪ್ರಾಸ್ತಾವಿಕವಾಗಿ ಮಾತನಾಡಿದರು.

ಸನ್ಮಾನ: ಕಾರ್ಯಕ್ರಮದಲ್ಲಿ 2024–25ನೇ ಸಾಲಿನ ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತರಾದ ಪ್ರೊ. ಅಲ್ಲಮಪ್ರಭು ಬೆಟ್ಟದೂರು (ಸಾಹಿತ್ಯ ಕ್ಷೇತ್ರ) ಹಾಗೂ ರುಕ್ಮಿಣಿಬಾಯಿ ಚಿತ್ರಗಾರ (ಚಿತ್ರಕಲೆ ಕ್ಷೇತ್ರ) ಅವರಿಗೆ ಸನ್ಮಾನಿಸಲಾಯಿತು.

ಈ ಸಂದರ್ಭದಲ್ಲಿ ಕರ್ನಾಟಕ ರಾಜ್ಯ ಯುವ ಸಂಘಗಳ ಒಕ್ಕೂಟದ ಜಿಲ್ಲಾಧ್ಯಕ್ಷ ಮಂಜುನಾಥ ಜಿ ಗೊಂಡಬಾಳ, ನೆಹರು ಯುವ ಕೇಂದ್ರದ ಮೊಂಟು ಪತ್ತಾರ, ಜೀವನ್ ಸಾಬ್ ಬಿನ್ನಾಳ, ಅಕ್ಬರ್ ಮಿರ್ಚಿ ಸೇರಿದಂತೆ ನಿರ್ಣಾಯಕರು, ವಿದ್ಯಾರ್ಥಿಗಳು, ಮಾಧ್ಯಮ ಮಿತ್ರರು ಉಪಸ್ಥಿತರಿದ್ದರು.

# ದಲಿತ ಮಹಿಳೆಯ ಅತ್ಯಾಚಾರ ಪ್ರಕರಣ ಸಿಓಡಿಗೆ ವಹಿಸಲು

## ಡಿಎಸ್‌ಎಸ್ ಜಿಲ್ಲಾ ಸಂಚಾಲಕ ಹರೀಶ ನಾಟಿಕಾರ, ಬಂಜಾರ ಸಮಾಜದ ಮುಖಂಡರ ಒತ್ತಾಯ

ಮುದ್ದೇಬಿಹಾಳ ; ತಾಲ್ಲೂಕಿನ ಮುದ್ನಾಳ ತಾಂಡಾದ ವಿವಾಹಿತ ಮಹಿಳೆ ಶೋಭಾ ಲಮಾಣಿ ಮೇಲೆ ನ. 2 ರಂದು ಸಾಮೂಹಿಕವಾಗಿ ಅತ್ಯಚಾರಮಾಡಿ ಮಹಿಳೆಯನ್ನು ಅಮಾನುಷವಾಗಿ ಹತ್ಯೆಗೈದರು ಇಲ್ಲಿಯವರೆಗೆ ಮೃತ ಮಹಿಳೆಯ ಕುಟುಂಬಕ್ಕೆ ಸಮಾಜ ಕಲ್ಯಾಣ ಇಲಾಖೆಯ ತಾಲೂಕಾ,ಜಿಲ್ಲಾ ಅಧಿಕಾರಿಗಳು ತಾಲೂಕ ಆಡಳಿತ ಅಧಿಕಾರಿಗಳು ಇಲ್ಲಿಯವರೆಗೆ ಭೇಟಿ ನೀಡಿಲ್ಲ ಮತ್ತು ಸ್ಥಳೀಯ ಶಾಸಕರು ಸಹ ಆ ಕುಟುಂಬಕ್ಕೆ ಭೇಟಿ ನೀಡಿ ಸಾಂತ್ವನ ಹೇಳದೆ ಇರುವುದು ವಿಷಾದನೀಯ ಸಂಗತಿ ಇದನ್ನು ನಾವು ಉಗ್ರವಾಗಿ ಖಂಡಿಸುತ್ತೇವೆ ಎಂದು ಡಿಎಸ್‌ಎಸ್ ಜಿಲ್ಲಾ ಸಂಚಾಲಕ ಹರೀಶ ನಾಟಿಕಾರ, ಬಂಜಾರ ಸಮಾಜದ ಮುಖಂಡರಾದ ಬಿ .ಬಿ ಲಮಾಣಿ, ರಾಜು ಜಾಧವ, ರವಿ ನಾಯಕ ಹೇಳಿದರು ಅವರು

ಗುರುವಾರ ಆಲ್ ಇಂಡಿಯಾ ಬಂಜಾರ ಸೇವಾ ಸಂಘ ಮುದ್ದೇಬಿಹಾಳ ಹಾಗೂ ವಿವಿಧ ದಲಿತಪರ ಸಂಘಟನೆಗಳಿಂದ ಬಂಜಾರ ಸಮಾಜದ ಮಹಿಳೆ ಮೇಲೆ ಸಾಮೂಹಿಕ ಅತ್ಯಾಚಾರ ಮಾಡಿ ಹತ್ಯೆಯನ್ನು ಮಾಡಿದ ಆರೋಪಗಳಿಗೆ ಗಲ್ಲು ಶಿಕ್ಷೆ ವಿಧಿಸಬೇಕುಂದು ಆಗ್ರಹಿಸಿ ನಡೆದ ಬೃಹತ್ ಪ್ರತಿಭಟನೆಯನ್ನು ಉದ್ದೇಶಿಸಿ ಮಾತನಾಡಿದರು ಈ ಪ್ರಕರಣವನ್ನು ಸಿಓಡಿಗೆ ಒಪ್ಪಿಸಬೇಕು ದಲಿತ ಮಹಿಳೆಯ ಮೇಲೆ ಅತ್ಯಾಚಾರ ಹತ್ಯೆ ನಡೆದರೆ ಕಾನೂನಿನ ಪ್ರಕಾರ ನೀಡಬೇಕಾದ ಪರಿಹಾರವನ್ನು ನೀಡಬೇಕೆಂದು ಒತ್ತಾಯಿಸಿದರು.

ಸಿ .ಜಿ ವಿಜಯಕರ, ಎಸ್ ಪಿ ಸೇವಾಲಾಲ ಮಾತನಾಡಿ ಮುದ್ದೇಬಿಹಾಳ ತಾಲ್ಲೂಕಿನಲ್ಲಿ ಮಾನವ ಸಮಾಜ ತಲೆಗ್ಗಿಸುವಂತಹ ಅಮಾನವೀಯ ಘಟನೆ ನಡೆದಿರಲಿಲ್ಲ ಮುದ್ನಾಳ ತಾಂಡಾದ




ಮಹಿಳೆಯನ್ನು ನಿರ್ಜನ ಪ್ರದೇಶದಲ್ಲಿ ಸಾಮೂಹಿಕ ಅತ್ಯಾಚಾರ ಮಾಡಿ ಹತ್ಯೆಗೈದ ಆರೋಪಗಳಿಗೆ ಗಲ್ಲು ಶಿಕ್ಷೆ ವಿಧಿಸಬೇಕು ಆರೋಪಿಗಳ ಆಸ್ತಿಮುಟ್ಟುಗೂಲು ಹಾಕಿಕೊಳ್ಳಬೇಕೆಂದು ಆಗ್ರಹಿಸಿದರು.

ಪಟ್ಟಣದ ಸೇವಾಲಾಲ ಸರ್ಕಲ್ ದಿಂದ ಬೃಹತ್ ಮೆರವಣಿಗೆ-ಅಂಬೇಡ್ಕರ್ ವೃತ್ತ ಹಾಗೂ ಬಸವೇಶ್ವರ ವೃತ್ತದಲ್ಲಿ ಟೈಯರ್ ಬೆಂಕಿ ಹಚ್ಚಿ,ಮಾನವ ಸರಪಳಿ ಮಾಡಿ ಕೆಲ ಹೊತ್ತು ರಸ್ತೆ ತಡೆಮಾಡಿ ಪ್ರತಿಭಟಿಸಿ ತಹಶಿಲ್ದಾರ ಕಚೇರಿಗೆ ಆಗಮಿಸಿ ತಹಶಿಲ್ದಾರ ಗ್ರೇಡ್(2) ಸಂಗಮೇಶ ಮಳ್ಳಿಕೇರಿ ಅವರಿಗೆ ಮನವಿ ಪತ್ರ ಸಲ್ಲಿಸಿದರು.ಈ ಸಂದರ್ಭದಲ್ಲಿ ಆಲ್ ಇಂಡಿಯಾ ಬಂಜಾರ ಸೇವಾ ಸಂಘದ ತಾಲೂಕ ಅಧ್ಯಕ್ಷ ಬಹದ್ದೂರ್ ರಾಠೋಡ, ಬಿ ಎಸ್ ಲಮಾಣಿ, ಲಕ್ಷ್ಮಣ ಲಮಾಣಿ, ವಾಲಪ್ಪ ಲಮಾಣಿ, ಸಂತೋಷ ಚವ್ಹಾಣ, ಬಸವರಾಜ ಚಿಂತಾಮಣಿ, ಪರಶುರಾಮ ಮುರಾಳ, ಥಾವರಪ್ಪ ಜಾಧವ, ಅಶೋಕ ರಾಠೋಡ, ಲಕ್ಷ್ಮೀಬಾಯಿ ಲಮಾಣಿ,ಜ್ಯೋತಿ ಲಮಾಣಿ ದೇವಕಿ ನಾಯಕ ,ಕಮಲಾಬಾಯಿ ಚವ್ಹಾಣ ಸೇರಿದಂತೆ ಹೆಚ್ಚಿನ ಸಂಖ್ಯೆಯಲ್ಲಿ ಬಂಜಾರ ಸಮಾಜದ ಮಹಿಳೆಯರು ಯುವಕರು ಮುಖಂಡರು ಬೃಹತ್ ಪ್ರತಿಭಟನೆಯಲ್ಲಿ ಭಾಗವಹಿಸಿದ್ದರು.

## ನ.11 ರಂದುಪೂಜ್ಯ ಗುರುಸಿದ್ಧ ಮಹಾಸ್ವಾಮೀಜಿಯವರ ಅಮೃತ ಮಹೋತ್ಸವ ಸಮಾರಂಭ

**ಬೆಳಗಾವಿ :** ಕಾರಂಜಿಮಠದ ಶ್ರೀ ಮ.ನಿ.ಪ್ರ ಗುರುಸಿದ್ಧ ಮಹಾಸ್ವಾಮಿಗಳು ಅವರ ಅಮೃತ ಮಹೋತ್ಸವ ಸಮಾರಂಭವು ಬೆಳಗಾವಿ : ದಿ. 11ರಂದು ಮುಂಜಾನೆ 10-30 ಗಂಟೆಗೆ ಸ್ಥಳ : ಡಾ. ಜಿ. ಎಸ್. ಜೀರಗೆ ಸಭಾಭವನ, ಜೆಎನ್‌ಎಂಸಿ, ಬೆಳಗಾವಿಯಲ್ಲಿ ಜರುಗಲಿದೆ. ದಿವ್ಯ ಸಾನ್ನಿಧ್ಯ ಪೂಜ್ಯಶ್ರೀ ಜಗದ್ಗುರು ಡಾ. ತೋಂಟದ ಸಿದ್ಧರಾಮ ಮಹಾಸ್ವಾಮಿಗಳು ಜಗದ್ಗುರು ತೋಂಟದಾರ್ಯ ಸಂಸ್ಥಾನಮಠ, ಡಂಬಳ-ಗದಗ, ಪೂಜ್ಯಶ್ರೀ ಜಗದ್ಗುರು ಪಂಚಮ ಶಿವಲಿಂಗೇಶ್ವರ ಮಹಾಸ್ವಾಮಿಗಳು ಜಗದ್ಗುರು ದುರದುಂಡೀಶ್ವರಮಠ, ನಿಡಸೋಸಿ ಇವರು ವಹಿಸಲಿದ್ದಾರೆ.

ಸಾನಿಧ್ಯವನ್ನು ಶ್ರೀ ಮ.ನಿ.ಪ್ರ. ಡಾ. ಮಲ್ಲಿಕಾರ್ಜುನ ಮಹಾಸ್ವಾಮಿಗಳು, ಮುರುಘಾಮಠ, ಧಾರವಾಡ, ಸಮ್ಮುಖವನ್ನು ಪೂಜ್ಯ ಶ್ರೀ ಡಾ. ಅಲ್ಲಮಪ್ರಭು ಮಹಾಸ್ವಾಮಿಗಳು ನಾಗನೂರು ಶ್ರೀ ರುದ್ರಾಕ್ಷಿಮಠ, ಬೆಳಗಾವಿ, ಪೂಜ್ಯ ಶ್ರೀ ಚಂದ್ರಶೇಖರ ಶಿವಾಚಾರ್ಯ ಮಹಾಸ್ವಾಮಿಗಳು ಗುರುಶಾಂತೇಶ್ವರ ಹಿರೇಮಠ, ಹುಕ್ಕೇರಿ-ಬೆಳಗಾವಿ ಪೂಜ್ಯ ಶ್ರೀ ಶಿವಾನಂದ ಗುರೂಜಿ, ಅಲೌಕಿಕ ಧ್ಯಾನ ಮಂದಿರ, ನಿಲಜಿ ಹಾಗೂ ಪೂಜ್ಯ ಶ್ರೀ ಡಾ. ಶಿವಯೋಗಿ ದೇವರು, ಉತ್ತರಾಧಿಕಾರಿಗಳು, ಕಾರಂಜಿಮಠ, ಬೆಳಗಾವಿ, ಪೂಜ್ಯ ಶ್ರೀ ಗಂಗಾಮಾತಾಜಿ, ರೇಣುಕಾಶ್ರಮ, ಬೆಳಗಾವಿ ಇವರು ವಹಿಸಲಿದ್ದಾರೆ. ಅಧ್ಯಕ್ಷತೆಯನ್ನು ಡಾ. ಪ್ರಭಾಕರ ಕೋರೆ ಕಾರ್ಯಾಧ್ಯಕ್ಷರು, ಕೆ.ಎಲ್.ಇ. ಸಂಸ್ಥೆ, ಬೆಳಗಾವಿ ಇವರು ವಹಿಸಲಿದ್ದಾರೆ.

'ಅನುಭಾವ ಕಾರಂಜಿ' ಅಭಿನಂದನ ಸಂಪುಟ ಲೋಕಾರ್ಪಣೆಯನ್ನು ಶ್ರೀಮತಿ ಲಕ್ಷ್ಮಿ ಹೆಬ್ಬಾಳಕರ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಚಿವರು, ಬೆಂಗಳೂರು



ಇವರು ಮಾಡಲಿದ್ದು, ಮುಖ್ಯ ಅತಿಥಿಗಳಾಗಿ ಶ್ರೀ ಜಗದೀಶ ಶೆಟ್ಟರ ಮಾಜಿಮುಖ್ಯಮಂತ್ರಿಗಳು-ಸಂಸದರು, ಬೆಳಗಾವಿ, ಶ್ರೀ ಅಭಯ ಪಾಟೀಲ ಶಾಸಕರು, ಬೆಳಗಾವಿ ದಕ್ಷಿಣ ಅತಿಥಿಗಳಾಗಿ ಶ್ರೀ ಫಿರೋಜ ಶೇಠ ಮಾಜಿ ಶಾಸಕರು, ಬೆಳಗಾವಿ, ಶ್ರೀ ಮಹಾಂತೇಶ ಕವಟಗಿಮಠ, ಕಾರ್ಯದರ್ಶಿಗಳು, ಅಮೃತಮಹೋತ್ಸವ ಅಭಿನಂದನ ಸಂಪುಟ ಸಂಪಾದಕರಾದ ಡಾ ಬಸವರಾಜ ಜಗಜಂಪಿ, ಶ್ರೀ ಪ್ರಕಾಶ ಗಿರಿಮಲ್ಲನವರ; ವಿಶೇಷ ಆಹ್ವಾನಿತರಾಗಿ ಶ್ರೀಮತಿ ಮಂಗಲಾ ಸುರೇಶ ಅಂಗಡಿ, ಶ್ರೀ ರಮೇಶ ಕುಡಚಿ, ಶ್ರೀ ಸಂಜಯ ಪಾಟೀಲ, ಶ್ರೀ ಅನಿಲ ಬೆನಕೆ, ಶ್ರೀ ಶಂಕರಗೌಡ ಪಾಟೀಲ, ಶ್ರೀ ಶ್ರೀಕಾಂತ ಕದಂ, ಶ್ರೀ ರಾಘವೇಂದ್ರ ಕಾಗವಾಡ, ಶ್ರೀ ಚಂದ್ರಶೇಖರ ಸಿದ್ದರಾಮಪ್ಪ ಬೆಂಬಳಗಿ, ಶ್ರೀ, ಪಂಚಾಕ್ಷರಿ ಚೊಣ್ಣದ, ಡಾ. ರವಿ ಪಾಟೀಲ, ಶ್ರೀ ಶಿವನಗೌಡ ಪಾಟೀಲ, ಶ್ರೀ ಎಂ. ಬಿ. ಝಿರಲಿ, ಶ್ರೀ ಪ್ರಕಾಶ ಬಾಳೇಕುಂದ್ರಿ, ಶ್ರೀ ಬಾಳಣ್ಣ ಕಗ್ಗಣಗಿ, ಶ್ರೀ ಗಿರೀಶ, ಕತ್ತಿಶೆಟ್ಟಿ, ಶ್ರೀಮತಿ ರತ್ನಪ್ರಭಾ ಬೆಲ್ಲದ, ಶ್ರೀಮತಿ ಸರಳಾ ಹೇರೇಕರ್ ಉಪಸ್ಥಿತರಿರುವರು ಎಂದು ಪ್ರಕಟಣೆಯಲ್ಲಿ ಶ್ರೀಮಠವು ತಿಳಿಸಿದೆ.

## ಚೂರು-ಪಾರು

### ಹೆಸರು ಖರೀದಿ: ಅವಧಿ ವಿಸ್ತರಣೆ

**ಗದಗ:** 2024 ನೇ ಸಾಲಿನ ಬೆಂಬಲ ಬೆಲೆ ಯೋಜನೆ ಅಡಿಯಲ್ಲಿ ಹೆಸರು ಕಾಳು ಖರೀದಿ ಪ್ರಕ್ರಿಯೆ ನೋಂದಣಿಯ ಅವಧಿಯನ್ನು ನವೆಂಬರ್ 18 ರವರೆಗೆ ವಿಸ್ತರಿಸಲಾಗಿದೆ. ರೈತ ಬಾಂಧವರು ಈ ಯೋಜನೆಯ ಸದುಪಯೋಗ ಪಡೆದುಕೊಳ್ಳಬೇಕೆಂದು ಕರ್ನಾಟಕ ರಾಜ್ಯ ಕೃಷಿ ಮಾರಾಟ ಮಂಡಳಿಯ ಪ್ರಕಟಣೆ ತಿಳಿಸಿದೆ.

### ಅಪರಿಚಿತ ಶವ ಪತ್ತೆ

**ಗದಗ:** ನ.5ರಂದು ಗಿಣಿಗೇರಾ-ಮುನಿರಾಬಾದ ರೈಲ್ವೆ ನಿಲ್ದಾಣಗಳ ಮಧ್ಯೆ ರೈಲ್ವೆ ಕಿಮಿ ನಂ-135/400-500 ರಲ್ಲಿ ಅಪರಿಚಿತ ಗಂಡಸು ವಯಾ ಸುಮಾರು 55-60 ವರ್ಷದವನು ರೈಲಿಗೆ ಸಿಲುಕಿ ಮೃತಪಟ್ಟಿದ್ದು. ಈ ಸಂಬಂಧವಾಗಿ ಗದಗ ರೇಲ್ವೆ ಪೊಲೀಸ ಠಾಣೆ ಯುಡಿಆರ್ ನಂಬರ 60/2024 ಕಲಂ 194 ಬಿ.ಎನ್.ಎಸ್.ಎಸ್ ಪ್ರಕರಣದಲ್ಲಿ ದಾಖಲಾಗಿ ತನಿಖೆಯಲ್ಲಿದ್ದು. ಮೃತನ ಚಹರೆ ಪಟ್ಟಿಯ ವಿವರ:-ವಯಾ ಸುಮಾರು 55-60 ವರ್ಷ, ಸುಮಾರು:5.2 ಪೂಟ ಎತ್ತರ, ಸಾದಾಕಪ್ಪು ಮೈಬಣ್ಣ, ದುಂಡು ಮುಖ, ನೀಟಾದ ಮೂಗು, ದಪ್ಪನೆ ಮೈಕಟ್ಟು, ತಲೆಯಲ್ಲಿ ಸುಮಾರು 4 ಇಂಚು ಕಪ್ಪು /ಬಿಳಿ ಕೂದಲು, 1/2 ಇಂಚಿನಷ್ಟು ಕಪ್ಪು/ಬಿಳಿ ದಾಡಿ ಮತ್ತು ಮೀಸೆ ಬಿಟ್ಟಿರುತಾನೆ.ಬಟ್ಟೆ ಬರೆಗಳ ವಿವರ :- ಮೃತನ ಮೈಮೇಲೆ ಒಂದು ಬಿಳಿ ಅಂಗಿ ಅದರಲ್ಲಿ ನೀಲಿ ಕಲರಿನ ಚೆಕ್ಸ್, ಒಂಪು ಕಲರಿನ ಅಂಡರವೇರ್, ಒಂದು ಕಪ್ಪು ಕಲರಿನ ಪ್ಯಾಂಟ್ ಧರಿಸಿರುತ್ತಾನೆ.ಒಂದು ವೇಳೆ ಸದರಿ ಮೃತನು ಪತ್ತೆ ಆದಲ್ಲಿ ಗದಗ ರೈಲ್ವೇ ಪೊಲೀಸ್ ಠಾಣೆಯ ದೂರವಾಣಿ ನಂ.08372-278744 ಅಥವಾ ಮೊ.ನಂ.-9480802128 Email:gadagrly@ksp.gov.in ಅಥವಾ ರೈಲ್ವೆ ಪೊಲೀಸ್ ಕಂಟ್ರೋಲ್ ರೂಂ 080- 22871291 ನೇದ್ದಕ್ಕೆ ತಿಳಿಸಬಹುದಾಗಿದೆ.

### ಕ್ವಿಜ್‌ನಲ್ಲಿ ಸಮರ್ಥ ರಾಜ್ಯಮಟ್ಟಕ್ಕೆ ಆಯ್ಕೆ



**ಗೋಕಾಕ:** ಸ್ಥಳಿಯ ಗೋಕಾಕ ಶಿಕ್ಷಣ ಸಂಸ್ಥೆಯ ಮಾಡರ್ನ ಆಂಗ್ಲ ಮಾಧ್ಯಮ ಶಾಲೆಯ ವಿಧ್ಯಾರ್ಥಿ ಸಮರ್ಥ ಸುಧೀರ ಜಮಖಂಡಿ ಈತನು ಇತ್ತೀಚಿಗೆ ಚಿಕ್ಕೋಡಿಯಲ್ಲಿ ನಡೆದ ವಿಭಾಗ ಮಟ್ಟದ ರೂರಲ್ ಆಯ್. ಟಿ ಕ್ವಿಜ್ ನಲ್ಲಿ ಉತ್ತಮ ಪ್ರದರ್ಶನ ನೀಡಿ ವಿಭಾಗ ಮಟ್ಟಕ್ಕೆ ಆಯ್ಕೆಗೊಂಡಿದ್ದಾನೆ. ವಿಧ್ಯಾರ್ಥಿಯ ಈ ಸಾಧನೆಗೆ ಸಂಸ್ಥೆಯ ಆಡಳಿತ ಮಂಡಳಿಯ ಚೇರಮನ್ನರಾದ ವಿಶ್ವನಾಥ ಕಡಕೊಳ, ವಿಶ್ವಸ್ಥ ಮಂಡಳಿಯ ಚೇರಮನ್ನರಾದ ಡಾ. ಉದಯ ಆಜರಿ ಹಾಗೂ ಸರ್ವ ನಿರ್ದೇಶಕರು ಮತ್ತು ಕಾರ್ಯದರ್ಶಿಗಳಾದ ಆರ್.ಎಮ್.ವಾಲಿ, ಮುಖ್ಯೋಪಾಧ್ಯಾಯರಾದ ಎಸ್.ಕೆ.ಮಠದ, ಪ್ರಧಾನ ಗುರುಮಾತೆಯರಾದ ಶ್ರೀಮತಿ. ಕೆ.ಎಚ್.ಮೇಟಿ ಹಾಗೂ ಸರ್ವ ಸಿಬ್ಬಂದಿಯವರು ಅಭಿನಂದನೆ ಸಲ್ಲಿಸಿದ್ದಾರೆ.

### ಬಿಲ್ಡರ್ಸ್‌ಗೆ ಕ್ರಯ ಪತ್ರ ಕೊಡಲು ಆಯೋಗದ ಆದೇಶ

**ಧಾರವಾಡ:** ಗದಗಿನ ವಲಕೇಶ್ವರ ನಗರದ ನಿವಾಸಿ ಅನಿತಾದೇವಿ ಜೈನ್ ಇವರು ಹುಬ್ಬಳ್ಳಿಯ ಕಾರವಾರ ರೋಡನಲ್ಲಿರುವ ಗೋಲ್ಡನ್ ಹೈಟ್ಸ್ ಅಪಾರ್ಟಮೆಂಟ್‌ನಲ್ಲಿ ನಿವೇಶನವನ್ನು ಗೋಲ್ಡನ್ ಹೋಮ್ಸ್ ಬಿಲ್ಡರ್ಸ್ ಕಡೆಯಿಂದ ರೂ.25 ಲಕ್ಷ 60 ಸಾವಿರ ರೂಪಾಯಿಗಳಿಗೆ ಪ್ಲ್ಯಾಟ ನಂ.403 ಖರೀದಿಸಿದ್ದರು. ಈ ಬಗ್ಗೆ ಉಭಯತರ ಮಧ್ಯೆ ಖರೀದಿ ಒಪ್ಪಂದ ಪತ್ರ ಆಗಿ-ತ್ತು. ಪ್ಲ್ಯಾಟ ಕಟ್ಟಿಸಿ ಸ್ವಾಧೀನತೆಕೊಟ್ಟಿದ್ದರೂ ಸದರಿ ಬಿಲ್ಡರ್ಸ್ ದೂರುದಾರರಿಗೆ ನೋಂದಾಯಿತ ಕ್ರಯ ಪತ್ರ ಮಾಡಿಕೊಟ್ಟಿರಲಿಲ್ಲ ಆ ಕಾರಣದಿಂದ ಗೋಲ್ಡನ್ ಹೋಮ್ಸ್ ಬಿಲ್ಡರ್ಸ್‌ರವರು ಸೇವಾ ನ್ಯೂನ್ಯತೆ ಎಸಗಿ ತನಗೆ ಮೋಸ ಮಾಡಿದ್ದಾರೆ ಅಂತಾ ಹೇಳಿ ಅವರ ವಿರುದ್ಧ ಕ್ರಮ ಕೈಗೊಳ್ಳುವಂತೆ ದಿ:21/06/2024 ರಂದು ದೂರುದಾರ ಧಾರವಾಡ ಜಿಲ್ಲಾ ಗ್ರಾಹಕರ ಆಯೋಗಕ್ಕೆ ದೂರನ್ನು ಸಲ್ಲಿಸಿದ್ದರು. ಸದರಿ ದೂರಿನ ಬಗ್ಗೆ ಕೂಲಂಕುಷವಾಗಿ ವಿಚಾರಣೆ ನಡೆಸಿದ ಆಯೋಗದ ಅಧ್ಯಕ್ಷರಾದ ಈಶಪ್ಪ. ಭೂತೆ ಹಾಗೂ ವಿಶಾಲಾಕ್ಷಿ. ಅ. ಬೋಳಶೆಟ್ಟಿ ಮತ್ತು ಪ್ರಭು. ಸಿ. ಹಿರೇಮಠ ಸದಸ್ಯರು, ದೂರುದಾರ ಪೂರ್ತಿ ಹಣಕೊಟ್ಟ ಮೇಲೆ ಗೋಲ್ಡನ್ ಹೋಮ್ಸ್ ಬಿಲ್ಡರ್ಸ್‌ರವರು ಪ್ಲ್ಯಾಟ ನಿರ್ಮಿಸಿ ಸ್ವಾಧೀನತೆಕೊಟ್ಟಿದ್ದರು ಆ ಬಗ್ಗೆ ನೋಂದಾಯಿತ ಕ್ರಯ ಪತ್ರ ಮಾಡಿಕೊಡದೇ ಇರುವುದು ಸೇವಾ ನ್ಯೂನ್ಯತೆ ಆಗುತ್ತದೆ ಅಂತಾ ಅಭಿಪ್ರಾಯಪಟ್ಟು ತೀರ್ಪು ನೀಡಿದೆ. ತೀರ್ಪು ನೀಡಿದ 45 ದಿವಸಳ ಒಳಗಾಗಿ ದೂರುದಾರರ ಪರವಾಗಿ ನೋಂದಾಯಿತ ಕ್ರಯ ಪತ್ರ ಮಾಡಿಕೊಡುವಂತೆ ಆದೇಶಿಸಿದೆ.

# ನಿಖರವಾದ ಮಾಹಿತಿಯೊಂದಿಗೆ ಹಾಜರಾಗಿ

## ಧಾರವಾಡದಲ್ಲಿ ನ.14ರಂದು ವಿಧಾನ ಮಂಡಲದ ಪ.ಜಾತಿ, ಪ.ಪಂಗಡಗಳ ಕಲ್ಯಾಣ ಸಮಿತಿ ಸಭೆ

**ಧಾರವಾಡ:** ಕರ್ನಾಟಕ ರಾಜ್ಯ ವಿಧಾನ ಮಂಡಲದ ಅನುಸೂಚಿತ ಜಾತಿ ಮತ್ತು ಅನುಸೂಚಿತ ಪಂಗಡಗಳ ಕಲ್ಯಾಣ ಸಮಿತಿ ಅಧ್ಯಕ್ಷ ಹಾಗೂ ಸದಸ್ಯರು ನವೆಂಬರ 14 ರಂದು ಜಿಲ್ಲೆಗೆ ಭೇಟಿ ನೀಡಿ ಜಿಲ್ಲಾ ಮಟ್ಟದ ಪ್ರಗತಿ ಪರಿಶೀಲನೆ ನಡೆಸಲಿದ್ದು, ಎಲ್ಲಾ ಇಲಾಖೆಗಳ ಜಿಲ್ಲಾ ಮಟ್ಟದ ಅಧಿಕಾರಿಗಳು ಅಗತ್ಯ ಮಾಹಿತಿಯೊಂದಿಗೆ ಕಡ್ಡಾಯವಾಗಿ ಹಾಜರಾಗಬೇಕೆಂದು ಜಿಲ್ಲಾಧಿಕಾರಿ ದಿವ್ಯ ಪ್ರಭು ಅವರು ಸೂಚಿಸಿದರು.

ಅವರು, ಜಿಲ್ಲಾಧಿಕಾರಿಗಳ ಕಚೇರಿ ನೂತನ ಸಭಾಂಗಣದಲ್ಲಿ, ವಿಧಾನ ಮಂಡಲದ ಅನುಸೂಚಿತ ಜಾತಿ ಮತ್ತು ಅನುಸೂಚಿತ ಪಂಗಡಗಳ ಕಲ್ಯಾಣ ಸಮಿತಿ ಸಭೆಯ ಪೂರ್ವಸಿದ್ದತೆ ಕುರಿತು ಅಧಿಕಾರಿಗಳೊಂದಿಗೆ ಸಭೆ ಜರುಗಿಸಿ, ಮಾತನಾಡಿದರು.

ಕರ್ನಾಟಕ ವಿಧಾನ ಮಂಡಲದ ಅನುಸೂಚಿತ ಜಾತಿ ಮತ್ತು ಅನುಸೂಚಿತ ಪಂಗಡಗಳ ಕಲ್ಯಾಣ ಸಮಿತಿಯು ಜಿಲ್ಲೆಯಲ್ಲಿರುವ ಎಲ್ಲಾ ಇಲಾಖೆಗಳಲ್ಲಿನ ಕಳೆದ ಮೂರು ವರ್ಷಗಳಲ್ಲಿ ಸಾಮಾನ್ಯ ಕಾರ್ಯಕ್ರಮಗಳು ಮತ್ತು ಎಸ್.ಸಿ.ಪಿ ಹಾಗೂ ಟಿ.ಎಸ್.ಪಿ ಯೋಜನೆಗಳಡಿ ಅನುಸೂಚಿತ ಜಾತಿ ಮತ್ತು ಅನುಸೂಚಿತ ಪಂಗಡಗಳ ಸಮುದಾಯದವರ ಕಲ್ಯಾಣ ಕಾರ್ಯಕ್ರಮಗಳು, ವಿವಿಧ ಯೋಜನೆಗಳ ಕುರಿತು ಪ್ರಶ್ನಾವಳಿಗಳ ರೀತಿಯಲ್ಲಿ ಅಧಿಕಾರಿಗಳೊಂದಿಗೆ ಚರ್ಚಿಸಲಿದ್ದಾರೆ. ಎಲ್ಲಾ ಇಲಾಖೆಗಳ ಅಧಿಕಾರಿಗಳು ನಿಖರವಾದ ಮಾಹಿತಿಯನ್ನು ಹೊಂದಿರಬೇಕು ಎಂದು ಅವರು ಹೇಳಿದರು.

ಕಲ್ಯಾಣ ಸಮಿತಿಯ ಸಭೆಗೆ ಜಿಲ್ಲಾ ಮಟ್ಟದ ಎಲ್ಲಾ ಇಲಾಖೆಗಳ ಸಂಬಂಧಪಟ್ಟ ಅಧಿಕಾ-



ರಿಗಳು ಕಡ್ಡಾಯವಾಗಿ ಹಾಜರಾಗಿ, ಸಮಿತಿಯು ಕೇಳುವ ಎಲ್ಲ ಮಾಹಿತಿಯನ್ನು ಒದಗಿಸಲು ಕ್ರಮ ಕೈಗೊಳ್ಳಬೇಕು. ಸಮಿತಿಯ ಸಭೆ ನಡೆಸಲು ಸೂಕ್ತ ವ್ಯವಸ್ಥೆ ಮಾಡುವುದರ ಜೊತೆಗೆ ಅಧ್ಯಕ್ಷರು ಮತ್ತು ಸದಸ್ಯರನ್ನು ಸ್ವಾಗತಿಸಲು ಅವಶ್ಯವಿರುವ ಎಲ್ಲಾ ರೀತಿಯ ಶಿಷ್ಟಾಚಾರ ವ್ಯವಸ್ಥೆಗಳನ್ನು ಮಾಡಿಕೊಳ್ಳಬೇಕು ಎಂದು ಸಮಾಜ ಕಲ್ಯಾಣ ಇಲಾಖೆಯ ಜಂಟಿನಿರ್ದೇಶಕರಿಗೆ ಜಿಲ್ಲಾಧಿಕಾರಿಗಳು ಸೂಚನೆ ನೀಡಿದರು.

ಆಯಾ ಇಲಾಖೆಯಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಸಮುದಾಯದವರಿಗೆ ಇರುವ ಸೌಲಭ್ಯಗಳು ಯಾವವು, ಅನುದಾನ ಬಂದಿದ್ದು ಎಷ್ಟು ಹಾಗೂ ಬಳಕೆಯಾದ ಮತ್ತು ಉಳಿದಿರುವ ಅನುದಾನ ಮತ್ತು ಈ ಕುರಿತ ಅಂಕಿ ಅಂಶಗಳ ಬಗ್ಗೆ ಸರಿಯಾದ ಮಾಹಿತಿಯನ್ನು ಇಟ್ಟುಕೊಂಡಿರಬೇಕು ಎಂದರು.

ಸುಳ್ಳು ಜಾತಿ ಸರ್ಟಿಫಿಕೇಟ್ ಪ್ರಕರಣಗಳು, ದಲಿತ ಸಮುದಾಯದವರ ಮೇಲೆ ಹಲ್ಲೆ ಪ್ರಕರಣಗಳ ಕುರಿತು ಮಾಹಿತಿ ಕೇಳುವದ-ರಿಂದ ಸಂಬಂಧಿಸಿದ ಇಲಾಖೆಗಳ ಅಧಿಕಾರಿಗಳು ಸರಿಯಾದ ಮಾಹಿತಿ ಹೊಂದಿರಬೇಕು. ಸಮಿತಿ ಅಧ್ಯಕ್ಷರು, ಸದಸ್ಯರು ಕೇಳುವ ಎಲ್ಲ ಮಾಹಿತಿಯನ್ನು ನೀಡುವ ಮೂಲಕ ಸಭೆಯನ್ನು ಯಶಸ್ವಿಗೊಳಿಸಬೇಕು ಎಂದು ಜಿಲ್ಲಾಧಿಕಾರಿಗಳು ತಿಳಿಸಿದರು.

ವೇದಿಕೆಯಲ್ಲಿ ಅಪರ ಜಿಲ್ಲಾಧಿಕಾರಿ ಗೀತಾ ಸಿ.ಡಿ., ಅವರು ಇದ್ದರು. ಸಮಾಜ ಕಲ್ಯಾಣ ಇಲಾಖೆಯ ಜಂಟಿ ನಿರ್ದೇಶಕಿ ಪಿ.ಶುಭ ಅವರು ಸ್ವಾಗತಿಸಿ, ಪ್ರಾಸ್ತಾವಿಕವಾಗಿ ಮಾತನಾಡಿದರು.

ಜಿಲ್ಲಾ ಪಂಚಾಯತ ಉಪ ಕಾರ್ಯದರ್ಶಿ ಬಿ.ಎಸ್.ಮುಗನೂರಮಠ, ಜಿಲ್ಲಾ ನಗರಾಭಿವೃದ್ಧಿಕೋಶದ ಯೋಜನಾ ನಿರ್ದೇಶಕ ಅಜೀಜ್ ದೇಸಾಯಿ ಸೇರಿದಂತೆ ವಿವಿಧ ಇಲಾಖೆಗಳ ಜಿಲ್ಲಾಮಟ್ಟದ ಅಧಿಕಾರಿಗಳು ಸಭೆಯಲ್ಲಿ ಉಪಸ್ಥಿತರಿದ್ದರು.

## ಕೊಪ್ಪಳ ಜಿಲ್ಲೆಯ ಗ್ರಾಪಂ ಉಪ ಚುನಾವಣೆ: ವೇಳಾಪಟ್ಟಿ ಪ್ರಕಟ

**ಕೊಪ್ಪಳ:** ಕೊಪ್ಪಳ ಜಿಲ್ಲೆಯ ವಿವಿಧ ಕಾರಣಗಳಿಂದ ತೆರವಾದ ಗ್ರಾ.ಪಂ ಸದಸ್ಯ ಸ್ಥಾನಗಳ ತುಂಬಲು ಉಪ ಚುನಾವಣೆಯನ್ನು ನಡೆಸಲು ಜಿಲ್ಲಾಧಿಕಾರಿಗಳಾದ ನಲಿನ್ ಅತುಲ್ ಅವರು ವೇಳಾಪಟಿ ನಿಗದಿಪಡಿಸಿದ್ದಾರೆ.ಕೊಪ್ಪಳ ಜಿಲ್ಲೆಗೆ ಸಂಬಂಧಿಸಿದಂತೆ ವಿವಿಧ ಕಾರಣಗಳಿಂದ ತೆರವಾದ ಗ್ರಾಮ ಪಂಚಾಯತಿಗಳ ಸದಸ್ಯ ಸ್ಥಾನಗಳನ್ನು ತುಂಬಲು ಚುನಾವಣೆಗಳನ್ನು ನಡೆಸಬೇಕಾಗಿರುವುದರಿಂದ ಕರ್ನಾಟಕ ಪಂಚಾಯತ್‌ರಾಜ್ (ಚುನಾವಣೆಯನ್ನು ನಡೆಸುವ) ನಿಯಮಗಳು 1993ರ 12ನೇ ನಿಯಮಕ್ಕನುಸಾರವಾಗಿ ವಿವಿಧ ಗ್ರಾಮ ಪಂಚಾಯತಿ ಸದಸ್ಯ ಸ್ಥಾನಗಳ ಚುನಾವಣೆಗೆ ವೇಳಾಪಟ್ಟಿಯನ್ನು ಈ ಮೂಲಕ ನಿಗದಿಪಡಿಸಲಾಗಿದೆ.

ಚುನಾವಣಾ ವೇಳಾಪಟ್ಟಿ: ಕೊಪ್ಪಳ ಜಿಲ್ಲೆಯ ವಿವಿಧ ಕಾರಣಗಳಿಂದ ತೆರವಾದ ಗ್ರಾ.ಪಂ ಸದಸ್ಯ ಸ್ಥಾನಗಳನ್ನು ತುಂಬಲು ನಡೆಯುವ ಉಪ ಚುನಾವಣೆಯ ವೇಳಾಪಟ್ಟಿಯಂತೆ ನಾಮಪತ್ರಗಳನ್ನು ಸಲ್ಲಿಸಲು ನವೆಂಬರ್ 12 ಕೊನೆಯ ದಿನವಾಗಿದೆ. ನ.13ಕ್ಕೆ ನಾಮಪತ್ರಗಳನ್ನು ಪರಿಶೀಲನೆ, ಉಮೇದುವಾರಿಕೆಗಳನ್ನು ಹಿಂತೆಗೆದುಕೊಳ್ಳುವ ನ.15 ಕೊನೆಯ ದಿನವಾಗಿದೆ. ಮತದಾನ ಅವಶ್ಯವಿದ್ದರೆ, ನ.23ಕ್ಕೆ ಮತದಾನವನ್ನು ನಡೆಸಲಾಗುವುದು ಹಾಗೂ ನ.26ರಂದು ಚುನಾವಣೆ ಮುಕ್ತಾಯಗೊಳ್ಳಲಿದೆ.

**ಗ್ರಾ.ಪಂ ಕ್ಷೇತ್ರಗಳ ವಿವರ:** ಕುಷ್ಟಗಿ ತಾಲ್ಲೂಕಿನ 5-ಜಾಗೀರಗುಡದೂರ ಗ್ರಾಮ ಪಂಚಾಯತಿಯ ಜಾಗೀರಗುಡದೂರ-1 ಕ್ಷೇತ್ರ ಹಾಗೂ 34-ತುಮ-ರಿಕೊಪ್ಪ ಗ್ರಾಮ ಪಂಚಾಯತಿಯ ಗೊರೆಬಿಹಾಳ ಕ್ಷೇತ್ರ, ಕನಕಗಿರಿ ತಾಲ್ಲೂಕಿನ 6-ಹುಲಿಹೈದರ ಗ್ರಾ.ಪಂ.ನ ಹುಲಿಹೈದರ-1 ಕ್ಷೇತ್ರ, ಯಲಬುರ್ಗಾ ತಾಲ್ಲೂಕಿನ 9-ಮಾಟಲದಿನ್ನಿ ಗ್ರಾಮ ಪಂಚಾಯತಿಯ ಯಡ್ಡೋಣಿ-1 ಕ್ಷೇತ್ರ, 12-ಗಾಣದಾಳ ಗ್ರಾ.ಪಂ.ನ 1-ಗಾಣದಾಳ ಕ್ಷೇತ್ರ ಹಾಗೂ 10-ಹಿರೇವಂಕಲಕುಂಟಾ ಗ್ರಾ.ಪಂ.ನ ಚಿಕ್ಕವಂಕಲಕುಂಟಾ ಕ್ಷೇತ್ರ, ಕೊಪ್ಪಳ ತಾಲ್ಲೂಕಿನ 11-ಹಲಗೇರಾ ಗ್ರಾ.ಪಂ.ನ 4-ವದಗನಾಳ-1 ಕ್ಷೇತ್ರ, 16-ಇರಕಲ್ಲಗಡ ಗ್ರಾ.ಪಂ.ನ 8-ಇರಕಲ್ಲಗಡ-2 ಕ್ಷೇತ್ರ, 19-ಕಲ್‌ತಾವರಗೇರಾ ಗ್ರಾ.ಪಂ.ನ 2-ಕೂಕನಪಳ್ಳಿ-1 ಕ್ಷೇತ್ರ, 23-ಶಿವಪುರ ಗ್ರಾ.ಪಂ.ನ 4-ಶಿವಪುರ-3 ಕ್ಷೇತ್ರ, 22-ಬಂಡಿಹರ್ಲಾಪುರ ಗ್ರಾ.ಪಂ.ನ 6-ಬಸಾಪೂರ-2 ಕ್ಷೇತ್ರ, 5-ಬೆಟಗೇರಾ ಗ್ರಾ.ಪಂ.ನ 4-ಬೆಟಗೇರಾ-4 ಕ್ಷೇತ್ರ ಹಾಗೂ 14-ಕಿನ್ನಾಳ ಗ್ರಾ.ಪಂ.ನ 6-ಕಿನ್ನಾಳ-6 ಕ್ಷೇತ್ರ, ಕುಕನೂರು ತಾಲ್ಲೂಕಿನ 5-ಶಿರೂರ ಗ್ರಾಪಂ.ನ 1-ಯಡಿಯಾಪೂರ ಕ್ಷೇತ್ರ ಹಾಗೂ 1-ಕುದರಿಮೋತಿ ಗ್ರಾ.ಪಂ.ನ ಕುದರಿಮೋತಿ-3 ಕ್ಷೇತ್ರ, ಗಂಗಾವತಿ ತಾಲ್ಲೂಕಿನ 5-ಚಿಕ್ಕಜಂತಕಲ್ ಗ್ರಾ.ಪಂ.ನ ಹೊಸಳ್ಳಿ-3 ಕ್ಷೇತ್ರ ಹಾಗೂ 9-ಮರಳಿ ಗ್ರಾ.ಪಂ.ನ ಮರಳಿ-4 ಕ್ಷೇತ್ರ, ಕಾರಟಗಿ ತಾಲ್ಲೂಕಿನ 13-ಸಿದ್ದಾಪೂರ ಗ್ರಾ.ಪಂ.ನ 2-ಸಿದ್ದಾಪೂರ ಕ್ಷೇತ್ರ ಹಾಗೂ 2-ಬೆನ್ನೂರು ಗ್ರಾ.ಪಂ.ನ 5-ಕಕ್ಕರಗೋಳ-2 ಕ್ಷೇತ್ರಕ್ಕೆ ಉಪ ಚುನಾವಣೆ ನಡೆಯಲಿದೆ ಎಂದು ಪ್ರಕಟಣೆ ತಿಳಿಸಿದೆ.

# ದೇವಳಮಕ್ಕಿಯಲ್ಲಿ ಉದ್ಯೋಗ ಖಾತರಿ ನಡಿಗೆ ಸಬಲತೆಯೆಡೆಗೆ ಅಭಿಯಾನ

ಕಾರವಾರ: ಉತ್ತರ ಕನ್ನಡ ಜಿಲ್ಲೆಯ ಕಾರವಾರ ತಾಲ್ಲೂಕಿನ ದೇವಳಮಕ್ಕಿ ಗ್ರಾಮ ಪಂಚಾಯತಿ ಸಭಾಂಗಣದಲ್ಲಿ 2025-26ನೇ ಸಾಲಿನ ಮಹಾತ್ಮ ಗಾಂಧಿ ನರೇಗಾ ಯೋಜನೆಯ ವಾರ್ಷಿಕ ಕ್ರಿಯಾ ಯೋಜನೆ ತಯಾರಿಕೆಗಾಗಿ ಉದ್ಯೋಗ ಖಾತ್ರಿ ನಡಿಗೆ ಸಬಲತೆಯೆಡೆಗೆ ಅಭಿಯಾನ ಹಾಗೂ ಗ್ರಾಮ ಸಭೆಯು ಗುರುವಾರ ನಡೆಯಿತು.

ಕಾರ್ಯಕ್ರಮದಲ್ಲಿ ದೇವಳಮಕ್ಕಿ ಗ್ರಾಮ ಪಂಚಾಯತಿಯ ಅಧ್ಯಕ್ಷ ಸಂತೋಷ ಎಲ್. ಗೌಡ ಮಾತನಾಡಿ 2025-26ನೇ ಸಾಲಿನಲ್ಲಿ ಮಹಾತ್ಮ ಗಾಂಧಿ ನರೇಗಾದಡಿ ಲಭ್ಯವಿರುವ ಕೂಲಿ ಕೆಲಸ ಹಾಗೂ ವೈಯಕ್ತಿಕ ಕಾಮಗಾರಿಗಳನ್ನು ಪಡೆದುಕೊಳ್ಳಲು ಇಚ್ಛಿಸುವ ಗ್ರಾಮ ಪಂಚಾಯತಿ ವ್ಯಾಪ್ತಿಯ ಪ್ರತಿಯೊಬ್ಬ ನಾಗರಿಕರು ಕೂಡಲೇ ಬೇಡಿಕೆ ಅರ್ಜಿ ಸಲ್ಲಿಸಬೇಕು ಎಂದು ತಿಳಿಸಿದರು.

ಜಿಲ್ಲಾ ಐಇಸಿ ಸಂಯೋಜಕರಾದ ಫಕೀರಪ್ಪ ತುಮ್ಮಣ್ಣನವರ ಅವರು ಸಭೆಯಲ್ಲಿದ್ದ ಗ್ರಾಮಸ್ಥರಿಗೆ ನರೇಗಾ ಮಾಹಿತಿ ಹಾಗೂ ಕ್ಯೂಆರ್ ಕೋಡ್‌ಯುಳ್ಳ



ಕರಪತ್ರಗಳನ್ನು ವಿತರಿಸಿ ಮಾತನಾಡಿ, ಉದ್ಯೋಗ ಖಾತರಿ ಯೋಜನೆಯಡಿ ವೈಯಕ್ತಿಕ ಕಾಮಗಾ-ರಿಗಳಾದ ಬಚ್ಚಲು ಗುಂಡಿ, ಎರೆಹುಳು ತೊಟ್ಟಿ, ದನದ ಕೊಟ್ಟಿಗೆ, ಕುರಿ, ಕೋಳಿ, ಮೇಕೆ, ಹಂದಿ ಶೇಡ್, ತೋಟಗಾರಿಕಾ ಬೆಳೆಗಳಾದ ಅಡಿಕೆ, ಮಾವು, ನಿಂಬೆ, ಸಿಬೆ, ದಾಳಿಂಬೆ, ಕಾಳುಮೆಣಸು, ಲವಂಗ ಸೇರಿದಂತೆ ಇನ್ನಿತರೆ ಬೆಳೆಗಳನ್ನು ತೆಗೆದುಕೊಂಡು ಆರ್ಥಿಕವಾಗಿ ಸಬಲರಾಗಬಹುದು. ಈ ಎಲ್ಲ ಕಾಮಗಾರಿಗಳನ್ನು ಪಡೆದುಕೊಳ್ಳಲು ಗ್ರಾಮ ಪಂಚಾಯತಿಗೆ ತೆರಳಿ ನಮೂನೆ 6 ರಲ್ಲಿ ಕೆಲಸದ ಬೇಡಿಕೆ ಅರ್ಜಿ ಸಲ್ಲಿಸಬೇಕು. ಇನ್ನೂ ಬೇಡಿಕೆ ಅರ್ಜಿ ಸಲ್ಲಿಸದವರು ಆದಷ್ಟು ಬೇಗ ಅರ್ಜಿಯನ್ನು ಸಲ್ಲಿಸುವಂತೆ ತಿಳಿಸಿದರು.

ಈ ಸಂದರ್ಭದಲ್ಲಿ ಗ್ರಾಮ ಪಂಚಾಯತಿ ಉಪಾಧ್ಯಕ್ಷ ಕೋಮಲ ಕೆ. ದೇಸಾಯಿ, ಸದಸ್ಯ ಸಂತೋಷ ಗುನಗಿ, ಕಮಲಾ ವಾಲ್ಮೀಕಿ, ಸಂತೋಷ ಗಾಂವಕರ, ರೂಪಾ ಹುಲಸ್ವಾರ, ಸುವರ್ಣಾ ಗಾಂವಕರ, ಪ್ರತಿ-ಕ್ಷಾ ವಾಂಗಣಕರ, ಗ್ರಾಮ ಸಭೆ ನೋಡಲ್ ಅಧಿಕಾರಿ ಸುರೇಶ ಗಾಂವಕರ, ಕಿನ್ನರ ಉಪ ತಹಶಿಲ್ದಾರ ಶ್ರೀಧರ ನಾಯ್ಕ, ಅಭಿವೃದ್ಧಿ ಅಧಿಕಾರಿ ರಘುನಂದನ್ ಮಡಿವಾಳ, ಡಿಆರ್‌ಎಫ್‌ಓ ಸುಭಾಸ್ ರಾಠೋಡ, ಗಾರ್ಡ್ ರಾಜಶೇಖರ, ತಾಪಂ ತಾಂತ್ರಿಕ ಸಂಯೋಜಕ ಸೂರಜ್ ಗುನಗಿ, ಕಾರ್ಯದರ್ಶಿ ಸೂರಜ್ ಮಿರಾಶಿ, ಕ್ಲರ್ಕ್ ಕಂ ಡಿಇಒ ಮನಿಷಾ ಮಡಿವಾಳ, ಸಿಬ್ಬಂದಿ ಅಕ್ಷತಾ ಗುನಗಿ ಸೇ-ರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು, ಸಿಬ್ಬಂದಿ, ಎನ್‌ಆರ್‌ಎಲ್‌ಎಂ ಯೋಜನೆಯಡಿ ಕಾರ್ಯನಿರ್ವಹಿಸುವ ಎಂಬಿಕೆ, ಎಲ್‌ಸಿಆರ್‌ಪಿ ಹಾಗೂ ಸ್ವಸಹಾಯ ಸಂಘಗಳ ಮಹಿಳೆಯರು, ಆಶಾ, ಅಂಗನವಾಡಿ, ಆರೋಗ್ಯ ಕಾರ್ಯಕರ್ತರು, ಸಾರ್ವಜನಿಕರು ಉಪಸ್ಥಿತರಿದ್ದರು.

# ಫುಲಗಡ್ಡಿಯಲ್ಲಿ ಯಶಸ್ವಿಯಾದ ಜಾನಪದ ಸಮ್ಮೇಳನ

**ಮೂಡಲಗಿ:** ಇಲ್ಲಿಗೆ ಸಮೀಪದ ಫುಲಗಡ್ಡಿ ಗ್ರಾಮದ ಸರ್ಕಾರಿ ಪ್ರಾಥಮಿಕ ಶಾಲೆಯ ಆವರಣದಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಬೆಂಗಳೂರು,ಕನ್ನಡ ಜಾನಪದ ಪರಿಷತ್ತು,ಗೋಕಾಕ,ಶ್ರೀ ಮಹರ್ಷಿ ವಾಲ್ಮೀಕಿ ಸೇವಾ ಸಮಿತಿ ಮತ್ತು ಡಾ.ಬಿ.ಆರ್.ಅಂಬೇಡ್ಕರ ಯುವಕ ಸಂಘ,ಫುಲಗಡ್ಡಿ ಸಂಯುಕ್ತ ಆಶ್ರಯದಲ್ಲಿ ಏರ್ಪಡಿಸಿದ್ದ *69 ನೇ ಕನ್ನಡ ರಾಜ್ಯೋತ್ಸವ ಹಾಗೂ *ಜಾನಪದ ಸಮ್ಮೇಳನ ವಿಜ್ರಂಭಣೆಯಿಂದ ಜರುಗಿ-ತು.ಶ್ರೀಗುರು ಚಕ್ರವರ್ತಿ ಸದಾಶಿವ ಶಿವಯೋಗಿಯವರ ಆಶ್ರಮದಿಂದ ಭವ್ಯ ಮೆರವಣಿಗೆ ಆರಂಭವಾಯಿತು. ನಂತರದ ವೇದಿಕೆಯ ಕಾರ್ಯಕ್ರಮದಲ್ಲಿ ಶಿಂಗಳಾಪೂರದ ನಾಮದೇವ ಹರಿಜನ ಹಂತಿಪದ ಉದಗಟ್ಟಿಯ *ಹಣಮಂತ ಅಕ್ಕಿನವರ* ಲಾವಣಿಪದ

ಸಿರಿನಾಡು ಶಿಂಗಳಾಪುರ ಜಾನಪದ ಕಲಾ ಸಂಘ; ಸೋಬಾನಪದಫುಲಗಡ್ಡಿಯಶ್ರೀ ಸದಾಶಿವ



ಮುತ್ಯಾ ಕಲಾಬಾಲೆಯರು ವೇಷಭೂಷಣ ಫುಲಗಡ್ಡಿಯ ರೂಪಾ ಮಾದರ ಶಿಷ್ಯ ಬಳಗ ಫುಲಗಡ್ಡಿ ಜಾನಪದ ನೃತ್ಯ ತಳಕಟನಾಳದ ವಿಠಲ ಬಾಪುಕರಿ ಏಕಮಾತ್ರಾಭಿನಯ ಗೋಕಾಕದ ಈಶ್ವರಚಂದ್ರ ಬೆಟಗೇರಿ. ರೂಪಕ ಉದಗಟ್ಟಿಯ ಶ್ರೀ ಸಿದ್ಧಾರೂಢ ಭಜನಾ ಮಂಡಳ ಭಜನೆಪದ ಬೆಣಚಿನಮರಡಿಯ ರಾಮಪ್ಪ ಜೋಗನ್ನವರ ಡೊಳ್ಳಿನ ಪದ ಹಡಗಿನಹಾಳ ಶ್ರೀ ಮುತ್ತೇಶ್ವರ ದಟ್ಟಿಕುಣಿತ ಕಲಾಮೇಳ ದಟ್ಟಿಕುಣಿತಇನ್ನೂ ಅನೇಕ ಕಲಾ ತಂಡಗಳಿಂದ ವಿವಿಧ ಜಾನಪದ ಕಲಾ ಪ್ರದರ್ಶನ ಹಾಗೂ ಸನ್ಮಾನ ಸಮಾರಂಭ ಜರುಗಿತುವಿಚಾರ ಗೋಷ್ಠಿ ಹಳ್ಳಿಯ ಬಡ ಕಲಾವಿದರನ್ನು ಮುಖ್ಯ ವಾಹಿನಿಗೆ ತರುವ ಅಗತ್ಯವಿದೆ.ದೇಶೀಯ ಕಲೆ ಹಾಗೂ ಕಲಾವಿದರಿಗೆ ಪ್ರೋತ್ಸಾಹ ನೀಡುವಲ್ಲಿ ಶ್ರಮಿಸಿದ ಎಂದು ಹಿರಿಯ ಬರಹಗಾರರಾದ *ಬಾಲಶೇಖರ ಬಂದಿ* ಅಧ್ಯಕ್ಷತೆವಹಿಸಿ ಮಾತನಾಡಿದರು. ಉಪನ್ಯಾಸ ಜಾನಪದ ದೇಶೀಯ ಸಂಸ್ಕೃತಿ ಎಂಬ ವಿಷಯವನ್ನು ಕುರಿತಾಗಿ *ಡಾ. ಮಹಾದೇವ ಪೋತರಾಜ ಉಪನ್ಯಾಸ ನೀಡುತ್ತ ಜಾನಪದ ದೇಶೀಯತೆನ್ನು ಪ್ರತೀಪಾದಿಸುತ್ತದೆ.ಜನಪದ ಕಲಾವಿದರು ಕಲೆಯನ್ನು ದೇವರೆಂದು ಪೂಜಿಸುತ್ತಾರೆ ಹೇಳಿದರು.ಪ್ರಾಸ್ತಾವಿಕ ಮಾತು ಸರ್ಕಾರದ ಯೋಜನೆಗಳು ಗ್ರಾಮೀಣ ಭಾಗದ ಕಲಾವಿದರಿಗೆ ತಲುಪುವ ಉದ್ದೇಶದಿಂದ ಈ ಹಮ್ಮಿಕೊಳ್ಳಲಾಗಿದೆ, ಕಲಾವಿದರು ಇಲಾಖೆಯ ಪ್ರಯೋಜನಗಳನ್ನು ಪಡೆದುಕೊಂಡು ಕಲೆಯನ್ನು ಸಂರಕ್ಷಿಸ 'ಬೇಕೆಂದು ಪ್ರಾ.ಜಯಾನಂದ ಮಾದರ ಪ್ರಾಸ್ತಾವಿಕ ಮಾತನಾಡಿದರು.ಸಾನ್ನಿಧ್ಯ ಪೂಜ್ಯಶ್ರೀ ನಾರಾಯಣಶರಣರು ಅಂಬಾ ದರ್ಶನಪೀಠ ವಡೇರಹಟ್ಟಿ,

\ವೇದಿಕೆ ಮೇಲೆ ಹಿರಿಯಸಾಹಿತಿ ಲಕ್ಷ್ಮಣ ಚೌರಿ.ಸಾಹಿತಿ ವಿದ್ಯಾ ರೆಡ್ಡಿ,ವಕೀಲರಾದ ಬಲದೇವ ಸಣ್ಣಕ್ಕಿ. ಗ್ರಾ.ಪಂ ಸದಸ್ಯರಾದ ಅಶೋಕ ಹುಚರಡ್ಡಿ,ಯಮನಪ್ಪ ಸಣ್ಣಕ್ಕಿ,ಬಾಜನವರ ಶಿಕ್ಷಕರಾದ ಎಸ್.ಎಮ್.ನಾಯಿಕ,ಗೌಡಪ್ಪ ಗೌಡರ,ಇದ್ದರುಸ್ವಾಗತ ನುಡಿ ಡಾ.ಉದ್ದಣ್ಣ ಗೋಡೇರ ನಿರೂಪಣೆ ಆನಂದ ಸೋರಗಾವಿ.

# 11ರಂದು ವೀರವನಿತೆ ಒನಕೆ ಓಬವ್ವ ಜಯಂತಿ

**ಧಾರವಾಡ:** ಜಿಲ್ಲಾಡಳಿತ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಂಂ-ಯುಕ್ತ ಆಶ್ರಯದಲ್ಲಿ ವೀರವನಿತೆ ಒನಕೆ ಓಬವ್ವ ಜಯಂತಿಯನ್ನು ನವೆಂಬರ 11 ರಂದು ಬೆಳಿಗ್ಗೆ 11 ಗಂಟೆಗೆ ಕರ್ನಾಟಕ ಕುಲಪುರೋಹಿತ ಆಲೂರು ವೆಂಕಟ-ರಾವ ಸಾಂಸ್ಕೃತಿಕ ಭವನದಲ್ಲಿ ಆಯೋಜಿಸಲಾಗಿದೆ.

ಕೇಂದ್ರ ಗ್ರಾಹಕರ ವ್ಯವಹಾರಗಳ, ಆಹಾರ ಮತ್ತು ಸಾರ್ವಜನಿಕ ವಿತರಣೆ ಮತ್ತು ಹೊಸ ಹಾಗೂ ನವೀಕರಿಸಬಹುದಾದ ಇಂಧನ ಸಚಿವ ಪ್ರಲ್ಹಾದ ಜೋಶಿ ಹಾಗೂ ವಿಧಾನ ಪರಿಷತ್ತಿನ ಸಭಾಪತಿ ಬಸವರಾಜ ಹೊರಟ್ಟಿ ಅವರು ಕಾರ್ಯಕ್ರಮದಲ್ಲಿ ಘನ ಉಪಸ್ಥಿತಿ ವಹಿಸುವರು.

ಕಾರ್ಮಿಕ ಸಚಿವ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಸಂತೋಷ ಎಸ್. ಲಾಡ್ ಅವರು ಕಾರ್ಯಕ್ರಮವನ್ನು ಉದ್ಘಾಟಿಸುವರು.

ಕರ್ನಾಟಕ ವಿಧಾನ ಪರಿಷತ್ ಸರ್ಕಾರಿ ಮುಖ್ಯ ಸಚೇತಕ ಸಲೀಂ ಅಹ್ಮದ, ಶಾಸಕರು ಹಾಗೂ ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳ ಚರಂಡಿ ಮಂಡಳಿಯ ಅಧ್ಯಕ್ಷ ವಿನಯ ಕುಲಕರ್ಣಿ, ಶಾಸಕ ಹಾಗೂ ಕರ್ನಾಟಕ ಕೊಳಚೆ ಅಭಿವೃದ್ಧಿ ಮಂಡಳಿ ಅಧ್ಯಕ್ಷ ಅಬ್ಬಯ್ಯ ಪ್ರಸಾದ, ಶಾಸಕ ಹಾಗೂ ವಾಯವ್ಯ ಸಾರಿಗೆ ನಿಗಮದ ಅಧ್ಯಕ್ಷ ಭರಮಗೌಡ ಅಲಗೌಡ ಕಾಗೆ, ಶಾಸಕರು ಹಾಗೂ ಕರ್ನಾಟಕ ಕೈಮಗ್ಗ ಅಭಿವೃದ್ಧಿ ನಿಗಮದ ಅಧ್ಯಕ್ಷರಾದ ಜೆ.ಎನ್.ಗಣೇಶ ಅವರು ವಿಶೇಷ ಅತಿಥಿಗಳಾಗಿ ಭಾಗವಹಿಸುವರು.

ಶಾಸಕರಾದ ಅರವಿಂದ ಚಂದ್ರಕಾಂತ ಬೆಲ್ಲದ ಕಾರ್ಯಕ್ರಮದ ಅಧ್ಯಕ್ಷತೆ ವಹಿಸುವರು.

ಮುಖ್ಯ ಅತಿಥಿಗಳಾಗಿ ಶಾಸಕರಾದ ಎನ್.ಎಚ್ ಕೋನರಡ್ಡಿ, ಎಸ್.ವ್ಹಿ.ಸಂಕನೂರ, ಪ್ರದೀಪ ಶೆಟ್ಟರ, ಮಹೇಶ ಟೆಂಗಿನಕಾಯಿ, ಎಂ.ಆರ್.ಪಾಟೀಲ್, ಕರ್ನಾಟಕ ಬಾಲವಿಕಾಸ ಅಕಾಡೆಮಿಯ ಅಧ್ಯಕ್ಷ ಸಂಗಮೇಶ ಅಪ್ಪಾಸಿ ಬಬಲೇಶ್ವರ, ಹುಬ್ಬಳ್ಳಿ-ಧಾರವಾಡ ಮಹಾನಗರ ಪಾಲಿಕೆಯ ಮಹಾಪೌರರಾದ ರಾಮಪ್ಪ ಕೃಷ್ಣಪ್ಪ ಬಡಿಗೇರ, ಹುಬ್ಬಳ್ಳಿ ಧಾರವಾಡ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಶಾಕಿರ್ ಸನದಿ ಅವರು ಭಾಗವಹಿಸುವರು.

ಕರ್ನಾಟಕ ವಿಶ್ವವಿದ್ಯಾಲಯದ ಪ್ರಾಚೀನ ಭಾರತೀಯ ಇತಿಹಾಸ ಮತ್ತು ಶಾಸನಶಾಸ್ತ್ರ ವಿಭಾಗದ ಪ್ರಾಧ್ಯಾಪಕ ಡಾ. ಎಸ್.ಜಿ. ಛಲವಾದಿ ಅವರು ಕಾರ್ಯಕ್ರಮದಲ್ಲಿ ವಿಶೇಷ ಉಪನ್ಯಾಸವನ್ನು ನೀಡುವರು.

ಸಮಾಜದ ಮುಖಂಡರಾದ ಯಲ್ಲಪ್ಪ ಮಂಟೂರು, ದೇವಾನಂದ ರತ್ನಾಕರ, ರವಿ ಸಾಂಬ್ರಾಣಿ, ಇಂದುವತಿ ಶಿರಗಾಂವಿ, ಪ್ರಕಾಶ ಮಲ್ಲಿಗವಾಡ ಅವರು ಕಾರ್ಯಕ್ರಮದಲ್ಲಿ ಉಪಸ್ಥಿತರಿರುವರು.

ಕಾರ್ಯಕ್ರಮದಲ್ಲಿ ಜಿಲ್ಲಾಧಿಕಾರಿ ದಿವ್ಯ ಪ್ರಭು, ಹುಬ್ಬಳ್ಳಿ ಧಾರವಾಡ ಮಹಾನಗರ ಪೊಲೀಸ್ ಆಯುಕ್ತ ಎನ್.ಶಶಿಕುಮಾರ, ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಸ್ವರೂಪ ಟಿ.ಕೆ., ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ಗೋಪಾಲ ಎಂ.ಬ್ಯಾಕೋಡ, ಹುಬ್ಬಳ್ಳಿ-ಧಾರವಾಡ ಮಹಾನಗರ ಪಾಲಿಕೆ ಆಯುಕ್ತ ಡಾ. ಈಶ್ವರ ಉಳ್ಳಾಗಡ್ಡಿ ಅವರು ಭಾಗವಹಿಸುವರೆಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಪ್ರಕಟಣೆಯಲ್ಲಿ ತಿಳಿಸಿದೆ.

# ಪದ್ಮಾವತಿ ಭಕ್ತ ನಿವಾಸಕ್ಕೆ ಅಡಿಗಲ್ಲು

## ವರ್ಷದಲ್ಲಿ ಪೂರ್ಣ - ಜಿನಸೇನ ಭಟ್ಟಾರಕ ಪಟ್ಟಾಚಾರ್ಯರು

**ಮೋಳೆ;–** ಯಾವುದೇ ಸೌಲಭ್ಯ ಪಡೆಯದೇ.ಕೇವಕ ಭಕ್ತಾಧಿಗಳಿಂದ ನಿರ್ಮಾಣವಾಗುತ್ತಿರುವ ಭಕ್ತರ ಆರಾಧ್ಯದೇವಿ ಪದ್ಮಾವತಿ ಸನ್ನಿಧಾನದಲ್ಲಿ ಭಕ್ತರ ಅನುಕೂಲಕ್ಕಾಗಿ ನಿರ್ಮಾಣಗೊಳ್ಳುತ್ತಿರುವ ಯಾತ್ರಿ ನಿವಾಸವು ಯಾತ್ರಿ ನಿವಾಸವಾಗದೇ ಅದು ಭಕ್ತ ನಿವಾಸವಾಗಲಿ. ಪದ್ಮಾವತಿ ಯಾತ್ರಿ ನಿವಾಸವೆಂಬ ಹೆಸರನ್ನು ಪದ್ಮಾವತಿ ಭಕ್ತ ನಿವಾಸವೆಂದು ಬದಲಿಸಿ ಎಂದು ನಾಂದಣಿ ಜೈನ ಮಠದ ಜಿನಸೇನ ಭಟ್ಟಾರಕ ಪಟ್ಟಾಚಾರ್ಯರು ತಿಳಿಸಿದ್ದಾರೆ.

ಅವರು, ಶುಕ್ರವಾರ ದಿ. 08 ರಂದು ಕಾಗವಾಡ ತಾಲೂಕಿನ ಉಗಾರ ಬುದ್ರುಕ್ ಗ್ರಾಮದ ಪದ್ಮಾವತಿ ಮಂದಿರ ಟ್ರಸ್ಟ್ ವತಿಯಿಂದ ನಿರ್ಮಿಸಲಾಗುತ್ತಿರುವ ಯಾತ್ರಿ ನಿವಾಸದ ಕಟ್ಟಡಕ್ಕೆ ಭೂಮಿ ಪೂಜೆ ನೆರವೇರಿಸಿ, ನಂತರ ನಡೆದ ಸಮಾರಂಭದಲ್ಲಿ ಮಾತನಾಡುತ್ತಿದ್ದರು.ಭಕ್ತ–ರಿಗೆ ಅನುಕೂಲವಾಗುವ ನಿಟ್ಟಿನಲ್ಲಿ ಉಗಾರ ಶ್ರೀ ಪದ್ಮಾವತಿ ಮಂದಿರದ ಧರ್ಮಾಧಿಕಾರಿ



ಶೀತಲಗೌಡ ಪಾಟೀಲ ಅವರ ಕಾರ್ಯ ನಿಜಕ್ಕೂ ಶ್ಲಾಘನೀಯವಾಗಿದೆ ಎಂದರು. ಮೊದಲಿಗೆ ಪದ್ಮಾವತಿ ಮಂದಿರದ ಪಕ್ಕದಲ್ಲಿರುವ ಜಾಗದಲ್ಲಿ ಯಾತ್ರಿ ನಿವಾಸದ ಸ್ಥಳದಲ್ಲಿ ಭೂಮಿ ಪೂಜೆಯು ಪಂಡಿತರ ವಿಧಿವತ್ತಾದ ಮಂತ್ರಪಠಣದೊಂದಿಗೆ ನೆರವೇರಿತು. ಬಳಿಕ ನಡೆದ ಕಾರ್ಯಕ್ರಮದಲ್ಲಿ ಜಿನಸೇನ ಭಟ್ಟಾರಕ ಪಟ್ಟಾಚಾರ್ಯರರನ್ನು ಸನ್ಮಾನಿಸಿ, ಗೌರವಿಸಲಾಯಿತು. ನಂತರ ಯಾತ್ರಿ ನಿವಾಸ ನಿರ್ಮಾಣಕ್ಕೆ ದಾನ ಮಾಡಿದ ದಾನಿಗಳಿಗೆ ಮತ್ತು ಸಾಹಿತಿ ಹಾಗೂ ರಾಜ್ಯ ಮಟ್ಟದ ರಾಜ್ಯೋತ್ಸವ ಪ್ರಶಸ್ತಿ ವಿಜೇತರರಾದ ಬಾಳಾಸಾಹೇಬ ಲೋಕಾಪೂರ,ಜಿಲ್ಲಾ ರಾಜಚಯೋತ್ಸವ ಪ್ರಶಸ್ತಿ ಪಡೆದ ಪತ್ರಕರ್ತ ಸಿದ್ದಯ್ಯ ಹಿರೇಮಠ ಅವರಿಗೆ ಅವರನ್ನು ಸನ್ಮಾನಿಸಿ, ಗೌರವಿಸಲಾಯಿತು.

ಜೊತೆಗೆ ಅನೇಕ ಗಣ್ಯರನ್ನು ಸಹ ಸನ್ಮಾನಿಸಲಾಯಿತು. ಈ ಸಮಯದಲ್ಲಿ ಡಾ. ಪದ್ಮಜೀತ ನಾಡಗೌಡಾ, ಸಾಹಿತಿ ಬಾಳಾಸಾಹೇಬ ಲೋಕಾಪೂರ ತಮ್ಮ ಅನಿಸಿಕೆ ಹಂಚಿಕೊಂಡರು. ಮಂದಿರದ ಧರ್ಮಾಧಿಕಾರಿ ಶೀತಲಗೌಡ ಪಾಟೀಲ ಪ್ರಾಸ್ತಾವಿಕವಾಗಿ ಮಾತನಾಡಿದರು.

ಈ ಸಮಯದಲ್ಲಿ ಶೀತಲಗೌಡ ಪಾಟೀಲ, ಬಾಳಾಸಾಹೇಬ ಲೋಕಾಪೂರ, ಡಾ. ಪದ್ಮಜೀತ ನಾಡಗೌಡ, ಸಿದ್ದಯ್ಯ ಹಿರೇಮಠ, ಯಾತ್ರು ನಿವಾಸ ನಿರ್ಮಾಣಕ್ಕಾಗಿ 5 ಲಕ್ಷ ರೂ ದೇಣಿಗೆ ನೀಡಿರುವ ಖ್ಯಾತ ನ್ಯಾಯವಾದಿ ಕಲ್ಲಪ್ಪಾ ವನಜೋಳ,ದಂಪತಿಯನ್ನು. ಸುಭಾಷ ನಾಡಗೌಡ, ಶೀತಲ ಚೌಗುಲಾ, ಪ್ರಭಾವತಿ ಚೌಗುಲಾ, ಅಜೀತ ಶೆಟ್ಟಿ, ಸವಿತಾ ಪಾಟೀಲ, ರಾಜಶ್ರೀ ವನಜೋಳ, ದಾದಾಸಾಬ ಪಾಟೀಲ–ಪಾಂಗಿರೆ, ವೃಷಭ ಪಾಟೀಲ, ಆದೇಶ ವಸವಾಡೆ, ಅಲ್ಕಾ ನಾಡಗೌಡ, ಮಹಾವೀರ ಕಾತ್ರಾಳೆ, ಅಣ್ಣಾಗೌಡ ಪಾಟೀಲರನ್ನು ಸ್ಮಾನಿಸಲಾಯಿತು.ಈ ವೇಳೆ ಜೈನ ಸಮಾಜದ ಶ್ರಾವಕ–ಶ್ರಾವಕಿ ಯರು ಉಪಸ್ಥಿತರಿದ್ದರು.

# ಗ್ರಾಪಂ ಕಟ್ಟಡ ಕಾಮಗಾರಿಗೆ ಮೇಲ್ಮನೆ ಸದಸ್ಯ ಚನ್ನರಾಜ ಹಟ್ಟಿಹೊಳಿ ಪೂಜೆ



**ಬೆಳಗಾವಿ :** ಬೆಳಗಾವಿ ಗ್ರಾಮೀಣ ಕ್ಷೇತ್ರದ ಬಿಜಗರಣಿ ಗ್ರಾಮದ ನೂತನ ಗ್ರಾಮ ಪಂಚಾಯತ್ ಕಟ್ಟಡದ ಮೇಲ್ಛಾವಣಿಯ (ಸ್ಲ್ಯಾಬ್) ಕಾಂಕ್ರೀಟ್ ಹಾಕುವ ಕಾಮಗಾರಿಗಳಿಗೆ ವಿಧಾನ ಪರಿಷತ್ ಸದಸ್ಯ ಚನ್ನರಾಜ ಹಟ್ಟಿಹೊಳಿ ಶುಕ್ರವಾರ ಪೂಜೆ ನೆರವೇರಿಸಿ, ಚಾಲನೆ ನೀಡಿದರು.

ಕಳೆದ 5– 6 ವರ್ಷಗಳಿಂದ ಬೆಳಗಾವಿ ಗ್ರಾಮೀಣ ಕ್ಷೇತ್ರ ಸಾಕಷ್ಟು ಅಭಿವೃದ್ಧಿ ಕಂಡಿದ್ದು, ಮಾದರಿ ಕ್ಷೇತ್ರವಾಗುವತ್ತ ಸಾಗಿದೆ.

ಈ ಭಾಗದ ಶಾಸಕಿ, ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಅವರು ಕ್ಷೇತ್ರದ ಸರ್ವತೋಮುಖದ ಅಭಿವೃದ್ಧಿಗಾಗಿ ಹಗಲಿರುಳು ಶ್ರಮಿಸುತ್ತಿದ್ದಾರೆ. ಕ್ಷೇತ್ರದ ಎಲ್ಲ ಗ್ರಾಮಗಳಿಗೆ ಭೇಟಿ ಕೊಟ್ಟು ಜನರ ಕುಂದು ಕೊರತೆಗಳನ್ನು ಆಲಿಸುತ್ತಿದ್ದಾರೆ. ಇಲಾಖೆಯ ಕೆಲಸಗಳ ಒತ್ತಡದ ನಡುವೆಯೂ ಬೆಳಗಾವಿಯಲ್ಲಿ ಜನತಾದರ್ಶನ ನಡೆಸುವ ಮೂಲಕ ಜನರ ಕಷ್ಟ ಸುಖಗಳ ಬಗ್ಗೆ ಗಮನ ಹರಿಸುತ್ತಿದ್ದಾರೆ. ಬರುವ ದಿನಗಳಲ್ಲಿ ಮತ್ತಷ್ಟು ಅಭಿವೃದ್ಧಿ ಕಾರ್ಯಗಳನ್ನು ಗ್ರಾಮೀಣ ಕ್ಷೇತ್ರಕ್ಕೆ ಒದಗಿಸಲಿದ್ದೇವೆ ಎಂದು ಚನ್ನರಾಜ ಹಟ್ಟಿಹೊಳಿ ಹೇಳಿದರು.

ಈ ವೇಳೆ ಗ್ರಾಮದ ಹಿರಿಯರು, ಮನೋಹರ್ ಬೆಳಗಾಂವ್ಕರ್, ಯಲ್ಲಪ್ಪ ಬೆಳಗಾಂವ್ಕರ್, ನಾಮದೇವ್ ಮೋರೆ, ಸಂದೀಪ್ ಅಷ್ಠೇಕರ್, ಸಂತೋಷ ಕಾಂಬಳೆ, ಬಬ್ಲು ನಾವಗೇಕರ್, ಮಹೇಶ ಪಾಟೀಲ, ಪುಂಡಲೀಕ ಜಾಧವ್, ಮಾರುತಿ ಜಾಧವ್, ಪರಶುರಾಮ ಬಾಸವಾಳ, ಪರಶುರಾಮ ಪಾಟೀಲ, ಅಶೋಕ ಕಾಂಬಳೆ, ಮಹಾದೇವಿ ಬಾಸವಾಳ, ಪುಂಡಲೀಕ ಕೆ, ಪ್ರಭಾಕರ್ ಜಾಧವ್, ಮೋನಪ್ಪ ಯಳ್ಳೂರಕರ್, ಬಾಪು ಸುತಾರ ಇತರರು ಉಪಸ್ಥಿತರಿದ್ದರು.

# ಹರ್ಷ ಶುಗರ್ಸ್ ಕಬ್ಬು ನುರಿಸುವ ಹಂಗಾಮಿಗೆ ಚಾಲನೆ



**ಸವದತ್ತಿ :** ಸವದತ್ತಿಯ ಹರ್ಷ ಸಕ್ಕರೆ ಕಾರ್ಖಾನೆಯ 2024–2025 ನೇ ಸಾಲಿನ ಕಬ್ಬು ನುರಿಸುವ ಹಂಗಾಮಿಗೆ ಹಾಗೂ ಬಾಯ್ಲರ್ ಪ್ರದೀಪನ ಸಮಾರಂಭಕ್ಕೆ ಹೂಲಿ ಸಾಂಬಯ್ಯನವರ ಮಠದ ಶ್ರೀ ಉಮೇಶ್ವರ ಶಿವಾಚಾರ್ಯ ಸ್ವಾಮೀಜಿ ಶುಕ್ರವಾರ ಚಾಲನೆ ನೀಡಿದರು. ಕಾರ್ಖಾನೆಯ ವ್ಯವಸ್ಥಾಪಕ ನಿರ್ದೇಶಕ, ವಿಧಾನ ಪರಿಷತ್ ಸದಸ್ಯ ಚನ್ನರಾಜ ಹಟ್ಟಿಹೊಳಿ ಅಧ್ಯಕ್ಷತೆಯಲ್ಲಿ ನಡೆದ ಕಾರ್ಯಕ್ರಮದಲ್ಲಿ 2023–2024 ನೇ ಸಾಲಿನ ಹಂಗಾಮಿನಲ್ಲಿ ಕಾರ್ಖಾನೆಗೆ ಅತೀ ಹೆಚ್ಚು ಕಬ್ಬು ಪೂರೈಕೆ ಮಾಡಿದ 11 ಜನ ಪ್ರಗತಿಪರ ರೈತರನ್ನು ಸನ್ಮಾನಿಸಲಾಯಿತು.

ಕಾರ್ಖಾನೆ ರೈತರ ಸಹಕಾರದಿಂದ ಉತ್ತಮವಾಗಿ ನಡೆಯುತ್ತಿದ್ದು, ಈ ವರ್ಷ ಕೂಡ ಅತೀ ಹೆಚ್ಚು ಕಬ್ಬು ನುರಿಸುವ ವಿಶ್ವಾಸವಿದೆ. ಸಹಕಾರ ನೀಡುತ್ತಿರುವ ಎಲ್ಲ–ರಿಗೂ ಹಂಗಾಮು ಆರಂಭದ ಸಂದರ್ಭದಲ್ಲಿ ಗೌರವಪೂರ್ವಕ ಕೃತಜ್ಞತೆಯನ್ನು ಸಲ್ಲಿಸುತ್ತೇವೆ ಎಂದು ಕಾರ್ಖಾನೆಯ ಅಧ್ಯಕ್ಷೆ ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಈ ಸಂದರ್ಭದಲ್ಲಿ ಸಂದೇಶ ಕಳಿಸಿದ್ದಾರೆ.

ಈ ಸಂದರ್ಭದಲ್ಲಿ ಗಿರಿಜಾ ಹಟ್ಟಿಹೊಳಿ, ಭಾರತಿ ಕಲ್ಲೂರ್, ಬಾಬಣ್ಣ ಕಲ್ಲೂರ್, ಕಾರ್ಖಾನೆಯ ಪ್ರಧಾನ ವ್ಯವಸ್ಥಾಪಕ ಸದಾಶಿವ್ ತೋರಾಥ್, ಕಬ್ಬು ವಿಭಾಗದ ಪ್ರಧಾನ ವ್ಯವಸ್ಥಾಪಕ ಎನ್. ಎಮ್. ಪಾಟೀಲ, ಎಥೆನಾಲ್ ಘಟಕದ ವ್ಯವಸ್ಥಾಪಕ ಸಾಂಬ್ರೇಕರ್, ಕಾರ್ಖಾನೆಯ ಮುಖ್ಯ ಆಡಳಿತಾಧಿಕಾರಿ ಚೌಕಿಮಠ್, ಕಾರ್ಖಾನೆಯ ಎಲ್ಲ ವಿಭಾಗದ ಸಿಬ್ಬಂದಿ, ಬೈಲಹೊಂಗಲ, ಸವದತ್ತಿ, ಕಿತ್ತೂರು ಹಾಗೂ ಧಾರವಾಡ ಭಾಗದ ರೈತ ಮುಖಂಡರು ಉಪಸ್ಥಿತರಿದ್ದರು.


### ಕಾರ್ಯಕರ್ತರಿಂದ ಪಕ್ಷ ಉನ್ನತ ಮಟ್ಟಕ್ಕೆ : ಮುರುಗೇಶ್ ನಿರಾಣಿ

ಬೆಳಗಾವಿ. ದೇಶದ ಪ್ರಗತಿಗೋಸ್ಕರ ಮುನ್ನಡೆಯುತ್ತಿರುವ ಭಾರತೀಯ ಜನತಾ ಪಾರ್ಟಿ ಪಕ್ಷಕ್ಕೆ ಕಾರ್ಯಕರ್ತರೇ ಜೀವಾಳ ಎಂದು ಮಾಜಿ ಸಚಿವ ಮುರಗೇಶ ನಿರಾಣಿ ಹೇಳಿದರು.

ಅವರು ನಗರದ ಧರ್ಮನಾಥ ಭವನ ಹತ್ತಿರವಿರುವ ಭಾರತೀಯ ಜನತಾ ಪಾರ್ಟಿ ಬೆಳಗಾವಿ ಗ್ರಾಮಂತರ ಜಿಲ್ಲೆ ಕಾರ್ಯಾಲಯದಲ್ಲಿ ಆಯೋಜಿಸಲಾಗಿದ್ದ ಪದಾಧಿಕಾರಿಗಳ ಸಭೆಯನ್ನು ಉದ್ದೇಶಿಸಿ ಮಾತನಾಡಿ ಕಾಂಗ್ರೆಸ್ ಸರ್ಕಾರದ ವಿರುದ್ಧ ವಾಗ್ದಾಳಿ ನಡೆಸಿ ರಾಜ್ಯದ ಮುಖ್ಯಮಂತ್ರಿ ಹಾಗೂ ಸಚಿವರು ಅಭಿವೃದ್ಧಿ ಮರೆತು ಭ್ರಷ್ಟಾಚಾರ,ಹಣ ಲೂಟಿ ಹೊಡೆಯುವುದರಲ್ಲಿ ನಿರತರಾಗಿದ್ದಾರೆ ಇಂತವರಿಂದ ರಾಜ್ಯದ ಅಭಿವೃದ್ಧಿ ಕನಸಿನ ಮಾತಾಗಿದೆ ಎಂದು ಹೇಳಿದರು.

ಭಾ.ಜ.ಪಾ ಜಿಲ್ಲಾಧ್ಯಕ್ಷ ಸುಭಾಷ ಪಾಟೀಲ ಮಾತನಾಡಿ ಪಕ್ಷದ ಮುಂಬರುವ ಕಾರ್ಯಚಟುವಟಿಕೆಗಳ ಕುರಿತು ಮಾಹಿತಿ ನೀಡಿ ಮಾತನಾಡಿ ಎಲ್ಲ ಕಾರ್ಯಕರ್ತರು ರಾಜ್ಯ ಭೃಷ್ಟ ಕಾಂಗ್ರೆಸ್ ಸರ್ಕಾರದ ಹಗರಣಗಳ ಮತ್ತು ದುರಾಡಳಿತ ವಿರುದ್ಧ ಹೋರಾಡಲು ಸನ್ನದ್ಧರಾಗಿ ಎಂದು ಕರೆ ನೀಡಿದರು. ಈ ಸಂದರ್ಭದಲ್ಲಿ ಚಿಕ್ಕೋಡಿ ಜಿಲ್ಲಾಧ್ಯಕ್ಷರಾದ ಸತೀಶ್ ಅಪ್ಪಾ–ಜಿಗೋಳ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಮಲ್ಲಿಕಾರ್ಜುನ ಮಾದಮ್ಮನವರ, ಜಿಲ್ಲಾ ಮಾಧ್ಯಮ ಪ್ರಮುಖ ಸಚಿನ್ ಕಡಿ, ರಾಜ್ಯ ಸಾಮಾಜಿಕ ಜಾಲತಾಣ ಸದಸ್ಯ ನಿತಿನ್ ಚೌಗಲೆ, ಮುರುಗೇಂದ್ರಗೌಡ ಪಾಟೀಲ, ಜಿಲ್ಲಾ ಕೋಶಾಧ್ಯಕ್ಷ ಸಂತೋಷ ದೇಶನೂರ, ಜಿಲ್ಲಾ ಎಸ್.ಸಿ ಮೋರ್ಚಾ ಅಧ್ಯಕ್ಷ ಯಲ್ಲೇಶ ಕೊಲಕಾರ, ಜಿಲ್ಲಾ ಮಾಧ್ಯಮ ಸಹ ಪ್ರಮುಖ ಬಾಳೇಶ ಚವ್ವನ್ನವರ, ಯುವ ಮೋರ್ಚಾ ಜಿಲ್ಲಾಧ್ಯಕ್ಷ ಮಹಾಂತೇಶ ಚಿನ್ನಪ್ಪಗೌಡ್ರ, ಈರಣ್ಣ ವಾರದ,ಸುನಿಲ ಮರಕುಂಬಿ, ಪ್ರಶಾಂತ ಅಮ್ಮಿನಭಾವಿ,ಮನೋಜ ಪಾಟೀಲ, ಬಸವರಾಜ ನೇಸರಗಿ, ವಿಠ್ಠಲ ಸಾಯಣ್ಣವರ, ವೀರಭದ್ರ ಪೂಜಾರಿ ಹಾಗೂ ಪದಾಧಿಕಾರಿಗಳು ಮತ್ತು ಕಾರ್ಯಕರ್ತರು ಉಪಸ್ಥಿತರಿದ್ದರು.

### ವಕ್ಫ್ ಕಾಯ್ದೆ ರದ್ದಾಗಲಿ ಸರಕಾರಕ್ಕೆ ಆಗ್ರಹ : ಹೇಮರಡ್ಡಿ ಮೇಟಿ



ಮುದ್ದೇಬಿಹಾಳ: ತಾಲೂಕಿನ ಬಡ ರೈತರ ಪಹಣಿಯಲ್ಲಿ ವಕ್ಫ್ ಬೋರ್ಡ್ ಅಧಿಕಾರ ಸಾಧಿ ಸಿರುವುದು ವಿಷಾದನೀಯ, ಕೂಡಲೇ ರೈತ ವಿರೋಧಿ ವಿದೆಯೇಖವನ್ನು ತಕ್ಷಣ ಜಾರಿಗೆ ಬರುವಂತೆ ತಗೆದುಹಾಕಬೇಕು ಎಂದು ಬಸರಕೋಡ ಜಿಲ್ಲಾ ಪಂಚಾಯತ ಮಾಜಿ ಸದಸ್ಯ ಹೇಮರಡ್ಡಿ ಮೇಟಿ ಅವರು ಸರಕಾರಕ್ಕೆ ಅಗ್ರಹಿಸಿದ್ದಾರೆ,

ಓಲೈಕೆ ರಾಜಕಾರಣ ಮಾಡುವ ಕಾಂಗ್ರೆಸ್ ಪಕ್ಷ ಮತ್ತು ಅದರ ನಾಯಕರು 1955 ರಲ್ಲಿ ಸಂವಿಧಾನ ಬಾಹಿರವಾಗಿ ನೆಹರು ಸರಕಾರದಲ್ಲಿ ಈ ಕಾಯ್ದೆ ಜಾರಿಗೆ ತಂದರು, ಮೂಲ ಸಂವಿಧಾನದಲ್ಲಿ ಡಾ, ಬಾಬಾಸಾಹೇಬ್ ಅಂಬೇಡ್ಕರ್ ಅವರು ವಕ್ಫ್ ಹೆಸರೇ ಬಳಸಿರಲಿಲ್ಲ ಆದ–'ರೆ ಅಲ್ಪಸಂಖ್ಯಾತರ ಓಲೈಕೆ ಮಾಡಲುವ ಕುತಂತ್ರಿ ಕಾಂಗ್ರೆಸ್ ಸರ್ಕಾರ ಕಾಯ್ದೆ ಜಾರಿ ಮಾಡಿ ಸಂವಿಧಾನಕ್ಕೆ ಅಪಚಾರ ಮಾಡಿತು, ಇದಕ್ಕೆ ಪುಷ್ಠಿ ನೀಡುವಂತೆ 2013 ರಲ್ಲಿ ಅಂದಿನ ಪ್ರಧಾನಿ ಮನಮೋಹನ್ ಸಿಂಗ್ ವಕ್ಫ್ ಬೋರ್ಡಿಗೆ ವಿಶೇಷ ಅಧಿಕಾರ ನೀಡಿತು, ಹೀಗಾಗಿ ದೇಶದ ಬಹುಪಾಲು ಭೂಮಿಯನ್ನು ವಕ್ಫ್ ಆವರಿಸಿದೆ, ಈಗ ಇದು ನಮ್ಮ ಕರ್ನಾಟಕದಲ್ಲಿ ಕೂಡ ಅಧಿಕಾರ ಸಾಧಿಸುತ್ತಿದೆ, ವಿಜಯಪುರ ಜಿಲ್ಲೆಯದ್ಯಂತ ಸಾವಿರಾರು ರೈತರು ತಮ್ಮ ಪೂರ್ವಿಕರು ಸಂಪಾದಿಸಿದ ಭೂಮಿ ಕಳೆದುಕೊಳ್ಳುವ ಭಯದಲ್ಲಿ ಇದ್ದಾರೆ, ಈ ಪ್ರಕಾರಣವನ್ನು ಗಂಭೀರವಾಗಿ ಪರಿಗಣಿಸಿ ಕೇಂದ್ರ ಸರ್ಕಾರ ಮದ್ಯ ಪ್ರವೇಶ ಮಾಡಿ ಕರ್ನಾಟಕದ ರೈತರ ನೆರವಿಗೆ ನಿಲ್ಲಬೇಕು ಎಂದು ಅಗ್ರಹಿಸಿದರು.

ಅಲ್ಪಸಂಕಾಯತರ ತುಸ್ಟಿಕಾರಣ ಮಾಡುವುದು ಬಿಟ್ಟು ರಾಜ್ಯ ಸರ್ಕಾರ ಶೀಘ್ರದಲ್ಲಿ ರೈತರ ಪಹಣಿಯಲ್ಲಿ ದಾಖಲಾಗಿ–ರಿವ ವಕ್ಫ್ ಹೆಸರನ್ನು ಕಡಿಮೆ ಮಾಡಬೇಕು ಮತ್ತು ಸರ್ಕಾರಿ ದಾಖಲೆಗಳನ್ನು ಏತವತ್ತಾಗಿ ರೈತರ ಹೆಸರಿನಲ್ಲಿ ಭೂಮಿ ಇರುವಂತೆ ನೋಡಿಕೊಳ್ಳಬೇಕು ಎಂದು ಎಚ್ಚರಿಸಿದರು, ಇದೆ ರೀತಿ ರಾಜ್ಯ ಸರ್ಕಾರ ತನ್ನ ತುಸ್ಟಿಕರಣ ನೀತಿ ಮುಂದುವರಿಸಿದರೆ ವಿಜಯಪುರದ ಸಮಸ್ತ ರೈತರ ನಿಯೋಗ ಉಗ್ರ ಹೋರಾಟ ಮಾಡಲಾಗುವುದು ಎಂದು ಸರಕಾರಕ್ಕೆ ಎಚ್ಚರಿಸಿದರು.



**ಬಾಗಲಕೋಟೆ: : ಭಾರತ ಸ್ಕೌಟ್ಸ್ ಮತ್ತು ಗೈಡ್ಸ್ ವತಿಯಿಂದ ಸಂಸ್ಥಾಪನಾ ದಿನಾಚರಣೆ ಅಮೃತ ಮಹೋತ್ಸವ ಅಂಗವಾಗಿ ಜಿಲ್ಲಾಧಿಕಾರಿ ಜಾನಕಿ ಕೆ.ಎಂ ಅವರು ಧ್ವಜ ಚೀಟಿಗಳನ್ನು ಬಿಡುಗಡೆ ಮಾಡಿದರು. ಶಾಲಾ ಶಿಕ್ಷಣ ಇಲಾಖೆಯ (ಅಭಿವೃದ್ಧಿ) ಉಪನಿರ್ದೇಶಕ ಬಿ.ಕೆ.ನಂದನೂರು, ಭಾರತ ಸ್ಕೌಟ್ಸ್ ಮತ್ತು ಗೈಡ್ಸ್‌ನ ಜಿಲ್ಲಾ ಕಾರ್ಯದರ್ಶಿ ಎಸ್.ಎಸ್.ದಳವಾಯಿ, ಜಿಲ್ಲಾ ತರಬೇತಿ ಆಯುಕ್ತ ಪಿ.ಎಸ್.ಬದ್ನೂರ, ಸಂಘಟಕ ಪ್ರಮೋದ ಚೌಗುಲೆ, ತಾಲೂಕಾ ಕಾರ್ಯದರ್ಶಿ ಎನವ.ಬಿ.ಗೌಡರ, ಉಮಾದೇವಿ ಮತ್ತು ರೇಂಜರ್ಸ ವಿದ್ಯಾರ್ಥಿಗಳು ಇದ್ದರೆ**

# ಸ್ಕೌಟ್ಸ್ -ಗೈಡ್ಸ್ ಸಂಸ್ಥಾಪನಾ ದಿನಾಚರಣೆ

**ಮುಧೋಳ:** ಪರಿಸರ ಸಂರಕ್ಷಣೆ ಪ್ರತಿಯೊಬ್ಬರ ಆದ್ಯ ಕರ್ತವ್ಯವಾಗಿದೆ. ಉತ್ತಮ ಆರೋಗ್ಯ ವೃದ್ಧಿಸಿಕೊಳ್ಳಲು ಶುದ್ಧ ವಾತಾವರಣ ಬೇಕಾಗುತ್ತದೆ. ಪರಿಶುದ್ಧ ಗಾಳಿ, ವಾತಾವರಣ ಸೃಷ್ಟಿಸಲು ಸಹಕಾರಿಯಾಗಿದ್ದು, ಸಸಿ ನೆಡುವುದರೊಂದಿಗೆ ಪರಿಸರ ಸಂರಕ್ಷಣೆ ಮಾಡಲು ಸಾಧ್ಯವಾಗುತ್ತದೆ ಎಂದು ಪ್ರೊ. ಎಂ.ಎಂ .ಹಿರೇಮಠ ಹೇಳಿದರು.



ಬಾಗಲಕೋಟೆ ಬಿ.ವಿ.ವಿ ಸಂಘದ ದಾನಮ್ಮದೇವಿ ಮಹಿಳಾ ಮಹಾವಿದ್ಯಾಲಯದಲ್ಲಿ ಭಾರತ ಸ್ಕೌಟ್ಸ್ & ಗೈಡ್ಸ್ ಆಶ್ರಯದಲ್ಲಿ ಭಾರತ್ ಸ್ಕೌಟ್ಸ್ ಮತ್ತು ಗೈಡ್ಸ್ ಸಂಸ್ಥಾಪನಾ ದಿನಾಚರಣೆಯ ಅಂಗವಾಗಿ ಹಮ್ಮಿಕೊಂಡ ಸಸಿ ನೆಡುವ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಕಾರ್ಯಕ್ರಮದಲ್ಲಿ ರೇಂಜರ್ ಲೀಡರ್ ಎ.ಸಿ. ಕೆರೂರ, ಉಪನ್ಯಾಸಕ ಎನ್.ಎನ್. ಬಾರಕೇರ, ಪ್ರೊ. ಎಸ್.ಎಸ್. ಗಂಜಿಹಾಳ ಹಾಗೂ ಮಹಾವಿದ್ಯಾಲಯದ ಇನ್ನುಳಿದ ಬೋಧಕ ವರ್ಗ ಇತರರಿದ್ದರು.

# ಮಾನವ ಕುಲ ಉದ್ದಾರವಾಗಲು ಮಹಾತ್ಮರ ಸಂದೇಶಗಳು ಅತ್ಯವಶ್ಯ



**ಬೈಲಹೊಂಗಲ–** ಹಸಿವಿಗೆ ಅನ್ನದ ಅಗತ್ಯತೆ ಇರುತ್ತದೆ. ಕಷ್ಟದಲ್ಲಿ ಕಳೆದು ಹೋಗಿರುವ ಮಾನವ ಕುಲಕ್ಕೆ ಮಹಾತ್ಮರ ದಿವ್ಯ ವಾಣಿಗಳು, ಗುರುವಿನ ಮಾರ್ಗದರ್ಶನ ಬೇಕಾಗಿದ್ದು ತಾಯಂದಿರು, ಯುವ ಸಮೂಹ, ಮಕ್ಕಳು ಟಿ.ವಿ.ಮೋಬೈಲ ಗೀಳಿನಿಂದ ದೂರವಿದ್ದು ಅಧ್ಯಾತ್ಮದ, ಬದುಕಿನ ಗುರಿಯತ್ತ ಸಾಗಬೇಕೆಂದು ಜಿ.ಪಂ.ಮಾಜಿ ಸದಸ್ಯೆ ರೋಹಿಣಿ ಪಾಟೀಲ ಹೇಳಿದರು.

ತಾಲೂಕಿನ ಸಂಪಗಾಂವ ಗ್ರಾಮದಲ್ಲಿ ಅರಭಾಂವಿ ಶ್ರೀ ದುರದುಂಡೇಶ್ವರ ನೂತನ ಶಾಖಾ ಮಠದ ಉದ್ಘಾಟನೆ, ಕಳಸಾರೋಹನ ನಿಮಿತ್ಯ ನಡೆದ ಪ್ರವಚನ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು. "ಸಂಪಗಾಂವ ಗ್ರಾಮಕ್ಕೆ ಬಹು ದೊಡ್ಡ್ ಇತಿಹಾಸವಿದೆ. ಇಲ್ಲಿಯ ಜನರು ಸುಸಂಸ್ಕೃತವಂತರು. ಶೂರರು ಸಹ ಆಗಿದ್ದಾರೆ. ಸ್ವಾತಂತ್ರ್ಯಕ್ಕೂ ದೊಡ್ಡ ಕೊಡುಗೆ ನೀಡಿದ್ದಾರೆ. ಇಂತವರ ಊರಲ್ಲಿ ಶ್ರೀ ಅರಭಾಂವಿ ದುರದುಂಡೇಶ್ವರ ಮಠದ ಅಜ್ಜನವರ ನೇತೃತ್ವದಲ್ಲಿ ನೂತ ನೂತನ ಶಾಖಾ ಮಠ ಉದ್ಘಾಟಣೆ ಆಗುತ್ತಿರುವದು ಸಂತಸ ತಂದಿದೆ. ಶ್ರೀ ಮಠದ ಏಳ್ಗೆಗೆ ನಾಡನ ಭಕ್ತರ ಪರವಾಗಿ ಶ್ರಮಿಸುವದಾಗಿ ತಿಳಿಸಿದರು.

ಮುಖ್ಯ ಅತಿಥಿಯಾಗಿ ಆಗಮಿಸಿದ ಆರ್‌ಇಎಸ್ ಸೊಸೈಟಿ ಚೇರ್ಮನ್ ಶಂಕರೆಪ್ಪ ಶಿದ್ನಾಳ, ಲಕ್ಷ್ಮೀ ಇನಾಮದಾರ, ಮಂಜುಳಾ ದೊಡಗೌಡರ, ಮಾತನಾಡಿ, ಸಂಪಗಾಂವ ಗ್ರಾಮದಲ್ಲಿ ಅಧ್ಯಾತ್ಮಿಕ ಚಟುವಟಿಕೆಗಳಿಗೆ ಶ್ರೀಮಠ ದೊಡ್ಡ್ ಕೊಡುಗೆ ನೀಡಲಿದ್ದು ಈ ಭಾಗದಲ್ಲಿ ಪ್ರಸಿದ್ದಿಯಾಗಬೇಕು, ಈಗಾಗಿ ಭಕ್ತರು ತನು, ಮನ, ಧನದಿಂದ ಸಹಾಯ–ಸಹಕಾರ ನೀಡಬೇಕೆಂದರು.

ಸಂಪಗಾಂವ ಕಟ್ಟಾಪೂರಿ ಮಠದ ಪೂಜ್ಯ ಚನ್ನವೀರ ಮಹಾಸ್ವಾಮೀಜಿ ಬೈಲಹೊಂಗಲದ ಶಾಖಾ ಮೂರುಸಾವಿರ ಮಠದ ಪ್ರಭುನೀಲಕಂಠ ಸ್ವಾಮೀಜಿ, ಕುಳವಳ್ಳಿ ಓಂ ಸುಕುಮಾರ ಯೋಗಾಶ್ರಮದ ಓಂ ಗುರೂಜಿ, ಸಾನಿಧ್ಯ ವಹಿಸಿ ಆಶೀರ್ವಚನ ನೀಡಿದರು.

ಬೂದಿಹಾಳದ ಶ್ರೀ ಗವಿಸಿದ್ದೇಶ್ವರ ಶಾಸ್ತ್ರೀಗಳು ಪ್ರವಚನ ನೀಡಿದರು. ಕಲಬುರ್ಗಿಯ ಅನಿಲಕುಮಾರ ಮಠಪತಿ, ಗದಗ ವೀರೇಶ್ವರ ಪುಣ್ಯಾಶ್ರಮದ ಭಿಮಾಶಂಕರ ಹೇಮನೂರ, ಸಂಗೀತ ಸೇವೆ ಸಲ್ಲಿಸಿದರು. ಮಲ್ಲಿಕಾರ್ಜುನ ಚವಲಗಿ ಸ್ವಾಗತಿಸಿದರು. ಮುಖ್ಯೋಧ್ಯಾಪಕ ಶ್ರೀಕಾಂತ ಉಳ್ಳೇಗಡ್ಡಿ ಪ್ರಸ್ತಾವಿಕ ಮಾತನಾಡಿದರು. ಬಸವರಾಜ ಚಿವಟಗುಂಡಿ ನಿರೂಪಿಸಿದರು. ಪ್ರಸಾದ ವ್ಯವಸ್ಥೆ ಕಲ್ಪಿಸಲಾಗಿತ್ತು.

# ಕಟ್ಟಡ ಅನುಮತಿ ನೀಡುವ ಕಚೇರಿಗಿಲ್ಲ 'ಸ್ವಂತ ಕಟ್ಟಡ'



**–ಮಲ್ಲಿಕಾರ್ಜುನ ತುಂಗಳ**

ರಬಕವಿ–ಬನಹಟ್ಟಿ,ನ8: ಕಳೆದ 3 ದಶಕಗಳಿಂದ ಕಾರ್ಯನಿರ್ವಹಿಸುತ್ತಿರುವ ನಗರ ಯೋಜನಾ ಪ್ರಾಧಿಕಾರವು ಸಾವಿರಾರು ಮನೆಗಳ ಕಟ್ಟಡಕ್ಕೆ ಅನುಮತಿ ನೀಡುತ್ತಿದೆ. ಇಷ್ಟೊಂದು ವರ್ಷಗಳು ಉರುಳಿದರೂ ಸ್ವಂತ ಕಟ್ಟಡವಿಲ್ಲದೆ ಬಾಡಿಗೆಯಲ್ಲಿಯೇ ನಿರ್ವಹಣೆ ಮಾಡುತ್ತಿರುವದು ಸೋಜಿಗದ ಸಂಗತಿ.

ರಬಕವಿ–ಬನಹಟ್ಟಿ ತಾಲೂಕಾ ಕೇಂದ್ರಕ್ಕೂ ಮುಂಚಿತವಾಗಿ ಕಾರ್ಯನಿರ್ವಹಿಸುತ್ತಿದೆ. ಈ ಮೊದಲು ಆರ್ಥಿಕ ಬದ್ಧತೆಯಿಂದ ಹೊರಗಿದ್ದ ಪ್ರಾಧಿಕಾರದ ಎಲ್ಲ ತೆರಿಗೆ, ಶುಲ್ಕಗಳನ್ನು ನಗರಸಭೆಯೇ ಭರಣಾ ಮಾಡಿಕೊಳ್ಳುತ್ತಿತ್ತು. ಕಳೆದ 2018 ರಿಂದ ಕಟ್ಟಡ ಅನುಮತಿ, ನೂತನ ಕೃಷಿಯೇತರ ಜಮೀನು ಪರಿವರ್ತನೆ ಸೇರಿದಂತೆ ಇತರೆ ಅನುಮತಿಗೆ ಬರುವ ತೆರಿಗೆ ಶುಲ್ಕವು ಪ್ರಾಧಿಕಾರ ಕಚೇರಿಯಲ್ಲಿಯೇ ಉಳಿಯುತ್ತಿದೆ. ಆದರೂ ಸ್ವಂತ ಕಟ್ಟಡಕ್ಕೆ ಅವಕಾಶವಿದ್ದರೂ ನಿರ್ಣಯಗೊಳ್ಳದಿರುವದು ವಿಪರ್ಯಾಸ.

ಹಣ ಮೀಸಲು: ಈಗಾಗಲೇ ಕಳೆದ 6 ವರ್ಷಗಳಿಂದ ನಗರ ಯೋಜನಾ ಪ್ರಾಧಿಕಾರದ ರಬಕವಿ–ಬನಹಟ್ಟಿ ವಿಭಾಗದ ಕಚೇ–ರಿಗೆ ಸಂಬಂಧಿಸಿದಂತೆ ಸುಮಾರು 1 ಕೋಟಿ ಮೇಲ್ಪಟ್ಟು ಹಣ ಮೀಸಲಿದೆ. ಕಾನೂನಾತ್ಮಕವಾಗಿ ಕಟ್ಟಡದ ಅನುಮತಿಗೆ ಬಳಕೆ ಮಾಡಿಕೊಳ್ಳಬೇಕಿದೆ.

ನಿವೇಶನಗಳಿವೆ: ಈ ಮೊದಲು ನಗರಸಭೆ ಅಧೀನಕ್ಕೆ ಒಳಪಡುತ್ತಿದ್ದ ಕೃಷಿಯೇತರ ಭೂಮಿ ಪರಿವರ್ತನೆಯಲ್ಲಿ ಸಾರ್ವಜನಿಕ ಅಥವಾ ಸಮುದಾಯ ಭವನ ಪ್ರದೇಶವು ಇದೀಗ ಪ್ರಾಧಿಕಾರ ಸುಪರ್ದಿಗೆ ಉಳಿದಿದ್ದು, ಉದ್ಯಾನವನ ಮತ್ತು ರಸ್ತೆ ಮಾತ್ರ ನಗರಸಭೆ ಸುಪರ್ದಿಗಿವೆ. ಪ್ರಾಧಿಕಾರಕ್ಕೆ ಸಂಬಂಧಿಸಿದಂತೆ ರಬಕವಿ–ಬನಹಟ್ಟಿ ಪಟ್ಟಣದಾದ್ಯಂತ 19 ಕಡೆಗಳಲ್ಲಿ ಪ್ರಾಧಿಕಾರದ ನಿವೇಶನಗಳಿದ್ದರೂ ಕಟ್ಟಡ ಮಾತ್ರವಿಲ್ಲ.

ವಯಸ್ಕರಿಗೆ ತೊಂದರೆ: ಈಗಾಗಲೇ ಖಾಸಗಿ ಕೊಠಡಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಪ್ರಾಧಿಕಾರ ಕಚೇರಿಯು ಮೇಲ್ಪಹಡಿಯಲ್ಲಿದ್ದು, ವಯೋವೃದ್ಧರಿಗೆ ಆಗಮಿಸಲು ಸಮಸ್ಯೆ ಎದುರಾಗುತ್ತಿದೆ.

ಕಚೇರಿಯಲ್ಲಿ ಸಿಬ್ಬಂದಿಗಳಿಲ್ಲ: ಸಹಾಯಕ ಅಥವಾ ಸದಸ್ಯ ಕಾರ್ಯದರ್ಶಿ ಹೊರತುಪಡಿಸಿ ಯಾವದೇ ಸಿಬ್ಬಂದಿಗಳು ಕಚೇರಿ ಕಾರ್ಯವ್ಯಾಪ್ತಿಯಲ್ಲಿಲ್ಲ. ಇದರಿಂದ ಇದೀಗ ಅಭಿವೃದ್ಧಿ ಹೊಂದುತ್ತಿರುವ ಪಟ್ಟಣದ ಕೆಲಸಗಳು ತೀವ್ರ ಹಿಂದುಳಿಯಲು ಕಾರಣವಾಗಿದ್ದು, ಶೀಘ್ರವೇ ಸಿಬ್ಬಂದಿಗಳ ನೇಮಕ ಅವಶ್ಯವಿದೆ.

'ಶೀಘ್ರವೇ ಕಟ್ಟಡ ನಿರ್ಮಾಣಕ್ಕೆ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗುವದು. ಸಿಬ್ಬಂದಿಗಳ ಬಗ್ಗೆ ಈಗಾಗಲೇ ಸರ್ಕಾರಕ್ಕೆ ಒತ್ತಾಯಿಸಿದೆ. ಪೂರಕ ಹುದ್ದೆಗಳಿಗೆ ಒದಗಿಸುವ ಭರವಸೆ ನೀಡಿದ್ದಾರೆ.'–

**–ವೆಂಕನಗೌಡ ಪಾಟೀಲ, ಅಧ್ಯಕ್ಷರು, ನಗರ ಯೋಜನಾ ಪ್ರಾಧಿಕಾರ, ರಬಕವಿ–ಬನಹಟ್ಟಿ.**

**ಪಟ್ಟಣ ಪಂಚಾಯತ ಕಾರ್ಯಾಲಯ, ಯಕ್ಸಂಬಾ**

ತಾ:ಚಿಕ್ಕೋಡಿ 08338–276982 ಜಿಲ್ಲಾ :ಬೆಳಗಾವಿ

Website: www.exambatown.mrc.gov.in E-mail: itstaff_ulb_examba@yahoo.com

ಕ್ರಸಂ:ಪ.ಪಂ.ಯ/ಟೆಂಡರ/15ನೇ ಹ.ಆ–2/2024–25 ದಿನಾಂಕ: 06.11.2024

**॥ಟೆಂಡರ ಪ್ರಕಟಣೆ॥**
**॥ಇ–ಪ್ರೋಕ್ಯೂರಮೆಂಟ್ ಮುಖಾಂತರ ಮಾತ್ರ॥**
**(ಕರ್ನಾಟಕ ಪಾರದರ್ಶಕ ಅಧಿನಿಯಮ 2000 ರನ್ವಯ)**

ಯಕ್ಸಂಬಾ ಪಟ್ಟಣಪಂಚಾಯತ ವ್ಯಾಪ್ತಿಯಲ್ಲಿ ಸನ್ 2020–21 ನೇ ಸಾಲಿ 15ನೇ ಹಣಕಾಸು ಅನುದಾನ ಮತ್ತು ಎಮ್.ಆರ್.ಅಫ್. ಪೇಸ್–2 (ಎಸ್.ಬಿ.ಎಮ್. 2.0) ಅನುದಾನದಡಿಯಲ್ಲಿ ಈ ಕೆಳಗೆ ವಿವರಿಸಿದ ಕಾಮಗಾರಿಗಳಿಗೆ ಲೋಕೋಪಯೋಗಿ/ಪಂಚಾಯತ ರಾಜಇಲಾಖೆಯಲ್ಲಿ ನೋಂದಾಯಿಸಲ್ಪಟ್ಟ ಅರ್ಹ ಸಿವ್ಹಿಲ್ ಗುತ್ತಿಗೆದಾರರಿಂದ ಕೆಡಬ್ಲ್ಯೂ–1 ಮತ್ತು ಕೆ.ಜಿ–1 ರ ಪ್ರಕಾರ ಟೆಂಡರನ್ನು ಆಹ್ವಾನಿಸಲಾಗಿದೆ.

| ಕಾಮಗಾರಿ ಹೆಸರು | ಅಂದಾಜು ಮೊತ್ತ (ಲಕ್ಷಗಳಲ್ಲಿ) | ಕಾಮಗಾರಿ ಇಂಡೆಂಟ್ ಸಂ | ಇಎಂಡಿ (ರೂ.ಗಳಲ್ಲಿ) | ಗುತ್ತಿಗೆದಾರರ ದರ್ಜೆ | ಕಾಲಮಿತಿ | ಮಿಸಲಾತಿ |
|---|---|---|---|---|---|---|
| 1 | 2 | 3 | 4 | 5 | 6 | 7 |
| ಸನ್ 2020–21 ನೇ ಸಾಲಿ 15ನೇ ಹಣಕಾಸು ಅನುದಾನದಡಿಯ ಕಾಮಗಾರಿಗಳು | | | | | | |
| Construction of Drain at ward no 13 Laxmi nagar of Examba TP | 4.10 | DMA/2024-25/OW/WORK_INDENT31835 | 10,500=00 | Civil Class III | 6 ತಿಂಗಳು | ಇತರೆ |
| ಎಮ್.ಆರ್.ಅಫ್. ಪೇಸ್–2 (ಎಸ್.ಬಿ.ಎಮ್. 2.0) ಅನುದಾನದಡಿಯ ಕಾಮಗಾರಿಗಳು | | | | | | |
| Construction of MRF Extention Phase-2 shed at TP Examba | 9.00 | DMA/2024-25/BD/WORK_INDENT31684 | 22,500=00 | Civil Class III | 6 ತಿಂಗಳು | ಇತರೆ |
| PVC Flat Belt Conveyor with wheels - 7620mm 25ft for secondary sorting | 7.20 | DMA/2024-25/IND3800 | 18,000=00 | ಅರ್ಹ ಪೂರೈಕೆದಾರರು | 3 ತಿಂಗಳು | ಇತರೆ |
| Semi electric stacker | 3.90 | DMA/2024-25/IND3802 | 9,750=00 | ಅರ್ಹ ಪೂರೈಕೆದಾರರು | 3 ತಿಂಗಳು | ಇತರೆ |

ಭರ್ತಿ ಮಾಡಿದ ಟೆಂಡರಗಳನ್ನು ಅಪ್‌ಲೋಡ್ ಮಾಡುವಕೊನೆಯ ದಿನಾಂಕ: 20/11/2024 ಸಾಯಂಕಾಲ 5.0 ಘಂಟೆಯವರೆಗೆ. ಟೆಂಡರಗಳನ್ನು ತೆರೆಯುವ ದಿನಾಂಕ: 22/11/2024 ರಂದು ಮದ್ಯಾಹ್ನ 11.00 ನಂತರ ತೆರೆಯಲಾಗುವುದು.

ಸಹಿ/–ಮುಖ್ಯಾಧಿಕಾರಿ
ಪಟ್ಟಣ ಪಂಚಾಯತ ಯಕ್ಸಂಬಾ

DIPR/BGM/RO-NO-1101/KSMCA/2024-25

ಸಹಿ/–ಅಧ್ಯಕ್ಷರು
ಪಟ್ಟಣ ಪಂಚಾಯತ ಯಕ್ಸಂಬಾ

BELAGINA SURYODHYA KANNADA DAILY MORNING Editor, Printer, PUblisher and Owned By GURURAJ IRAPPA KADAM Plot No.2743 NEAR KEB POWER HOUSE RAMTEERTH NAGAR, SHIVAJI NAGAR BELAGAVI-590016
DIST-BELAGAVI,STATE KARNATAKA PRINTED At M/S LAXMI PRINTERS, No. 627,Auto Nagar,Belagavi,Dist- Belagavi Karnataka, RNI No. KARKAN/2019/77640, Volume : 06, Issue : 230 Postal Reg No. PMG/KA/NK/BM/135/22-24 / POST AT Vantamury Colony Post Office